ಸಂಪುಟ: 05 ಸಂಚಿಕೆ: 95 ಪುಟಗಳು: 08 ಬುಧವಾರ 18 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸಾಕ್ಷಾಧಾರ ಇಲ್ಲದ ಯಾವುದನ್ನೂ ನಾನು ನಂಬೋದಿಲ್ಲ. ದೇವರನ್ನು ನಂಬೋದು ಬಿಡೋದು ಎಲ್ಲಾ ನಿರಪಯುಕ್ತ ಚರ್ಚೆ.

# ಸರ್ಕಾರ ಬೀಳೋದು ಗ್ಯಾರಂಟಿ... ಕಮಲ ಘಾಟಿ

**ಸಿಎಂ, ಡಿಸಿಎಂ ರಾಜೀನಾಮೆ ಕೊಡ್ಬೇಕು**

- ಬಿಜೆಪಿ ನಾಯಕರು ಪ್ರತಿಭಟನೆಯಂತಹ ಬೀದಿ ಪ್ರಹಸನ ಬಿಟ್ಟು ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಲಿ: ಸಿಎಂ
- ಕಾಲ್ತುಳಿತ ಪ್ರಕರಣದಲ್ಲಿ ಸರ್ಕಾರದ ವೈಫಲ್ಯ ಖಂಡಿಸಿ ಪ್ರತಿಭಟನೆ
- ಬಿಜೆಪಿ ನಾಯಕರನ್ನು ವಶಕ್ಕೆ ಪಡೆದ ಪೊಲೀಸರು
- ಜನರ ಸಾವಿನ ಶಾಪ ಸರ್ಕಾರಕ್ಕೆ ತಟ್ಟಲಿದೆ
- ಅಕ್ಟೋಬರ್ ತಿಂಗಳಲ್ಲೇ ಈ ಸರ್ಕಾರದ ಕಥೆ ಮುಗಿಯಲಿದೆ

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ತಂಡ ಗೆಲುವಿನ ಸಂಭ್ರಮಾಚರಣೆಯಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಕಾಂಗ್ರೆಸ್ ಸರ್ಕಾರದ ವೈಫಲ್ಯ ಖಂಡಿಸಿ ಮತ್ತು ಮುಖ್ಯಮಂತ್ರಿ, ಡಿಸಿಎಂ, ಗೃಹ ಸಚಿವರ ರಾಜೀನಾಮೆಗೆ ಒತ್ತಾಯಿಸಿ, ನಗರದ ಫ್ರೀಡಂ ಪಾರ್ಕ್‌ನಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆ ನಡೆಸಿತು. ಕಾಂಗ್ರೆಸ್ ಸರ್ಕಾರ ತನ್ನ ಪ್ರಚಾರದ ತೆವಲಿಗೆ ಸರಿಯಾದ ವ್ಯವಸ್ಥೆ ಮಾಡದೇ ಆತುರಾತುರವಾಗಿ ಕಾರ್ಯಕ್ರಮ ಮಾಡಿ ಅಮಾಯಕರ ಬಲಿ ಪಡೆದಿದೆ. ಈ ಸಾವುಗಳ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಗೃಹ ಸಚಿವರು ತಕ್ಷಣ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ನಾಯಕರು ಒಕ್ಕೊರಲಿನಿಂದ ಆಗ್ರಹಿಸಿದರು. ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ಸಿಎಂ ನಿವಾಸಕ್ಕೆ ಮುತ್ತಿಗೆ ಹಾಕಲು ತೀರ್ಮಾನಿಸಿದ್ದರು. ಫ್ರೀಡಂ ಪಾರ್ಕ್‌ನಲ್ಲೇ ಪೊಲೀಸರು, ಬಿಜೆಪಿ ನಾಯಕರನ್ನು ತಡೆದರು. ಈ ವೇಳೆ ನುಕುನುಗ್ಗಾಟ ನಡೆಯಿತು. ನಂತರ ಪ್ರತಿಭಟನಾಕಾರರನ್ನು ವಶಕ್ಕೆ ಪಡೆದ ಪೊಲೀಸರು, ಬಿಎಂಟಿಸಿ ಬಸ್‌ಗಳಲ್ಲಿ ಉಪ್ಪಾರಪೇಟೆ ಪೊಲೀಸ್ ಠಾಣೆಗೆ ಕರೆದೊಯ್ದರು. ಮುನ್ನ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರು ಮಾತನಾಡಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ಅಷ್ಟರಲ್ಲೇ ಮಳೆ ಬಂದ ಕಾರಣ ಪ್ರತಿಭಟನೆ ಅಲ್ಲಿಗೆ ಮೊಟಕುಗೊಂಡಿತು.

| | |
|---|---|
| 1 | ಹೆಣಗಳ ಮೇಲಿನ ರಾಜಕೀಯ ಬಿಜೆಪಿ ಪಾಲಿಗೆ ಹೊಸದೇನಲ್ಲ; ಸಿಎಂ |
| 2 | ಡಿಸಿಎಂ ಮಾತಿಗೆ ಬಿಜೆಪಿ ನಾಯಕರ ಕಿಡಿ |
| 3 | ಸರ್ಕಾರದ ವಿರುದ್ಧ ವಿಜಯೇಂದ್ರ ಕಿಡಿ |

**ಆತ್ಮಸಾಕ್ಷಿಗೆ ತಕ್ಕಂತೆ ನಡೆದುಕೊಳ್ಳಲಿ:** ಸ್ಟೇಡಿಯಂ ಬಳಿ ನಡೆದಿದ್ದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ನಮ್ಮ ರಾಜೀನಾಮೆ ಕೇಳುವ ಮೊದಲು ಇಂತಹದ್ದೇ ಅವಘಡಗಳು ನಡೆದಿದ್ದ ಸಂದರ್ಭದಲ್ಲಿ ರಾಜೀನಾಮೆ ನೀಡಿದ್ದ ಬಿಜೆಪಿ ನಾಯಕರ ಪಟ್ಟಿಯನ್ನು ಬಿಡುಗಡೆ ಮಾಡುವಂತೆ ರಾಜ್ಯದ ಬಿಜೆಪಿ ನಾಯಕರಿಗೆ ಸಿಎಂ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ. ಈ ಸಂಬಂಧ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಚಿನ್ನಸ್ವಾಮಿ ಸ್ಟೇಡಿಯಂ ಬಳಿ ನಡೆದಿರುವುದು ಒಂದು ಅಪಘಾತ. ಒಂದು ಜವಾಬ್ದಾರಿಯುತ ಸರ್ಕಾರವಾಗಿ ಆ ಘಟನೆಯ ಹೊಣೆಯನ್ನು ನಾವು ಹೊತ್ತಿದ್ದೇವೆ. ಬೆಂಗಳೂರು ನಗರ ಪೊಲೀಸ್ ಕಮಿಷನರ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿದ್ದೇವೆ, ರಾಜ್ಯ ಗುಪ್ತಚರ ಇಲಾಖೆಯ ಮುಖ್ಯಸ್ಥರನ್ನು ವರ್ಗಾವಣೆ ಮಾಡಿದ್ದೇವೆ. ನನ್ನ ರಾಜಕೀಯ ಕಾರ್ಯದರ್ಶಿಯನ್ನು ಸೇವೆಯಿಂದ ಬಿಡುಗಡೆಗೊಳಿಸಿದ್ದೇನೆ. ಈ ಪ್ರಕರಣದ ಸಮಗ್ರ ತನಿಖೆಗೆ ನಿವೃತ್ತ ನ್ಯಾಯಾಧೀಶರಾದ ಜಾನ್ ಮೈಕೆಲ್ ಕುನ್ಹಾ ಅವರ ನೇತೃತ್ವದಲ್ಲಿ ಏಕಸದಸ್ಯ ಆಯೋಗವನ್ನೂ ರಚಿಸಿದ್ದೇವೆ ಎಂದು ಅವರು ಹೇಳಿದ್ದಾರೆ.

**ಸಿಎಂ, ಡಿಸಿಎಂ ಇಮೇಜ್‌ಗೆ 11 ಬಲಿ:** ಮುಖ್ಯಮಂತ್ರಿಗಳ ಜನಪ್ರಿಯತೆ ಹೆಚ್ಚಿಸಲು ಮತ್ತು ಇಮೇಜ್ ವೃದ್ಧಿಗೆ ಆರ್‌ಸಿಬಿ ವಿಜಯೋತ್ಸವದ ಕಾರ್ಯಕ್ರಮ ಏರ್ಪಡಿಸಿದ್ದಾರೆ, 11 ಜನರ ಸಾವಿಗೆ ಕಾರಣವಾಗಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಕಾಲ್ತುಳಿತ ಪ್ರಕರಣದಲ್ಲಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಗೃಹ ಸಚಿವರ ರಾಜೀನಾಮೆಗೆ ಒತ್ತಾಯಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂದು ಬಿಜೆಪಿ ವತಿಯಿಂದ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮುಖ್ಯಮಂತ್ರಿಯವರು ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಕಾರ್ಯಕ್ರಮ ನಡೆಸಿದ್ದಾರೆ. ಮುಖ್ಯಮಂತ್ರಿ - ಉಪ ಮುಖ್ಯಮಂತ್ರಿಗಳ ನಡುವಿನ ಪೈಪೋಟಿ, ಹುಚ್ಚಾಟದಿಂದ 11 ಜನ ಅಮಾಯಕರು ಸಾವನ್ನಪ್ಪಿದ್ದಾರೆ ಎಂದು ಆಕ್ಷೇಪಿಸಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಡಿಸಿಎಂ ಡಾ.ಸಿ.ಎನ್. ಅಶ್ವತ್ಥನಾರಾಯಣ, ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ರವಿಕುಮಾರ್, ವಿಧಾನಸಭಾ ವಿರೋಧ ಪಕ್ಷದ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್, ಸೇರಿದಂತೆ ಪಕ್ಷದ ಶಾಸಕರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಪಕ್ಷದ ಪ್ರಮುಖರು, ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸಿದ್ದರು.

**ಬಿಜೆಪಿ ವಿರುದ್ಧ ಆಕ್ರೋಶ**

ಇಷ್ಟೆಲ್ಲ ಕ್ರಮಕೈಗೊಂಡ ನಂತರವೂ ರಾಜ್ಯದ ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿರುವುದು ರಾಜಕೀಯ ದುರುದ್ದೇಶದಿಂದ ಹೊರತು ಜನರ ಬಗೆಗಿನ ಕಾಳಜಿಯಿಂದ ಅಲ್ಲ ಎನ್ನುವುದು ಸ್ಪಷ್ಟವಾಗಿದೆ. ಹೆಣಗಳ ಮೇಲಿನ ರಾಜಕೀಯ ಬಿಜೆಪಿ ಪಾಲಿಗೆ ಹೊಸದೇನಲ್ಲ. ಅಪಘಾತ, ಹತ್ಯೆ, ದೌರ್ಜನ್ಯಗಳು ನಡೆದ ತಕ್ಷಣ ಸತ್ತ ಜೀವಗಳನ್ನು ಹುಡುಕಿಕೊಂಡು ಹೋಗುವ ರಣಹದ್ದುಗಳಂತೆ ಎರಗಿ ಬೀಳುವುದು ಬಿಜೆಪಿಯ ರಕ್ತದಲ್ಲಿಯೇ ಇದೆ. ತಮ್ಮ ಊಟದೆಲೆಯ ಮೇಲೆ ಆನೆ ಸತ್ತುಬಿದ್ದಿದ್ದರೂ ಎದುರಿಗಿದ್ದವರ ಎಲೆ ಮೇಲೆ ಸತ್ತು ಬಿದ್ದ ನೊಣದ ಕಡೆ ಬೊಟ್ಟುಮಾಡುವುದು ಬಿಜೆಪಿಯ ಹಳೆಯ ಚಾಳಿ ಎನ್ನುವುದನ್ನು ರಾಜ್ಯದ ಜನತೆ ಅರ್ಥಮಾಡಿಕೊಂಡಿದ್ದಾರೆ ಎಂದರು.





**ಸಾವಿಗೀಡಾದ ಕುಟುಂಬಗಳ ನೋವು ಅರ್ಥ ಮಾಡಿಕೊಂಡಿದ್ದೇವೆ**

ಪ್ರತಿಯೊಂದು ಅಪಘಾತದ ಹಿಂದೆ ಸಾವು - ನೋವಿಗೀಡಾದವರ ಕುಟುಂಬದ ದು:ಖ ಮತ್ತು ಸಂಕಟ ಇರುವುದನ್ನು ನಾವು ಅರ್ಥಮಾಡಿಕೊಂಡಿದ್ದೇವೆ. ಇದೇ ಕಾರಣಕ್ಕಾಗಿ ನಾವು ಇಂತಹ ಪ್ರಕರಣಗಳನ್ನು ರಾಜಕೀಯಕ್ಕೆ ಬಳಸುವುದಿಲ್ಲ. ಹೀಗಿದ್ದರೂ ರಾಜ್ಯದ ಬಿಜೆಪಿ ನಾಯಕರು ಮತ್ತೆ ಮತ್ತೆ ಇಂತಹ ಪ್ರಕರಣಗಳನ್ನು ಕೆದಕಿ ಕೆದಕಿ ಜನರನ್ನು ಪ್ರಚೋದಿಸುತ್ತಿರುವ ಹಿನ್ನೆಲೆಯಲ್ಲಿ ಇವರ ಆತ್ಮವಂಚಕ ನಡವಳಿಕೆಯನ್ನು ಬಯಲು ಮಾಡುವ ಉದ್ದೇಶದಿಂದ ಬಿಜೆಪಿ ಆಡಳಿತದಲ್ಲಿನ ಕೆಲವು ಪ್ರಕರಣಗಳನ್ನು ರಾಜ್ಯದ ಜನತೆಯ ಗಮನಕ್ಕೆ ತರಲು ಇಷ್ಟಪಡುತ್ತೇನೆ ಎಂದಿದ್ದಾರೆ. 2002ರಲ್ಲಿ ಗುಜರಾತ್ ರಾಜ್ಯದಲ್ಲಿ ನಡೆದ ಹತ್ಯಾಕಾಂಡದಲ್ಲಿ ಎಲ್ಲಾ ಧರ್ಮಗಳಿಗೆ ಸೇರಿದ್ದ ಅಂದಾಜು ಎರಡು ಸಾವಿರ ಅಮಾಯಕರು ಪ್ರಾಣ ಕಳೆದುಕೊಂಡರು.



**ಮಣಿಪುರದಲ್ಲಿ ಇನ್ನೂ ಹಿಂಸೆ ನಿಂತಿಲ್ಲ**

ಕಳೆದ ಎರಡು ವರ್ಷಗಳಿಂದ ದೇಶದ ಈಶಾನ್ಯ ಭಾಗದ ಮಣಿಪುರ ಹಿಂಸೆಯ ಬೆಂಕಿಯಲ್ಲಿ ಹೊತ್ತಿ ಉರಿಯುತ್ತಿದೆ. ನೂರಾರು ಮಂದಿ ಸಾವಿಗೀಡಾಗಿದ್ದಾರೆ. ಹೀಗಿದ್ದರೂ ಆ ರಾಜ್ಯದ ಬಿಜೆಪಿ ಮುಖ್ಯಮಂತ್ರಿ ಬಿರೇನ್ ಸಿಂಗ್ 20 ತಿಂಗಳ ಕಾಲ ಕುರ್ಚಿಗೆ ಅಂಟಿಕೂತಿದ್ದರು. ಸುಪ್ರೀಂಕೋರ್ಟ್ ಚಾಟಿ ಬೀಸಿದ ನಂತರ ರಾಜೀನಾಮೆ ನೀಡಿದ್ದರು. ಈಗಲೂ ಅಲ್ಲಿ ಹಿಂಸಾಚಾರ ಮುಂದುವರಿದಿದೆ. ಇದರ ಹೊಣೆಯನ್ನು ಕೇಂದ್ರ ಗೃಹಸಚಿವರು ಹೊರುವುದು ಬೇಡವೇ... ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದ್ದಾರೆ. ಗುಜರಾತ್‌ನ ಮೋರ್ಬಿ ಸೇತುವೆ ಕುಸಿದು ಬಿದ್ದು 140 ಮಂದಿ ಮೃತಪಟ್ಟಿದ್ದರು. ಜ.ತಿಂಗಳಲ್ಲಿ ಮಹಾಕುಂಭಮೇಳದದಲ್ಲಿ 30 ಯಾತ್ರಿಕರು ಪ್ರಾಣ ಕಳೆದುಕೊಂಡರು.

## ಬಂಧನ ಭೀತಿಯಲ್ಲಿ ಲೋಕಾಯುಕ್ತ ಎಸ್‌ಪಿ ಶ್ರೀನಾಥ್ ಜೋಶಿ

• ಉದಯವಾಹಿನಿ, ಬೆಂಗಳೂರು

ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಬೆದರಿಕೆಯೊಡ್ಡಿ ಹಣ ಸುಲಿಗೆ ಮಾಡಿದ ಪ್ರಕರಣದಲ್ಲಿ ಜೈಲು ಸೇರಿರುವ ನಿಂಗಪ್ಪನ ಜತೆ ನಂಟು ಹೊಂದಿರುವ ಆರೋಪ ಎದುರಿಸುತ್ತಿರುವ ಐಪಿಎಸ್ ಅಧಿಕಾರಿ ಶ್ರೀನಾಥ್ ಮಹದೇವ ಜೋಶಿ ಅವರಿಗೆ ಬಂಧನ ಭೀತಿ ಎದುರಾಗಿದೆ. ಈ ಬೆನ್ನಲ್ಲೇ ನಿರೀಕ್ಷಣಾ ಜಾಮೀನು ಕೋರಿ ಲೋಕಾಯುಕ್ತ ವಿಶೇಷ ನ್ಯಾಯಾಲಯದ ಮೊರೆ ಹೋಗಿದ್ದಾರೆ. ಐಪಿಎಸ್ ಅಧಿಕಾರಿ ಶ್ರೀನಾಥ್ ಜೋಶಿ ಸಲ್ಲಿಸಿರುವ ನಿರೀಕ್ಷಣಾ ಜಾಮೀನು ಅರ್ಜಿ ನ್ಯಾಯಾಲಯದಲ್ಲಿ ಇನ್ನಷ್ಟೇ ವಿಚಾರಣೆಗೆ ಬರಬೇಕಿದೆ ಎಂದು ಲೋಕಾಯುಕ್ತದ ವಿಶ್ವಸನೀಯ ಮೂಲಗಳು ತಿಳಿಸಿವೆ. ಸುಲಿಗೆ ಕೃತ್ಯದಲ್ಲಿ ಬಂಧಿತನಾಗಿರುವ ಚಿತ್ರದುರ್ಗದ ಮಾಜಿ ಹೆಡ್‌ಕಾನ್ಸ್‌ಟೇಬಲ್ ಜಿ ನಿಂಗಪ್ಪ ಅಲಿಯಾಸ್ ನಿಂಗಪ್ಪ ಸಾವಂತನ ಮೊಬೈಲ್ ಪರಿಶೀಲನೆ ವೇಳೆ ಬೆಂಗಳೂರು ಲೋಕಾಯುಕ್ತ ಘಟಕದ ಎಸ್ಪಿ-1 ಆಗಿದ್ದ ಶ್ರೀನಾಥ್ ಜೋಶಿ ಸಂಪರ್ಕ ಇರುವುದು ಪತ್ತೆಯಾಗಿತ್ತು. ಈ ಬೆನ್ನಲ್ಲೇ ಶ್ರೀನಾಥ ಜೋಶಿ ಅವರನ್ನು ಲೋಕಾಯುಕ್ತ ಸೇವೆಯಿಂದ ಜೂನ್ 11ರಂದು ಬಿಡುಗಡೆಗೊಳಿಸಲಾಗಿತ್ತು.

## ಇದೇ ಮೊದಲ ಬಾರಿಗೆ ಕರ್ನಾಟಕ ಸರ್ಕಾರ 2 ಐತಿಹಾಸಿಕ ಕಾರ್ಯಕ್ರಮ

• ಉದಯವಾಹಿನಿ, ನವದೆಹಲಿ

ಜೂನ್ 21 ರಂದು ವಿಶ್ವಯೋಗ ದಿನಾಚರಣೆಯ ಅಂಗವಾಗಿ ರಾಜ್ಯದಲ್ಲಿ ಯೋಗ ಸಂಗಮ ವಿಶೇಷ ಕಾರ್ಯಕ್ರಮವನ್ನ ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. , 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯಂದು ರಾಜ್ಯಾದಾದ್ಯಂತ 5 ಲಕ್ಷ ಜನರು ಯೋಗಭ್ಯಾಸ ನಡೆಸಲು ರಾಜ್ಯ ಸರ್ಕಾರ ಅನುವು ಮಾಡಿಕೊಡುತ್ತಿದೆ ಎಂದರು. ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಈ ಬಾರಿಯ ವಿಶ್ವಯೋಗ ದಿನಾಚರಣೆಯನ್ನ ಆಚರಿಸಲಾಗುವುದು. ಜೂನ್ 21 ರ ಮುಂಜಾನೆ 6 ಗಂಟೆಯಿಂದ 8 ಗಂಟೆಯವರೆಗೆ 5,000 ಜನರು ವಿಧಾನ ಸೌಧದ ಮೆಟ್ಟಿಲುಗಳ ಎದುರು ಯೋಗಾಭ್ಯಾಸ ನಡೆಸಲಿದ್ದು, ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ಸೇರಿದಂತೆ ಶಾಸಕರು, ಸಂಸದರು, ಕ್ರೀಡಾಪಟುಗಳು, ತಾರೆಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

## ರೇಷನ್ ಕಾರ್ಡ್ ಇ ಕೆವೈಸಿ ಕಡ್ಡಾಯ ಕೊನೆಯ ದಿನ ಯಾವಾಗ?

• ಉದಯವಾಹಿನಿ, ಬೆಂಗಳೂರು

ರೇಷನ್ ಕಾರ್ಡ್ ಹೊಂದಿರುವ ಸದಸ್ಯರ ಇ ಕೆವೈಸಿಯನ್ನು ಶೀಘ್ರವಾಗಿ ಶೇಕಡಾ 100 ರಷ್ಟನ್ನು ಸಂಪೂರ್ಣಗೊಳಿಸಬೇಕಾಗಿರುವುದರಿಂದ ಎಲ್ಲಾ ರೇಷನ್ ಕಾರ್ಡ್‌ದಾರರು ಜೂನ್ 30 ರೊಳಗೆ ನ್ಯಾಯಬೆಲೆ ಅಂಗಡಿಗೆ ತೆರಳಿ ಕಡ್ಡಾಯವಾಗಿ ಇ ಕೆವೈಸಿ ಮಾಡಿಸಬೇಕು ಎಂದು ಆಹಾರ ಇಲಾಖೆ ಸೂಚನೆ ನೀಡಿದೆ. ಇ ಕೆವೈಸಿ ಮಾಡಲು ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರು ಊರಲ್ಲಿ ಇಲ್ಲದೆ ಇದ್ದ ಪಕ್ಷದಲ್ಲಿ ಪಡಿತರ ಚೀಟಿಯ ಸಂಖ್ಯೆ, ಆಧಾರ್ ಕಾರ್ಡ್ ದೊಂದಿಗೆ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆ ತಾಲ್ಲೂಕು ಗ್ರಾಮದಲ್ಲಿರುವ ನ್ಯಾಯಬೆಲೆ ಅಂಗಡಿಯಲ್ಲಿ ಇ ಕೆವೈಸಿ ಮಾಡಿಕೊಳ್ಳಸಿಕೊಳ್ಳಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿರುತ್ತಾರೆ. ನಾನಾ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ, ಸರಕಾರಿ ಪಡಿತರ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಘಟಕದಿಂದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿ, ಜಿಲ್ಲಾಡಳಿತದ ಮೂಲಕ ರಾಜ್ಯ ಹಾಗೂ ಕೇಂದ್ರ ಸರಕಾರಕ್ಕೆ ಮನವಿ ರವಾನಿಸಲಾಯಿತು.

## ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರ ಬಹುತೇಕ ಅಂತಿಮ: ಅಮಿತ್ ಶಾ

• ಉದಯವಾಹಿನಿ, ಬೆಂಗಳೂರು

ಅಂತೂ ಇಂತೂ ಮಾಜಿ ಸಿಎಂ ಯಡಿಯೂರಪ್ಪನವರ ಪುತ್ರ ಬಿವೈ ವಿಜಯೇಂದ್ರ ಅವರು ಕರ್ನಾಟಕ ಬಿಜೆಪಿ ಘಟಕದ ಅಧ್ಯಕ್ಷರಾಗಿ ಮುಂದುವರಿಯುವುದು ಬಹುತೇಕ ಪಕ್ಕಾ ಆಗಿದೆ. ಸದ್ಯದ ಮಾಹಿತಿಯ ಪ್ರಕಾರ, ಎಲ್ಲವೂ ವಿಜಯೇಂದ್ರ ಅಂದುಕೊಂಡಂತೆ ಆದರೆ, ತಿಂಗಳಾಂತ್ಯದೊಳಗೆ ಅಧಿಕೃತವಾಗಿ ಘೋಷಣೆಯಾಗಬಹುದು. ಕರ್ನಾಟಕದ ಎಲ್ಲಾ 39 (ಬಿಜೆಪಿಯ ಸಂಘಟನಾತ್ಮಕ ಜಿಲ್ಲೆಗಳು) ಜಿಲ್ಲೆಗಳಿಗೆ ಅಧ್ಯಕ್ಷರ ನೇಮಕ ಪ್ರಕ್ರಿಯೆ ಮುಕ್ತಾಯಗೊಂಡಿದೆ. ಆ ಮೂಲಕ, ಜಿಲ್ಲಾಧ್ಯಕ್ಷರ ಆಯ್ಕೆಯಲ್ಲಿ ವಿಜಯೇಂದ್ರ ಸ್ಪಷ್ಟ ಮೇಲುಗೈ ಸಾಧಿಸಿದ್ದಾರೆ. ರಾಜ್ಯಾಧ್ಯಕ್ಷರ ನೇಮಕಕ್ಕೆ ಇದು ಬಹುಮುಖ್ಯವಾದ ಪ್ರಕ್ರಿಯೆಯಾಗಿದೆ. ಮೂಲಗಳ ಪ್ರಕಾರ, ಕೇಂದ್ರ ಗೃಹ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕರ್ನಾಟಕಕ್ಕೆ ಬಂದು ಅಧಿಕೃತ ಘೋಷಣೆಯನ್ನು ಮಾಡಲಿದ್ದಾರೆ. ದಕ್ಷಿಣದ ರಾಜ್ಯದಲ್ಲಿ ಬಿಜೆಪಿ ಬಲಿಷ್ಠ ಎಂದು ಇರುವುದು ಕರ್ನಾಟಕದಲ್ಲಿ. ಹಾಗಾಗಿ, ಇರುವ ಹಿಡಿತವನ್ನು ಕಳೆದುಕೊಳ್ಳಲು ಅಮಿತ್ ಶಾ ಸಿದ್ದರಿಲ್ಲ.


# ದಕ್ಷಿಣ ಕನ್ನಡ, ಹಾಸನ ಸೇರಿ 4 ಜಿಲ್ಲೆಗಳ ಜಿಲ್ಲಾಧಿಕಾರಿಗಳ ವರ್ಗಾವಣೆ

## ಹೊಸಬರ ನೇಮಕ ಮಾಡಿ ಸರ್ಕಾರ ಆದೇಶ; ದರ್ಶನ್ ಎಚ್‌ವಿ ಮಂಗಳೂರಿನ ಹೊಸ ಡಿಸಿ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ, ಹಾಸನ, ಕೊಪ್ಪಳ ಹಾಗೂ ಬಾಗಲಕೋಟೆಯ ಜಿಲ್ಲಾಧಿಕಾರಿಗಳು ಹಾಗೂ ಕೆಲವೆಡೆ ಜಿಲ್ಲಾ ಪಂಚಾಯಿತಿ ಸಿಇಒಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಮಾಡಿದೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ. ಅವರ ಸ್ಥಾನಕ್ಕೆ 2016ರ ಬ್ಯಾಚಿನ ಐಎಎಸ್ ಅಧಿಕಾರಿ ದರ್ಶನ್ ಎಚ್.ವಿ. ಅವರನ್ನು ನಿಯುಕ್ತಿ ಮಾಡಲಾಗಿದೆ. ದರ್ಶನ್, ಬೆಂಗಳೂರು ವಾಣಿಜ್ಯ ತೆರಿಗೆಗಳ ಹೆಚ್ಚುವರಿ ಆಯುಕ್ತರಾಗಿದ್ದರು.

ಮುಲ್ಲೈ ಮುಗಿಲನ್ ಇಂದಿಗೆ ಎರಡು ವರ್ಷಗಳ ಹಿಂದೆ 2023ರ ಜೂನ್ 17 ರಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯಾಗಿ ನಿಯುಕ್ತಿಗೊಂಡಿದ್ದರು. ಅವರನ್ನು ಬೆಂಗಳೂರಿನ ಇನ್‌ಸ್ಪೆಕ್ಟರ್ ಜನರಲ್ ಆಫ್ ರೆಜಿಸ್ಟ್ರೇಷನ್ ಮತ್ತು ಕಮೀಷನರ್ ಆಫ್ ಸ್ಟ್ಯಾಂಪ್ಸ್



ಹುದ್ದೆಗೆ ನೇಮಕ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.

**ಹಾಸನ ಡಿಸಿ ಸತ್ಯಭಾಮ ವರ್ಗಾವಣೆ'** ಹಾಸನ ಜಿಲ್ಲೆ, ಜಿಲ್ಲಾಧಿಕಾರಿ ಸಿ.ಸತ್ಯಭಾಮ ವರ್ಗಾವಣೆ ಮಾಡಿ ಸರಕಾರ ಆದೇಶ ಹೊರಡಿಸಿದೆ. ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಲತಾಕುಮಾರಿ.ಕೆ.ಎಸ್. ನೇಮಕ ಮಾಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಿಇಓ ಆಗಿದ್ದ ಲತಾಕುಮಾರಿಯವರನ್ನು ಹಾಸನ ಡಿಸಿಯಾಗಿ ವರ್ಗಾಯಿಸಲಾಗಿದೆ. ಬೆಂಗಳೂರಿನ ಸಮಗ್ರ ಶಿಕ್ಷಣ ರಾಜ್ಯ ಯೋಜನಾ ನಿರ್ದೇಶಕರಾಗಿ ಸಿ.ಸತ್ಯಭಾಮ ಅವರನ್ನು ವರ್ಗಾವಣೆ ಮಾಡಲಾಗಿದೆ.

**ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ ವರ್ಗಾವಣೆ:** ಐಎಎಸ್ ಅಧಿಕಾರಿಗಳನ್ನು ಮಂಗಳವಾರ ವರ್ಗಾವಣೆಗೊಳಿಸಲಾಗಿದ್ದು, ಜಿಲ್ಲಾಧಿಕಾರಿ ಕೆ.ಎಂ.ಜಾನಕಿ ವರ್ಗಾವಣೆಗೊಂಡಿದ್ದಾರೆ. ಕಳೆದ ಎರಡು ವರ್ಷಗಳಿಂದ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಜಾನಕಿ ಅವರನ್ನು ಬೆಂಗಳೂರಿನ ಕೆಪಿಎಸ್‌ಸಿ ಕಾರ್ಯದರ್ಶಿಯಾಗಿ ನೇಮಕಗೊಳಿಸಲಾಗಿದೆ. ಸ್ಥಳ ನಿರೀಕ್ಷೆಯಲ್ಲಿದ್ದ ಐಎಎಸ್ ಅಧಿಕಾರಿ ಸಂಗಪ್ಪ ಅವರನ್ನು ನೂತನ ಜಿಲ್ಲಾಧಿಕಾರಿಯಾಗಿ ನೇಮಕಗೊಳಿಸಿ ಆದೇಶ ಹೊರಡಿಸಲಾಗಿದೆ.

**ಕೊಪ್ಪಳ ಡಿಸಿ, ಸಿಇಒ ವರ್ಗಾವಣೆ:** ಕೊಪ್ಪಳ ಜಿಲ್ಲೆಯ ಜಿಲ್ಲಾಧಿಕಾರಿಯಾಗಿದ್ದ ನಲೀನ್ ಅತುಲ್ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಯಾಗಿದ್ದ ರಾಹುಲ್ ರತ್ನಂ ಪಾಂಡೆಯ ಅವರನ್ನು ವರ್ಗಾವಣೆಗೊಳಿಸಿ ಮಂಗಳವಾರ ಸರಕಾರ ಆದೇಶ ಹೊರಡಿಸಿದೆ. ಡಿಸಿ ಜಾಗಕ್ಕೆ ದಾವಣಗೆರೆ ಜಿಲ್ಲಾ ಪಂಚಾಯಿತಿ ಸಿಇಒ ಆಗಿದ್ದ ಸುರೇಶ ಹಿಟ್ನಾಳ್ ಅವರನ್ನು ನೇಮಕ ಮಾಡಲಾಗಿದೆ. ಜಿಪಂ ಸಿಇಒ ರಾಹುಲ್ ರತ್ನಂ ಪಾಂಡೆಯ ಅವರ ಜಾಗಕ್ಕೆ ಕರ್ನಾಟಕ ಕೈ ಮಗ್ಗ ಮತ್ತು ಜವಳಿ ಇಲಾಖೆಯ ನಿರ್ದೇಶಕರಾಗಿದ್ದ ವರ್ಣಿತ ನೇಗಿ ಅವರನ್ನು ನೇಮಕ ಮಾಡಲಾಗಿದೆ.

# ಕರಾವಳಿ, ಮಲೆನಾಡಿಗೆ ಭೂಕುಸಿತ-ಪ್ರವಾಹದ ಮುನ್ನೆಚ್ಚರಿಕೆಗೆ ರೆಡ್ ಅಲರ್ಟ್

## ಗುಡುಗು, ಬಿರುಗಾಳಿಯೊಂದಿಗೆ ಹೆಚ್ಚಾದ ವರುಣಾರ್ಭಟ ▸ ಅಪಾಯಕಾರಿ ಮಟ್ಟದಲ್ಲಿ ಮಳೆ, ಪ್ರವಾಹ-ಭೂಕುಸಿತದ ಮುನ್ನೆಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಕರಾವಳಿ, ಮಲೆನಾಡು ಜಿಲ್ಲೆಗಳಲ್ಲಿ ಕುಂಭದ್ರೋಣ ಮಳೆಯಾಗುತ್ತಿದೆ. ಕಳೆದ ನಾಲ್ಕೈದು ದಿನಗಳಿಂದ ನಿರಂತರ ಮಳೆಯಾಗುತ್ತಿರುವ ಪರಿಣಾಮ ಈಗಾಗಲೇ ಹಲವೆಡೆ ಭೂಕುಸಿತ ಆಗಿದ್ದು, ಭಾರೀ ಮಳೆ ಮುಂದುವರಿಯುವುದರಿಂದ ಪ್ರವಾಹ-ಭೂಕುಸಿತ ವಿಪತ್ತುಗಳು ಉಂಟಾಗಬಹುದು ಎಂದು 6 ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ. ರಾಜ್ಯದ ಕರಾವಳಿ, ಮಲೆನಾಡು ಸೇರಿದಂತೆ ಉತ್ತರ ಕರ್ನಾಟಕದ ಧಾರವಾಡ, ಹಾವೇರಿಯಲ್ಲಿ ಸೋಮವಾರವೂ ರಾತ್ರಿಯಿಡೀ ಧಾರಾಕಾರ ಮಳೆಯಾಗಿದೆ. ಮಧ್ಯಾಹ್ನವಾದರೂ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಮಳೆ ಆರ್ಭಟಿಸುತ್ತಿದೆ. ಇಂದು ಕೂಡಾ ಅತ್ಯಂತ ಭಾರೀ ಮಳೆಯ ಕಾರಣ ರೆಡ್ ಅಲರ್ಟ್ ಕೊಡಲಾಗಿದೆ.

ಅರಬ್ಬೀ ಸಮುದ್ರದ ಕೊಂಕಣ ಕರಾವಳಿಯಲ್ಲಿ ಸರ್ಕ್ಯುಲೇಷನ್ ಇರುವುದರಿಂದ ಜೂನ್ 20 ರವರೆಗೂ ಕರಾವಳಿಯ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡಕ್ಕೆ ಭಾರೀ ಮಳೆ ಮುನ್ಸೂಚನೆ ಇದೆ ಎಂದು ಹವಾಮಾನ ವಿಜ್ಞಾನಿ ಸಿಎಸ್ ಪಾಟೀಲ್ ಹೇಳಿದ್ದಾರೆ.

**ಜೂನ್ 21 ರವರೆಗೂ ಕರಾವಳಿಗೆ ಮಳೆ:** ಪಶ್ಚಿಮ ದಿಕ್ಕಿನಿಂದ ಕರ್ನಾಟಕಕ್ಕೆ ಬಲವಾದ ಗಾಳಿ ಬೀಸುತ್ತಿರುವ ಹಿನ್ನೆಲೆ ಮಂಗಳವಾರ ದಿಂದ ಜೂನ್ 21 ರವರೆಗೆ ಕರಾವಳಿ ಜಿಲ್ಲೆಗಳಿಗೆ ವ್ಯಾಪಕ ಮಳೆಯಾಗಲಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರಿಗೆ ಅತ್ಯಂತ ಭಾರೀ ಮಳೆಯಾಗಲಿದ್ದು, ಜೂನ್ 18ಕ್ಕೆ ಆರೆಂಜ್ ಅಲರ್ಟ್ ಕೊಡಲಾಗಿದೆ. ಬೆಂಗಳೂರಲ್ಲಿ ಇಂದು ಮತ್ತು ನಾಳೆ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದಿದ್ದಾರೆ.

**ಇಂದು ಎಲ್ಲೆಲ್ಲಿ ಮಳೆ?:** ಮಂಗಳವಾರ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು ಹಾಗೂ ಶಿವಮೊಗ್ಗದಲ್ಲಿ ಅತ್ಯಂತ ಭಾರೀ ಮಳೆಯ ಹಿನ್ನೆಲೆ ಈ 5 ಜಿಲ್ಲೆಗಳಿಗೆ ರೆಡ್ ಅಲರ್ಟ್ ಕೊಡಲಾಗಿದೆ. ಕೊಡಗು, ಹಾಸನ, ಬೆಳಗಾವಿಗೆ ಆರೆಂಜ್ ಅಲರ್ಟ್ ಕೊಡಲಾಗಿದೆ. ಇನ್ನು ಮೈಸೂರು, ಧಾರವಾಡ, ಹಾವೇರಿಗೆ ಯೆಲ್ಲೋ ಅಲರ್ಟ್ ಕೊಡಲಾಗಿದ್ದು, ಈ ಜಿಲ್ಲೆಗಳಿಗೆ ಭಾರಿ ಮಳೆಯಾಗಲಿದೆ.

**ಜೂನ್ 19 ರಿಂದ ಮಳೆ ಕ್ಷೀಣ:** ಜೂನ್ 19 ಗುರುವಾರದಂದು ಕರಾವಳಿಯ 3 ಜಿಲ್ಲೆಗಳಿಗೆ , ಬೆಳಗಾವಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಕೊಡಲಾಗಿದೆ.

ಉಳಿದ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ. ಜೂನ್ 20 ರಿಂದ ಯಾವುದೇ ಜಿಲ್ಲೆಗಳಿಗೆ ಮಳೆ ಅಲರ್ಟ್ ಇಲ್ಲ.

**ಹೇಮೆಗೆ ನೀರು:** ಚಿಕ್ಕಮಗಳೂರು ಭಾಗದಲ್ಲಿ ಭಾರಿ ಮಳೆ ಹಿನ್ನೆಲೆಯಲ್ಲಿ ಜಿಲ್ಲೆಯ ಗೊರೂರಿನ ಹೇಮಾವತಿ ಜಲಾಶಯಕ್ಕೆ 6,549 ಕ್ಯುಸೆಕ್ ಒಳ ಹರಿವು ಇದೆ. ಒಟ್ಟಾರೆ ಜಿಲ್ಲೆಯಲ್ಲಿ ಮಳೆ ಮುಂದುವರಿದಿದ್ದು, ವಾಹನ ಹಾಗೂ ಜನ ಸಂಚಾರಕ್ಕೆ ಸಾಕಷ್ಟು ಅಡ್ಡಿಯನ್ನುಂಟು ಮಾಡಿದೆ.

**ಮಳೆ ಅವಘಡ: ಮುನ್ನೆಚ್ಚರಿಕೆಗೆ ಹೆಸ್ಕಾಂ ಸೂಚನೆ:** ಬೆಳಗಾವಿ ಮಳೆಗಾಲದ ಹಿನ್ನೆಲೆಯಲ್ಲಿ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ (ಹೆಸ್ಕಾಂ) ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ಕ್ರಮಗಳನ್ನು ಸೂಚಿಸಿದ್ದು, ವಿದ್ಯುತ್ ಅವಘಡಗಳು ಸಂಭವಿಸದಂತೆ ಇಲಾಖೆಯೊಂದಿಗೆ ಸಹಕರಿಸುವಂತೆ ಕೋರಿದೆ. ಮಳೆಗಾಲ ಸಂದರ್ಭದಲ್ಲಿ ಗಾಳಿ, ಮಳೆ, ಸಿಡಿಲು, ಮಿಂಚು ಬಂದಾಗ ವಿದ್ಯುತ್ ಅವಘಡಗಳು ಉಂಟಾಗುವ ಸಾಧ್ಯತೆಗಳಿರುತ್ತವೆ. ಸಾರ್ವಜನಿಕ ಸ್ಥಳಗಳಲ್ಲಿ ವಿದ್ಯುತ್ ಕಂಬಗಳು, ವಿದ್ಯುತ್ ಪರಿವರ್ತಕ (ಟ್ರಾನ್ಸ್‌ಫಾರ್ಮರ್) ಗಳಲ್ಲಿರುವ ವಿದ್ಯುತ್ ತಂತಿಗಳು ಜನರಿಗೆ ಅಪಾಯ ತಂದೊಡ್ಡಬಹುದು. ಈ ಕಾರಣದಿಂದ ಸಾರ್ವಜನಿಕರು ಜಾಗೃತೆ ವಹಿಸಬೇಕಾಗಿದ್ದು, ಸುರಕ್ಷಿತ ಅಂತರ ಕಾಯ್ದುಕೊಳ್ಳಲು ತಿಳಿಸಿದೆ. ಮರಗಳ ಕೊಂಬೆಗಳು ವಿದ್ಯುತ್ ತಂತಿಗೆ ತಾಗುವಂತಿದ್ದರೆ ಈ ಕುರಿತು ಇಲಾಖೆಗೆ ಮಾಹಿತಿ ನೀಡಬೇಕು.



**ಎಲ್ಲೆಲ್ಲಿ ರೆಡ್ ಅಲರ್ಟ್?**

● ದಕ್ಷಿಣ ಕನ್ನಡ, ● ಉಡುಪಿ, ● ಉತ್ತರ ಕನ್ನಡ, ● ಕೊಡಗು, ● ಚಿಕ್ಕಮಗಳೂರು ಹಾಗೂ ● ಶಿವಮೊಗ್ಗದಲ್ಲಿ ರೆಡ್ ಅಲರ್ಟ್ ಘೋಷಣೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲಾದ್ಯಂತ ಗುಡುಗು-ಸಿಡಿಲಿನ ಆರ್ಭಟ ಹಾಗೂ ಬಿರುಗಾಳಿ ಮಳೆ ಸಂಭವಿಸುತ್ತಿದೆ. ಅಪಾಯಕಾರಿ ಮಟ್ಟದಲ್ಲಿ ಕರಾವಳಿ ಜಿಲ್ಲೆಗಳಲ್ಲಿ ಮಳೆಯಾಗುತ್ತಿದೆ.

**ರಜೆ ಘೋಷಣೆ**

ಭಾರೀ ಮಳೆ ಮುನ್ಸೂಚನೆ ಹಿನ್ನೆಲೆ ಉಡುಪಿ, ಉತ್ತರ ಕನ್ನಡದ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆ, ಪಿಯು ಕಾಲೇಜ್ ಶಿಕ್ಷಣ, ಐಟಿಐಗಳಿಗೆ ರಜೆ ಘೋಷಿಸಲಾಗಿದೆ. ಪದವಿ ನಂತರದ ಶಿಕ್ಷಣ ಸಂಸ್ಥೆಗಳಿಗೆ ರಜೆ ಇಲ್ಲ. ಜೂನ್ 18 ಬುಧವಾರದಂದು, ದಕ್ಷಿಣ ಕನ್ನಡ , ಉಡುಪಿ, ಉತ್ತರ ಕನ್ನಡ, ಚಿಕ್ಕಮಗಳೂರು, ಕೊಡಗು ಹಾಗೂ ಶಿವಮೊಗ್ಗದಲ್ಲಿ ಭಾರೀ ಮಳೆಯ ಹಿನ್ನೆಲೆ ಈ 6 ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಕೊಡಲಾಗಿದೆ. ಬೆಳಗಾವಿ ಜಿಲ್ಲೆಗೆ ಯೆಲ್ಲೋ ಅಲರ್ಟ್ ಕೊಡಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,037/Gram24ct ₹9,200/Gram22ct ಬೆಳ್ಳಿ: ₹110.00 /Gram

## ಐಶ್ವರ್ಯಾಗೌಡ ಚಿನ್ನಾಭರಣ ವಂಚನೆ ಕೇಸ್: ಸಂಸದ ಡಿಕೆ ಸುರೇಶ್ ಗೆ ಇಡಿ ಸಮನ್ಸ್

• ಉದಯವಾಹಿನಿ, ಬೆಂಗಳೂರು

ಐಶ್ವರ್ಯ ಗೌಡ ಪ್ರಕರಣದ ತನಿಖೆಯು ಇದೀಗ ಮತ್ತೊಂದು ಮಹತ್ವದ ತಿರುವು ಪಡೆದುಕೊಂಡಿದೆ. ಜಾರಿ ನಿರ್ದೇಶನಾಲಯ (ಇಡಿ) ಸಂಸದ ಡಿ.ಕೆ. ಸುರೇಶ್ ಅವರಿಗೆ ಸಮನ್ಸ್ ಜಾರಿ ಮಾಡಿದ್ದು, ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದೆ. ಕೋಟ್ಯಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ವಂಚಿಸಿದ ಆರೋಪ ಹೊತ್ತ ಐಶ್ವರ್ಯ ಗೌಡ ಪ್ರಕರಣಕ್ಕೆ ಸಂಬಂಧಿಸಿದಂತೆ, ಮಾಜಿ ಸಂಸದ ಡಿ.ಕೆ.ಸುರೇಶ್ ಅವರಿಗೆ ಇಡಿ ಸಮನ್ಸ್ ನೀಡಿದೆ.

ಜೂನ್ 19 ರಂದು ವಿಚಾರಣೆಗೆ ಹಾಜರಾಗುವಂತೆ ಇಡಿ ಅಧಿಕಾರಿಗಳು ಸಮನ್ಸ್ ನೀಡಿದ್ದು, ಜೂನ್ 23 ರಂದು ವಿಚಾರಣೆಗೆ ಬರುವುದಾಗಿ ಡಿಕೆ ಸುರೇಶ್ ಹೇಳಿದ್ದಾರೆ ಎಂದು ತಿಳಿದು ಬಂದಿದೆ. ಮಾಜಿ ಸಂಸದ ಡಿ.ಕೆ.ಸುರೇಶ್ ಸಹೋದರಿ ಎಂದು ಹೇಳಿಕೊಂಡು ಕೋಟ್ಯಂತರ ರೂಪಾಯಿ ಚಿನ್ನ ವಂಚಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ಆರೋಪಿ ಮನೆ ಮೇಲೆ ದಾಳಿ ನಡೆಸಿ ಐಶ್ವರ್ಯಾ ಗೌಡ ಅವರನ್ನು ವಶಕ್ಕೆ ಪಡೆದಿದ್ದರು. ಕಾಂಗ್ರೆಸ್ ಮಾಜಿ ಸಂಸದ ಡಿ.ಕೆ.ಸುರೇಶ್ ಸಹೋದರಿ ಎಂದು ಹೇಳಿಕೊಂಡು ಐಶ್ವರ್ಯ ಗೌಡ ಕೋಟ್ಯಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ವಂಚಿಸಿರುವ ಆರೋಪ ಕೇಳಿ ಬಂದಿತ್ತು. ಹೀಗಾಗಿ ಐಶ್ವರ್ಯ ಗೌಡ ಹೇಳಿಕೆ, ಸಾಕ್ಷಿಗಳ ಆಧರಿಸಿ ಮಾಜಿ ಸಂಸದ ಡಿ.ಕೆ.ಸುರೇಶ್ ವಿಚಾರಣೆಗೆ ಹಾಜರಾಗುವಂತೆ ಇಡಿ ಸಮನ್ಸ್ ಜಾರಿ ಮಾಡಿದೆ.

## ಹೊಸ ಐಟಿ ನೀತಿ ಮಾರ್ಗದರ್ಶನಕ್ಕಾಗಿ ಸರ್ಕಾರದಿಂದ ಎಐ ಕೌಶಲ್ಯ ಕುರಿತು ಅಧ್ಯಯನ

• ಉದಯವಾಹಿನಿ, ಬೆಂಗಳೂರು

2025ರ ಹೊಸ ಐಟಿ ನೀತಿಗೆ ಮಾರ್ಗದರ್ಶನ ನೀಡುವ ಸಲುವಾಗಿ ಕರ್ನಾಟಕ ಸರ್ಕಾರವು ಎಐ ಕೌಶಲ್ಯದ ಕಾರ್ಯಪಡೆಯ ಸಾಧ್ಯತೆಗಳು ಮತ್ತು ಪ್ರಭಾವಗಳ ಕುರಿತು ಅಧ್ಯಯನವನ್ನು ಪ್ರಾರಂಭಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಈ ಬಗ್ಗೆ ಅವರು ಮಾಧ್ಯಮ ಪ್ರಕಟಣೆ ಬಿಡುಗಡೆಗೊಳಿಸಿದ್ದು, ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆಯು, ರಾಜ್ಯದಲ್ಲಿನ ಕಾರ್ಯಪಡೆಯ ಮೇಲೆ ಕೃತಕ ಬುದ್ಧಿಮತ್ತೆಯ ಪ್ರಭಾವವನ್ನು ನಿರ್ಣಯಿಸಲು ಸಮಗ್ರ ಅಧ್ಯಯನವನ್ನು ಪ್ರಾರಂಭಿಸಿದೆ. ಇತ್ತೀಚೆಗೆ ಎಐ ಮತ್ತು ಬಿಗ್ ಡೇಟಾ ಪರಿಸರ ವ್ಯವಸ್ಥೆಗಳಲ್ಲಿ ಜಾಗತಿಕವಾಗಿ 5ನೇ ಸ್ಥಾನದಲ್ಲಿರುವ ಬೆಂಗಳೂರು, 1 ಲಕ್ಷಕ್ಕೂ ಹೆಚ್ಚು ಎಐ ವೃತ್ತಿಪರರಿಗೆ ನೆಲೆಯಾಗಿರುವ ಕರ್ನಾಟಕವು ಭಾರತದ ತಾಂತ್ರಿಕ ಪ್ರಯಾಣವನ್ನು ಮುನ್ನಡೆಸುತ್ತಿರುವುದರಿಂದ, ಸಮಗ್ರ ಭವಿಷ್ಯಕ್ಕೆ ಸಿದ್ಧವಾಗಿರುವ ಬೆಳವಣಿಗೆಯನ್ನು ಖಚಿತ ಪಡಿಸಿಕೊಳ್ಳಲು ರಾಜ್ಯವು ನಿಖರ ನೀತಿ ನಿರೂಪಣೆಗೆ ಬಲವಾದ ಒತ್ತು ನೀಡುತ್ತಿದೆ ಎಂದಿದ್ದಾರೆ. ನಮ್ಮ ತಾಂತ್ರಿಕ ಕಾರ್ಯಪಡೆಯು 1 ಮಿಲಿಯನ್ ವೃತ್ತಿಪರರನ್ನು ದಾಟಿದೆ. ಬೆಂಗಳೂರು ಭಾರತದ ನಿರ್ವಿವಾದವಾಗಿ ಎಐ ರಾಜಧಾನಿಯಾಗಿ ಹೊರಹೊಮ್ಮಿದೆ. ಆದರೆ ಎಐ ಕೈಗಾರಿಕೆಗಳನ್ನು ವೇಗವಾಗಿ ಮರು ರೂಪಿಸುತ್ತಿದ್ದಂತೆ, ನಮ್ಮ ಜನರು ಹಿಂದೆ ಬೀಳದಂತೆ ನಾವು ಖಚಿತ ಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

## ರಾಜ್ಯದಲ್ಲಿ ಹೆಚ್ಚುವರಿ ಮುಂಗಾರು ಪೂರ್ವ ಮಳೆ: ಅಂತರ್ಜಲ ಮಟ್ಟದಲ್ಲಿ ಏರಿಕೆ



ಉದಯವಾಹಿನಿ ಚಿತ್ರ


• ಉದಯವಾಹಿನಿ, ಬೆಂಗಳೂರು

ಪೂರ್ವ-ಮಾನ್ಸೂನ್ ಮಳೆ ಮತ್ತು ಉತ್ತಮ ನೈಋತ್ಯ ಮಾನ್ಸೂನ್ ಮಳೆಯಿಂದಾಗಿ ರಾಜ್ಯಾದ್ಯಂತ ಅಂತರ್ಜಲ ಮಟ್ಟದಲ್ಲಿ ಗಣನೀಯ ಏರಿಕೆ ಕಂಡುಬಂದಿದೆ ಮತ್ತು ನೀರಿನ ಗುಣಮಟ್ಟದಲ್ಲಿ ಸುಧಾರಣೆಯಾಗಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ, ಈ ವರ್ಷ ಮಾರ್ಚ್ ಮತ್ತು ಮೇ ನಡುವೆ ಪೂರ್ವ-ಮಾನ್ಸೂನ್ 28 ಜಿಲ್ಲೆಗಳಲ್ಲಿ ಹೆಚ್ಚಿನ ಮಳೆಯಾಗಿದೆ ಎಂದು ಹೇಳಿದೆ, ಆದರೆ ಒಂದು ಜಿಲ್ಲೆಯಲ್ಲಿ ಹೆಚ್ಚುವರಿ ಮಳೆ ದಾಖಲಾಗಿದೆ ಮತ್ತು ಎರಡು ಜಿಲ್ಲೆಗಳಲ್ಲಿ ಮಾತ್ರ ಸಾಮಾನ್ಯ ಮಳೆಯಾಗಿದೆ. ಈ ಮೂರು ತಿಂಗಳಲ್ಲಿ ರಾಜ್ಯದಲ್ಲಿ ಸಾಮಾನ್ಯವಾಗಿ 117 ಮಿಮೀ ಮಳೆಯಾಗುತ್ತಿತ್ತು, ಆದರೆ ಈ ವರ್ಷ 320 ಮಿಮೀ ಮಳೆಯಾಗಿದೆ ಎಂದು ದತ್ತಾಂಶ ಬಹಿರಂಗಪಡಿಸುತ್ತದೆ.

ಪೂರ್ವ-ಮಾನ್ಸೂನ್ ಈ ವರ್ಷ ಉತ್ತಮವಾಗಿದ್ದು ರಾಜ್ಯದಲ್ಲಿ 200 ಮಿಮೀಗಿಂತ ಹೆಚ್ಚು ಮಳೆಯಾಗಿದೆ ಎಂದು ಮಾಜಿ ನಿರ್ದೇಶಕ ಜಿ.ಎಸ್. ಶ್ರೀನಿವಾಸ ರೆಡ್ಡಿ ಹೇಳಿದರು. ಇದರ ನಂತರ ಉತ್ತಮ ಮಾನ್ಸೂನ್ ಬಂದಿದೆ, ವಿಶೇಷವಾಗಿ ಉತ್ತರ-ಕರ್ನಾಟಕ ಮತ್ತು ಇತರ ಸ್ಥಳಗಳಲ್ಲಿ. ಹೆಚ್ಚುವರಿ ಮಳೆಯೊಂದಿಗೆ, ಜಲಾಶಯಗಳ ಜಲಾನಯನ ಪ್ರದೇಶಗಳು ಆರ್ದ್ರತೆಯಿಂದ ಕೂಡಿವೆ. ಮೇ ತಿಂಗಳಲ್ಲಿಯೇ ಅಣೆಕಟ್ಟುಗಳಿಗೆ ಉತ್ತಮ ಒಳಹರಿವು ಇದೆ ಎಂದು ಅವರು ಹೇಳಿದರು. ಉತ್ತಮ ಮಳೆಯಿಂದಾಗಿ, ರೈತರು ಕೊಳವೆಬಾವಿಗಳನ್ನು ಕಡಿಮೆ ಬಳಸುತ್ತಿದ್ದಾರೆ, ಇದು ಅಂತರ್ಜಲ ಮರುಪೂರಣಕ್ಕೆ ಮತ್ತು ನೀರಿನ ಮಟ್ಟವನ್ನು ಹೆಚ್ಚಿಸಲು ಮತ್ತಷ್ಟು ಸಹಾಯ ಮಾಡಿದೆ. ಅನೇಕ ಜಲಾಶಯಗಳು, ವಿಶೇಷವಾಗಿ ಕಾವೇರಿ ಜಲಾನಯನ ಪ್ರದೇಶದಲ್ಲಿರುವವುಗಳು, ಅವುಗಳ ಸಾಮರ್ಥ್ಯದ 65% ಕ್ಕಿಂತ ಹೆಚ್ಚು ತಲುಪಿವೆ ಎಂದು ಅವರು ಗಮನಸೆಳೆದರು, ಇದು ಒಳ್ಳೆಯ ಸಂಕೇತವಾಗಿದೆ. ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಬಿ.ಕೆ. ಪವಿತ್ರಾ, ಮಾತನಾಡಿ, 2,700 ಕ್ಕೂ ಹೆಚ್ಚು ವೀಕ್ಷಣಾ ಬಾವಿಗಳಿವೆ ಎಂದು ಟಿಎನ್ಐಇಗೆ ತಿಳಿಸಿದರು. ಈ ಬಾವಿಗಳಿಂದ ಡೇಟಾವನ್ನು ಟೆಲಿಮೆಟ್ರಿ ಸಾಧನಗಳ ಮೂಲಕ ಸಂಗ್ರಹಿಸಲಾಗುತ್ತದೆ, ಇವು ಸಂವೇದಕ ಆಧಾರಿತ ಮತ್ತು ಬಾವಿಯೊಳಗೆ ಇರಿಸಲ್ಪಡುತ್ತವೆ. ಅವರ ಇಲಾಖೆಯು ಅಂತರ್ಜಲ ನಿರ್ದೇಶನಾಲಯದಿಂದ ಡೇಟಾವನ್ನು ಪಡೆಯುತ್ತದೆ ಎಂದು ಅವರು ಹೇಳಿದರು.

# ಅರಣ್ಯ ಇಲಾಖೆಗೆ ಸೇರಿದ ಭೂಮಿಗಳನ್ನು ಕಬ್ಬನ್ ಪಾರ್ಕ್ ರೀತಿ ಅಭಿವೃದ್ಧಿ

• ಉದಯವಾಹಿನಿ, ಬೆಂಗಳೂರು



ಬೆಂಗಳೂರಿನಲ್ಲಿ ಅರಣ್ಯ ಇಲಾಖೆಗೆ ಸೇರಿರುವ ಭೂಮಿಗಳನ್ನು ಕಬ್ಬನ್ ಪಾರ್ಕ್ ರೀತಿ ಅಭಿವೃದ್ಧಿ ಮಾಡಲು ಅರಣ್ಯ ಇಲಾಖೆ ಮುಂದಾದರೆ ಪಾಲಿಕೆಯಿಂದ ಅಗತ್ಯ ಧನಸಹಾಯ ನೀಡಲಾಗುವುದು'' ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ನಗರದ ಅರಮನೆ ಮೈದಾನದಲ್ಲಿ ಅರಣ್ಯ ಇಲಾಖೆಯಿಂದ ನಡೆದ ವಿಶ್ವ ಪರಿಸರ ದಿನಾಚರಣೆಯಲ್ಲಿ ಮಂಗಳವಾರ ಮಾತನಾಡಿದರು. ಕಬ್ಬನ್ ಪಾರ್ಕ್, ಲಾಲ್ ಬಾಗ್ ರೀತಿ ಉದ್ಯಾನಗಳನ್ನು ಅಭಿವೃದ್ಧಿಪಡಿಸಿದರೆ ಬೆಂಗಳೂರು ನಗರದಾದ್ಯಂತ ಇರುವ ಅರಣ್ಯ ಇಲಾಖೆ ಜಾಗಗಳು ಉಳಿದಂತಾಗುತ್ತದೆ. ಸಾರ್ವಜನಿಕರಿಗೂ ಅನುಕೂಲವಾಗುತ್ತದೆ ಎಂದು ಹೇಳಿದರು. ಭೂಮಿ ನಮಗೆ ಸೇರಿದ್ದಲ್ಲ, ನಾವು ಭೂಮಿಗೆ ಸೇರಿದವರು ಎನ್ನುವುದನ್ನು ಯಾರೊಬ್ಬರು ಮರೆಯಬಾರದು. ಪ್ರಕೃತಿ ಉಚಿತವಾಗಿ ಊಟ ಕೊಡುತ್ತಿದೆ ಎಂದು ಅದನ್ನು ಕಂಠಪೂರ್ತಿ ತಿನ್ನಬಾರದು. ಭವಿಷ್ಯಕ್ಕೂ ಉಳಿಸಬೇಕು ಎಂದು ತಿಳಿಸಿದರು.

ಸುತ್ತಲಿನ ಪ್ರಕೃತಿ, ಮಣ್ಣು, ನೀರನ್ನು ಉಳಿಸುವ ಸಂಕಲ್ಪವನ್ನು ನಮ್ಮ ಸರ್ಕಾರ ತೆಗೆದುಕೊಂಡಿದೆ. ಹಸಿರು ಮತ್ತು ಉಸಿರನ್ನು ರಕ್ಷಿಸುವ ಗ್ಯಾರಂಟಿಯನ್ನು ನಮ್ಮ ಸರ್ಕಾರ ನೀಡಲಿದೆ. ಪ್ರಕೃತಿಯಿಂದ ನಾವು ತೆಗೆದುಕೊಳ್ಳುವುದಕ್ಕಿಂತ ಹೆಚ್ಚಿಗೆ ಅದಕ್ಕೆ ವಾಪಸ್ ಕೊಡಬೇಕು. ಈ ಭೂಮಿ ಉಳಿದರೆ ಮಾತ್ರ ನಾವು ಉಳಿಯುತ್ತೇವೆ ಎಂದರು.

ನಾವುಗಳು ನಮ್ಮ ಜೀವಿತಾವಧಿಯಲ್ಲಿ ಒಂದೊಂದು ಮರವನ್ನು ಬೆಳೆಸುವಂತಹ ಸಂಕಲ್ಪವನ್ನು ತೆಗೆದುಕೊಳ್ಳಬೇಕು. ನಾನು ಬೆಂಗಳೂರು ಅಭಿವೃದ್ಧಿ ಸಚಿವನಾದ ತಕ್ಷಣ ನಗರದ ಶಾಲೆಗಳ ವಿದ್ಯಾರ್ಥಿಗಳು ಒಂದೊಂದು ಸಸಿಯನ್ನು ದತ್ತು ಪಡೆಯಬೇಕು ಎಂದು ಯೋಜನೆ ರೂಪಿಸಿದೆವು. ಕಳೆದ ವರ್ಷ ಸುಮಾರು 50 ಸಾವಿರ ಸಸಿಗಳನ್ನು ನೆಡಲಾಗಿದೆ. ಇವುಗಳನ್ನು ವಿದ್ಯಾರ್ಥಿಗಳೇ ಪೋಷಿಸುತ್ತಿದ್ದಾರೆ ಎಂದು ಹೇಳಿದರು. ಪ್ರತಿ ಶಾಲೆಯಲ್ಲಿ 25 ವಿದ್ಯಾರ್ಥಿಗಳನ್ನು ಒಳಗೊಂಡ ಕ್ಲೈಮೆಟ್ ಆಕ್ಷನ್ ಕ್ಲಬ್ ರಚನೆ ಮಾಡಬೇಕು ಎಂದು ಸೂಚನೆ ನೀಡಿದ್ದೇವೆ.

ಬೆಂಗಳೂರಲ್ಲಿ 1.20 ಕೋಟಿಗೆ ವಾಹನಗಳ ಸಂಖ್ಯೆ ಏರಿಕೆಯಾಗಿದೆ. ಇದರಿಂದ ಪರಿಸರ ಮಾಲಿನ್ಯ ಹೆಚ್ಚಾಗಿದೆ. ಇದನ್ನು ನಿಯಂತ್ರಣ ಮಾಡಲು ನಾವು ಆಲೋಚನೆ ಮಾಡಬೇಕಿದೆ ಎಂದು ಹೇಳಿದರು. ನನ್ನ ಹುಟ್ಟುಹಬ್ಬದ ದಿನ ಕಬಿನಿ ಹಿನ್ನೀರಿನ ಅರಣ್ಯಕ್ಕೆ ಭೇಟಿ ನೀಡಿದ್ದೆ. ಅತ್ಯಂತ ಸಂಪತ್ ಭರಿತವಾದ ಪ್ರಾಣಿ ಸಂಕುಲವನ್ನು ನಾನು ನೋಡಿದೆ. ಆಗ ವಿದೇಶದಲ್ಲಿರುವಂತೆ ನನಗೆ ಭಾಸವಾಯಿತು ಎಂದು ಹೇಳಿದರು.

# ಮುಗಿಯದ ಕಾಮಗಾರಿ, ಸವಾರರಿಗೆ ಕಿರಿಕಿರಿ

## ಆಗಸ್ಟ್ ವೇಳೆಗೆ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡು, ವಾಹನ ಸಂಚಾರ ಆರಂಭ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಬ್ಯಾಪ್ಟಿಸ್ಟ್ ಆಸ್ಪತ್ರೆ ಬಳಿ ಪ್ರಾರಂಭ**

ಹೆಬ್ಬಾಳ ಮೇಲೇತುವೆ ಬಳಿ ವಾಹನ ದಟ್ಟಣೆ ಕಡಿಮೆ ಮಾಡಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ವತಿಯಿಂದ ನಡೆಯುತ್ತಿರುವ ಹೊಸ ಲೂಪ್ (ಪಥ) ನಿರ್ಮಾಣ ಕಾಮಗಾರಿ ಮಂದಗತಿಯಲ್ಲಿ ಸಾಗುತ್ತಿದೆ. ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳ್ಳದ ಕಾರಣ ವಾಹನ ಸವಾರರಿಗೆ ನಿತ್ಯವೂ ಕಿರಿಕಿರಿ ಉಂಟಾಗಿದೆ.

ಬ್ಯಾಪ್ಟಿಸ್ಟ್ ಆಸ್ಪತ್ರೆ ಬಳಿ ಪ್ರಾರಂಭವಾಗಿ ಕೆ.ಆರ್. ಪುರ ಲೂಪ್‌ನೊಂದಿಗೆ ಸೇರಿಕೊಳ್ಳುವ ಈ ಲ್ಯಾಂಪ್‌ನಿಂದ, ಮೇಖಿ ಸರ್ಕಲ್ ಕಡೆಗೆ ಹೋಗುವ ವಾಹನ ಸವಾರರಿಗೆ ಅನುಕೂಲವಾಗಲಿದೆ. ಇದರಿಂದ ಸಂಚಾರ ದಟ್ಟಣೆ ಸ್ವಲ್ಪ ಕಡಿಮೆ ಆಗಲಿದೆ. ಅಲ್ಲದೆ ಈ ಲೂಪ್ ನಾಗವಾರ ಕಡೆಯಿಂದ ಬರುವ ವಾಹನಗಳ ಸಂಚಾರವನ್ನೂ ಸುಗಮ ಗೊಳಿಸಲಿದೆ. ಬಿಡಿಎ ಅಧಿಕಾರಿಗಳ ಹೊಸ ಗಡುವಿನ ಪ್ರಕಾರ, ಆಗಸ್ಟ್ ವೇಳೆಗೆ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡು, ವಾಹನ ಸಂಚಾರ ಆರಂಭವಾಗಲಿದೆ.

2022ರ ಅಕ್ಟೋಬರ್‌ನಲ್ಲಿ ಕಾಮಗಾರಿ ಆರಂಭವಾಗಿತ್ತು. ಸಂಚಾರ ವಿಭಾಗದ ಪೊಲೀಸ್ ಅಧಿಕಾರಿಗಳ ಪ್ರಕಾರ, ಲೂಪ್ ನಿರ್ಮಾಣ ಕಾರ್ಯ 2024ಕ್ಕೇ ಪೂರ್ಣಗೊಳ್ಳಬೇಕಿತ್ತು. 2025ರ ಮೇ ಎರಡನೇ ವಾರದೊಳಗೆ ಈ ಲೂಪ್ ಕಾರ್ಯಾರಂಭ ಮಾಡಲಿದೆ ಎಂದು ಬಿಡಿಎ ತಿಳಿಸಿತ್ತು. ಬಳಿಕ ಗಡುವನ್ನು ಜೂನ್‌ಗೆ ವಿಸ್ತರಿಸಲಾಗಿತ್ತು. ಈಗ ಮತ್ತೆ ಆಗಸ್ಟ್‌ಗೆ ವಿಸ್ತರಿಸಲಾಗಿದೆ.

ಮೊದಲ ಹಂತವಾಗಿ ಕೆ.ಆರ್.ಪುರ ಲೂಪ್ ನಿರ್ಮಿಸುವ ಕೆಲಸ ವರ್ಷ ಕಳೆದರೂ ಪೂರ್ಣಗೊಂಡಿಲ್ಲ. ಮಂದಗತಿಯಲ್ಲಿ ಕಾಮಗಾರಿ ನಡೆಯುತ್ತಿರುವುದನ್ನು ಗಮನಿಸಿ. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಮುಖ್ಯ ಕಾರ್ಯದರ್ಶಿ ಹಲವು ಬಾರಿ ಗಡುವು ವಿಧಿಸಿದರೂ ಕಾಮಗಾರಿ ಮುಗಿದಿಲ್ಲ. ರೈಲ್ವೆ ಹಳಿಯ ಮೇಲಿನ ಮೇಲೇತುವೆಗೆ ಗರ್ಡರ್ ಅಳವಡಿಸಲು ಸಾಧ್ಯವಾಗಿರಲಿಲ್ಲ. ರೈಲ್ವೆ ಇಲಾಖೆಯಿಂದ ಅನುಮತಿ ಪಡೆಯಲು ಸಮಯ ಬೇಕಾಯಿತು ಎಂದು ಬಿಡಿಎ ಸಮಜಾಯಿಷಿ ನೀಡಿದೆ. ಬೆಂಗಳೂರು ಉತ್ತರ ಭಾಗದಿಂದ ನಗರದೊಳಗೆ ಪ್ರವೇಶಿಸಲು ಹೆಬ್ಬಾಳ ಮಾರ್ಗ ಪ್ರಮುಖವಾಗಿದೆ. ಇದನ್ನು ಅಧರಿಸಿಯೇ ಕೆ.ಆರ್.ಪುರ ಲೂಪ್ ಅನ್ನು ಮೊದಲು ಪೂರ್ಣಗೊಳಿಸಿ ಆ ಭಾಗದಿಂದ ನಗರಕ್ಕೆ ಬರಲು ಅವಕಾಶ ನೀಡಲು ನಿರ್ಧರಿಸಲಾಗಿತ್ತು. ದಿನದ ಎರಡು ಪಾಳಿಯಲ್ಲಿ ಕೆಲಸ ಮಾಡುತ್ತಿದ್ದರೂ ನಿರೀಕ್ಷೆಯಂತೆ ಕೆಲಸ ಸಾಗುತ್ತಿಲ್ಲ. ಸುಮಾರು 700 ಮೀಟರ್ ಉದ್ದದ ಈ ಲೂಪ್ ಅನ್ನು 26 ಕಂಬಗಳ ಆಧಾರದ ಮೇಲೆ 25 ಭಾಗಗಳಾಗಿ ನಿರ್ಮಿಸಲಾಗಿದೆ. ಜಂಕ್ಷನ್‌ನಲ್ಲಿರುವ ರೈಲ್ವೆ ಹಳಿಯ ಮೇಲೆ 99 ಗರ್ಡರಗಳನ್ನು ಅಳವಡಿಸಲಾಗಿದೆ. ಎಲ್ಲಾ ಗರ್ಡರಗಳ (ತೊಲೆ) ನಿರ್ಮಾಣ ಪೂರ್ಣಗೊಂಡಿದ್ದು, ಕಾಂಕ್ರೀಟ್ ಕೆಲಸ ನಡೆಯುತ್ತಿದೆ.

ಕಾಮಗಾರಿ ಅಂತಿಮ ಹಂತದಲ್ಲಿದೆ. ಬ್ಯಾಪ್ಟಿಸ್ಟ್ ಆಸ್ಪತ್ರೆಯಿಂದ ರೈಲ್ವೆ ಹಳಿಯವರೆಗಿನ ಡೆಕ್ ಕಾಸ್ಟಿಂಗ್ ಮತ್ತು ರಸ್ತೆ ನಿರ್ಮಾಣ ಕಾರ್ಯ ಮುಗಿದಿದೆ. ಕೆ.ಆರ್.ಪುರ ಲೂಪ್‌ವರೆಗಿನ ಉಳಿದ ಭಾಗದ ಕಾಮಗಾರಿ ಆಗಸ್ಟ್‌ಗೆ ಪೂರ್ಣಗೊಳ್ಳಲಿದೆ ಎಂದು ಬಿಡಿಎ ಅಧಿಕಾರಿಗಳು ತಿಳಿಸಿದರು. ಈ ಹಿಂದೆ ಬ್ಯಾಪ್ಟಿಸ್ಟ್ ಆಸ್ಪತ್ರೆಯಿಂದ ಎಸ್ಟೀಮ್ ಮಾಲ್ ತನಕ ಲೂಪ್ ನಿರ್ಮಿಸಲು ಉದ್ದೇಶಿಸಲಾಗಿತ್ತು. ವಿಮಾನ ನಿಲ್ದಾಣಕ್ಕೆ ಹೋಗುವ ವಾಹನಗಳಿಗೆ ಮೀಸಲಾದ ರಸ್ತೆಯನ್ನು ನಿರ್ಮಿಸುವುದು ಗುರಿಯಾಗಿತ್ತು. ಆದರೆ ಕಾಮಗಾರಿ ವಿಳಂಬ ಮತ್ತು ಸಂಚಾರ ದಟ್ಟಣೆ ಕಾರಣದಿಂದ ಯೋಜನೆ ಕೈಬಿಡಲಾಯಿತು.

### ಎರಡನೇ ಹಂತದಲ್ಲಿ ತುಮಕೂರಿಗೆ

**ಎರಡನೇ ಹಂತದಲ್ಲಿ ಎಸ್ಟೀಮ್ ಮಾಲ್ ಮತ್ತು ತುಮಕೂರು ರಸ್ತೆಯ ಬಳಿ ಇರುವ ಸರ್ವಿಸ್ ರಸ್ತೆಯಿಂದ ಮೇಖಿ ಸರ್ಕಲ್ ಕಡೆಗೆ ಹೋಗುವ ವಾಹನಗಳಿಗಾಗಿ ತುಮಕೂರು ರಸ್ತೆ ಕಡೆಗೆ ಹೋಗುವ ಲೂಪ್ ಅನ್ನು ಜೋಡಿಸಲು ನಿರ್ಧರಿಸಲಾಗಿದೆ ಎಂದು ಬಿಡಿಎ ಅಧಿಕಾರಿಗಳು ತಿಳಿಸಿದರು.**

## ಪರಪ್ಪನ ಅಗ್ರಹಾರ ಜೈಲಿನ ಮೇಲೆ ಸಿಸಿಬಿ ದಾಳಿ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಜೈಲು ಅಕ್ರಮದ ಅಡ್ಡೆಯಾಗಿ ಪರಿವರ್ತನೆ ಆಗುತ್ತಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಿಷೇಧಿತ ವಸ್ತುಗಳ ಹೆಚ್ಚಾಗಿ ಬಳಕೆಯಾಗುತ್ತಿವೆ. ಅಕ್ರಮವಾಗಿ ನಿಷೇಧಿತ ವಸ್ತು ಬಳಕೆಯಾಗುತ್ತಿರುವ ಮಾಹಿತಿ ತಿಳಿದ ಸಿಸಿಬಿ ಪೊಲೀಸರು ಸೋಮವಾರ ದಾಳಿ ಮಾಡಿದ್ದಾರೆ.

ಜೂನ್ 16ರಂದು ಬೆಳಗ್ಗೆ 11ರಿಂದ ಮಧ್ಯಾಹ್ನ 2 ಗಂಟೆವರೆಗೂ ಜೈಲಿನಲ್ಲಿ ಶೋಧ ಕಾರ್ಯ ನಡೆಸಿದ್ದಾರೆ. ಸಿಸಿಬಿ ದಾಳಿ ವೇಳೆ ಅಪಾರ ಪ್ರಮಾಣದ ನಿಷೇಧಿತ ವಸ್ತುಗಳು ಪತ್ತೆಯಾಗಿವೆ. ಪರಪ್ಪನ ಅಗ್ರಹಾರ ಕಾರಾಗೃಹದ ಸಜಾಬಂಧಿ ಬ್ಯಾರಕ್ ಹಾಗೂ ವಿಐಪಿ ಬ್ಯಾರಕ್‌ನಲ್ಲಿ ಸಿಸಿಬಿಯ ಐವತ್ತಕ್ಕೂ ಹೆಚ್ಚು ಅಧಿಕಾರಿಗಳ ತಂಡದಿಂದ ಶೋಧ ಕಾರ್ಯ ನಡೆಸಿದ್ದರು.

ದಾಳಿ ವೇಳೆ ಕಸೂರಿ ಮೇತಿ ಸೊಪ್ಪು, ಬೀಡಿ ಪ್ಯಾಕೆಟ್ಸ್, ಗಾಂಜಾ ಚಿಲ್ಲುಂಸ್, ಮೊಳೆಗಳು, ಹರಿತವಾದ ವಸ್ತುಗಳು, ಗುಟ್ಕಾ ತಂಬಾಕು ಪ್ಯಾಕೆಟ್ಸ್, ಸುಣ್ಣದ ಡಬ್ಬಿ, ಡ್ರೈರಿಗಳು, ಚಾಕುಗಳು, ನಗದು ಹಣ, ಮೊಬೈಲ್ ಚಾರ್ಜರ್, ಕತ್ತರಿ, ಕಬ್ಬಿಣದ ರಾಡ್ ಪತ್ತೆಯಾಗಿದೆ. ಪರಪ್ಪನ ಅಗ್ರಹಾರ ಜೈಲಿನಲ್ಲಿ ನಿಷೇಧಿತ ವಸ್ತುಗಳ ಬಳಕೆಯಾಗುತ್ತಿರುವ ಬಗ್ಗೆ ಸಿಸಿಬಿ ಅಧಿಕಾರಿಗಳು ಎಫ್ಐಆರ್ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

## ನಿಷೇಧ ನಡುವೆಯೂ ಬೈಕ್ ಟ್ಯಾಕ್ಸಿ ಸೇವೆ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಹೈಕೋರ್ಟ್ ಆದೇಶದ ನಂತರವೂ ಸೋಮವಾರ ಟ್ಯಾಕ್ಸಿ ಸೇವೆ ನೀಡುತ್ತಿದ್ದ ಬೈಕ್ ಸವಾರರ ವಿರುದ್ಧ ಕ್ರಮ ಕೈಗೊಂಡಿರುವ ಸಾರಿಗೆ ಇಲಾಖೆ, 103 ಬೈಕ್‌ಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದೆ. ರಾಜ್ಯದ ಸಾರಿಗೆ ನಿಯಮಗಳ ಅಡಿಯಲ್ಲಿ ಬೈಕ್ ಟ್ಯಾಕ್ಸಿ, ವೈಟ್ ಬೋರ್ಡ್ ವಾಹನಗಳ ಮೂಲಕ ಟ್ಯಾಕ್ಸಿ ಸೇವೆ ನೀಡುವಂತಿಲ್ಲ. ಬೈಕ್ ಟ್ಯಾಕ್ಸಿ ಸೇವೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ ಯಾವುದೇ ನಿಯಮ ರೂಪುಗೊಂಡಿಲ್ಲ. ಆದರೂ, ಒಲಾ, ಉಬರ್, ರ್‍ಯಾಪಿಡೋ ಸೇರಿದಂತೆ ಇನ್ನಿತರ ಸಂಸ್ಥೆಗಳು ಬೈಕ್ ಟ್ಯಾಕ್ಸಿ ಸೇವೆ ನೀಡುತ್ತಿದ್ದವು. ಇದಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ನಲ್ಲಿ ಅರ್ಜಿ ವಿಚಾರಣೆ ನಡೆದು, ಜೂನ್ 15ರ ನಂತರ ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆ ನೀಡುವಂತಿಲ್ಲ ಎಂದು ಹೈಕೋರ್ಟ್ ಆದೇಶಿಸಿತ್ತು.

ಆ ಹಿನ್ನೆಲೆಯಲ್ಲಿ ಸಾರಿಗೆ ಇಲಾಖೆ ಅಧಿಕಾರಿಗಳು ನಗರದ ವಿವಿಧ ಭಾಗಗಳಲ್ಲಿ ತಪಾಸಣೆ ನಡೆಸಿದ ವೇಳೆ ಬೈಕ್ ಟ್ಯಾಕ್ಸಿ ಸೇವೆ ನೀಡುತ್ತಿದ್ದ 103 ಬೈಕ್‌ಗಳನ್ನು ವಶಕ್ಕೆ ಪಡೆದಿದ್ದಾರೆ.
ಎಲ್ಲಾ 103 ಬೈಕ್‌ಗಳ ವಿರುದ್ಧ ಪ್ರಕರಣ ದಾಖಲಿಸಿ ತಲಾ 5 ಸಾವಿರ ರು. ದಂಡ ವಿಧಿಸಿದ್ದಾರೆ. ಬೆಂಗಳೂರು ಪಶ್ಚಿಮ ಪ್ರಾದೇಶಿಕ ಸಾರಿಗೆ ಕಚೇರಿ 16 ಪ್ರಕರಣಗಳಲ್ಲಿ ಹೆಚ್ಚಿನ ಪ್ರಕರಣಗಳನ್ನು ದಾಖಲಿಸಿದ್ದರೆ, ಕೆಆರ್ ಪುರಂನಲ್ಲಿ 13 ಪ್ರಕರಣ ಮತ್ತು ಬೆಂಗಳೂರು ಪೂರ್ವ ಆರ್‌ಟಿಒ ಅಧಿಕಾರಿಗಳು 12 ಪ್ರಕರಣಗಳನ್ನು ದಾಖಲಿಸಿದ್ದಾರೆ. ನಿಷೇಧ ಹಿನ್ನೆಲೆಯಲ್ಲಿ ಒಲಾ, ಉಬರ್, ರ್‍ಯಾಪಿಡೋ ಸೇರಿ ಎಲ್ಲಾ ಅಗ್ರಿ ಗೇಟರ್‌ಗಳು ಬೈಕ್ ಟ್ಯಾಕ್ಸಿ ಸೇವೆ ಸ್ಥಗಿತಗೊಳಿಸುವುದಾಗಿ ಘೋಷಿಸಿವೆ. ಆ್ಯಪ್‌ಗಳಲ್ಲೂ ಬೈಕ್ ಟ್ಯಾಕ್ಸಿಸೇವೆ ಆಯ್ಕೆ ತೆಗೆದು ಹಾಕಿದೆ. ಆದರೆ, ಒಲಾ, ಉಬರ್, ಕ್ಯಾಪಿಡೋ ಸಂಸ್ಥೆಗಳು ಬೈಕ್ ಪಾರ್ಸೆಲ್ ಸೇವೆ ಆರಂಭಿಸಿವೆ.

## ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ 10 ಅಮುಲ್ ಮಳಿಗೆ ಆರಂಭ

• ಉದಯವಾಹಿನಿ, ಬೆಂಗಳೂರು



ನಮ್ಮ ಮೆಟ್ರೋವತಿಯಿಂದ 10 ನಿಲ್ದಾಣಗಳಲ್ಲಿ ಅಮುಲ್ ಮಳಿಗೆಗಳನ್ನು ಆರಂಭಿಸಲಾಗಿದೆ. ಬಿಎಂಆರ್‌ಸಿಎಲ್‌ನ ಈ ನಡೆಗೆ ಜೆಡಿಎಸ್ ಕಿಡಿ ಕಾರಿದೆ. ನಂದಿನಿ ಬಿಟ್ಟು ಅಮುಲ್ ಮಳಿಗೆ ಹಾಕಿ ಉದ್ಯಮ ಪ್ರೋತ್ಸಾಹಿಸುತ್ತಿರುವುದು ಏಕೆ ಎಂದು ಸರ್ಕಾರವನ್ನು ವಿರೋಧ ಪಕ್ಷಗಳು, ಕನ್ನಡ ಪರ ಹೋರಾಟಗಾರರು ಪ್ರಶ್ನೆ ಮಾಡಿದ್ದಾರೆ.

ಈ ಬಗ್ಗೆ ಟ್ವೀಟ್ ಮಾಡಿರುವ ಜೆಡಿಎಸ್, ಕಮಿಷನ್ ಆಸೆಗೆ ಸ್ವಾಭಿಮಾನ ಮಾರಿ ಕೊಂಡ ಡಿಕೆಶಿ ಡೂಪ್ಲಿಕೇಟ್ ಸಿಎಂ ಡಿಕೆಶಿ ನವರಂಗಿ ಆಟ ಮತ್ತೊಮ್ಮೆ ಬಯಲಾಗಿದೆ. ಚುನಾವಣೆಗೂ ಮುಂಚೆ ಕನ್ನಡಿಗರ ಆತ್ಮಗೌರವ ಮಾರಾಟಕ್ಕಿಲ್ಲ ಎಂದು ಪುಂಗೀ ಬಿಡುತ್ತಿದ್ದ ಡಿಕೆಶಿ, ಕಮಿಷನ್ ಆಸೆಗೆ ಇಂದು ಹೊರ ರಾಜ್ಯಗಳ ಹಾಲಿನ ಉತ್ಪನ್ನಗಳಿಗೆ ಮಣೆ ಹಾಕಿದ್ದಾರೆ.

ಬೆಂಗಳೂರಿನಲ್ಲಿ 10ಕ್ಕೂ ಹೆಚ್ಚು ಮೆಟ್ರೋ ನಿಲ್ದಾಣಗಳಲ್ಲಿ ಹೊರ ರಾಜ್ಯದ ಹಾಲಿನ ಉತ್ಪನ್ನಗಳ ಮಾರಾಟ ಮಳಿಗೆಗೆ ಅವಕಾಶ ನೀಡಲಾಗಿದೆ. ನಮ್ಮ ರೈತರ ಹಾಗೂ ಕನ್ನಡಿಗರ ಸ್ವಾಭಿಮಾನದ ಸಂಕೇತವಾಗಿರುವ ನಂದಿನಿ ಬ್ರ್ಯಾಂಡ್ ಅನ್ನು ತನ್ನ ಪ್ರಚಾರಕ್ಕೆ ಬಳಸಿಕೊಂಡ ಕರ್ನಾಟಕ ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ ನಂದಿನಿಯನ್ನು ಮರೆತು, ಹೊರ ರಾಜ್ಯಗಳ ಹಾಲಿನ ಉತ್ಪನ್ನಗಳಿಗೆ ರತ್ನ ಕಂಬಳಿ ಹಾಸಿದೆ ಎಂದು ಕಿಡಿಕಾರಿದೆ.

**ನಂದಿನಿ ಬ್ರ್ಯಾಂಡ್ ಹಿತಾಸಕ್ತಿಗೆ ದಕ್ಕೆ:** ನಂದಿನಿ ಹಾಲಿನ ಉತ್ಪನ್ನಗಳಿಗೆ ಸ್ಪರ್ಧಾತ್ಮಕವಾಗಿ ಮಾರುಕಟ್ಟೆ ಸೃಷ್ಟಿಸುವಲ್ಲಿ ಕಾಂಗ್ರೆಸ್ ಸರ್ಕಾರ ವಿಫಲವಾಗಿದ್ದು, ಕನ್ನಡಿಗರ ಹೆಮ್ಮೆಯ ಬ್ರ್ಯಾಂಡ್ ನಂದಿನಿಯ ಹಿತಾಸಕ್ತಿಗೆ ಧಕ್ಕೆ ತರುತ್ತಿದೆ ಎಂದು ಜೆಡಿಎಸ್ ಆರೋಪ ಮಾಡಿದೆ.

**ಈ ಹಿಂದಿನ ಡಿಕೆ ಶಿವಕುಮಾರ್ ಟ್ವೀಟ್‌ನ ಹಂಚಿಕೊಂಡ ಜೆಡಿಎಸ್:** ಕಾಂಗ್ರೆಸ್ ವಿರೋಧ ಪಕ್ಷದಲ್ಲಿ ಇದ್ದ ಸಂದರ್ಭದಲ್ಲಿ ಅಂದಿನ ಆಡಳಿತ ಪಕ್ಷ ಬಿಜೆಪಿ ಕೆಎಂಎಫ್ ಅನ್ನು ನಂದಿನಿ ಜತೆ ವಿಲೀನಕ್ಕೆ ಮುಂದಾಗಿತ್ತು. ಆ ಸಂದರ್ಭದಲ್ಲಿ ಕಾಂಗ್ರೆಸ್ ದೊಡ್ಡ ಅಭಿಯಾನ ಆರಂಭಿಸಿತ್ತು. ಆ ಗ ಡಿಕೆ ಶಿವಕುಮಾರ್ ಅಮುಲ್ ವಿರೋಧಿಸಿ ಕನ್ನಡಿಗರ ಆತ್ಮಗೌರವ ಮಾರಾಟಕ್ಕಿಲ್ಲ, ನಮ್ಮ ಸ್ವಾಭಿಮಾನ ಅಡವಿಡಲು ಸಿದ್ಧರಿಲ್ಲ ನಂದಿನಿ ಕನ್ನಡಿಗರ ನಾಡಿ ಮಿಡಿತ ಬಿಜೆಪಿಯ ಕೊನೆಗಾಲ ಸನ್ನಿಹಿತ ಎಂದು ಟ್ವೀಟ್ ಮಾಡಿದ್ದರು. ಆ ಟ್ವೀಟ್ ಅನ್ನು ಜೆಡಿಎಸ್ ಹಂಚಿಕೊಂಡಿದೆ.

### ಬಿಎಂಆರ್‌ಸಿಎಲ್ ವಿರುದ್ಧ ಆಕ್ರೋಶ

**ಇನ್ನು ನಮ್ಮ ಮೆಟ್ರೋ ನಿಲ್ದಾಣಗಳಲ್ಲಿ ಅಮುಲ್ ಮಳಿಗೆ ಆರಂಭಿಸಿರುವುದಕ್ಕೆ ಕನ್ನಡ ಪರ ಹೋರಾಟಗಾರರು, ನೆಟ್ಟಿಗರು ಕಿಡಿಕಾರಿದ್ದು, ನಂದಿನಿಗೆ ಆದ್ಯತೆ ನೀಡಿ. ನಮ್ಮ ನಾಡಿನ ಕಂಪನಿಯ ಬ್ರ್ಯಾಂಡ್ ಪ್ರೋತ್ಸಾಹಿಸಿ ಎಂದು ಬಿಎಂಆರ್‌ಸಿಎಲ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.**

## ಗುರುವಾರ ವಿಚಾರಣೆಗೆ ಇಡಿ ಸಮನ್ಸ್ ಬಂದಿದೆ: ಡಿ.ಕೆ ಸುರೇಶ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಐಶ್ವರ್ಯ ಗೌಡ ಪ್ರಕರಣದಲ್ಲಿ ಇಡಿ ಸಮನ್ಸ್ ಬಂದಿದ್ದು, ಗುರುವಾರ ವಿಚಾರಣೆಗೆ ಬರಲು ಹೇಳಿದ್ದಾರೆ ಎಂದು ಮಾಜಿ ಸಂಸದ ಡಿ.ಕೆ ಸುರೇಶ್ ಸ್ಪಷ್ಟನೆ ನೀಡಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮಧ್ಯಾಹ್ನ 12:30ಕ್ಕೆ ಇಡಿಯವರು ಬಂದು ಸಮನ್ಸ್ ನೀಡಿದ್ದಾರೆ. ನಾನು ಹೊರಗೆ ಹೋಗಿದ್ದೆ. ಇಡಿಯವರು ಬಂದಿದ್ದಾರೆ ಎಂದು ಗೊತ್ತಾದ ಮೇಲೆ ಬಂದೆ ಅವರು ಸಮನ್ಸ್ ಕೊಟ್ಟಿದ್ದಾರೆ ಎಂದು ಹೇಳಿದ್ದಾರೆ.

ಸಮನ್ಸ್‌ನಲ್ಲಿ ಯಾವ ಪ್ರಕರಣ ಅಂತ ಇಲ್ಲ. ಆದರೆ ದಾಖಲಾತಿ ನೋಡಿದಾಗ ಈ ಪ್ರಕರಣ ಅಂತ ಗೊತ್ತಾಯ್ತು. ಗುರುವಾರ ವಿಚಾರಣೆಗೆ ಬನ್ನಿ ಅಂದಿದ್ದಾರೆ. ಆದರೆ ಪೂರ್ವ ನಿಯೋಜಿತ ಕಾರ್ಯಕ್ರಮ ಇದೆ. ಅದಕ್ಕೆ ಸೋಮವಾರ ಬರುತ್ತೇನೆ ಎಂದು ಮೌಖಿಕವಾಗಿ ತಿಳಿಸಿದ್ದೇನೆ. ಈಗ ಮೇಲ್ ಮೂಲಕ ಅಧಿಕೃತವಾಗಿ ತಿಳಿಸುತ್ತಿದ್ದೇನೆ ಎಂದಿದ್ದಾರೆ. ನಾನು ಯಾವುದೇ ಅಕೌಂಟ್ ಟ್ರಾನ್ಸಾಕ್ಷನ್ ನಡೆಸಿರಲಿಲ್ಲ. ಅವರು ನಮ್ಮ ಕ್ಷೇತ್ರದವರು ಒಂದೆರಡು ಕಾರ್ಯಕ್ರಮಕ್ಕೆ ಹೋಗಿದ್ದೆ. ನನ್ನ ತಂಗಿ ಅನ್ನೋ ಹೆಸರಲ್ಲಿ ಹೀಗೆಲ್ಲ ಮಾಡಿದ್ದಾರೆ ಎಂದು ಗೊತ್ತಾದಾಗ ನಾನೇ ದೂರು ಕೊಟ್ಟಿದ್ದೇನೆ. ಇಡಿಯವರು 7 ರಿಂದ 8 ದಾಖಲೆಗಳನ್ನು ಕೇಳಿದ್ದಾರೆ. ನನ್ನ ಬಳಿ ದಾಖಲೆ ಕೇಳಿದ್ದು ಅಸಂಬದ್ಧ. ಅದನ್ನ ಹೋದಾಗ ಅಲ್ಲಿ ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

## ಭೂಸ್ವಾಧೀನ ವಿರೋಧಿಸಿ 25ಕ್ಕೆ ದೇವನಹಳ್ಳಿ ಚಲೋ

• ಉದಯವಾಹಿನಿ, ಬೆಂಗಳೂರು



ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿ ವ್ಯಾಪ್ತಿಯಲ್ಲಿ ಭೂಸ್ವಾಧೀನಕ್ಕೆ ಸಂಬಂಧಿಸಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಹೊರಡಿಸಿರುವ ಅಂತಿಮ ಅಧಿಸೂಚನೆ ರದ್ದುಪಡಿಸುವಂತೆ ಆಗ್ರಹಿಸಿ ಜೂನ್ 25ರಂದು ದೇವನಹಳ್ಳಿ ಚಲೋ ಹಮ್ಮಿಕೊಳ್ಳಲಾಗಿದೆ ಎಂದು ಸಂಯುಕ್ತ ಹೋರಾಟ ಕರ್ನಾಟಕ ತಿಳಿಸಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಯುಕ್ತ ಹೋರಾಟ ಕರ್ನಾಟಕದ ಸಂಚಾಲಕ ಬಡಗಲಪುರ ನಾಗೇಂದ್ರ, ಕರ್ನಾಟಕ ಪ್ರಾಂತ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಟಿ. ಯಶವಂತ, ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ರಾಜ್ಯ ಸಂಚಾಲಕ ಮಾವಳ್ಳಿ ಶಂಕರ್, 'ಈ ಅಧಿಸೂಚನೆಯನ್ನು ಸಂಪೂರ್ಣವಾಗಿ ರದ್ದುಪಡಿಸುವಂತೆ ಆಗ್ರಹಿಸಿ, ದೇವನಹಳ್ಳಿ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸಲಾಗುವುದು.

ಈ ಹೋರಾಟದಲ್ಲಿ ರೈತ, ಕಾರ್ಮಿಕ, ದಲಿತ, ಮಹಿಳಾ, ವಿದ್ಯಾರ್ಥಿ ಸಂಘಟನೆಗಳು ಪಾಲ್ಗೊಳ್ಳಲಿವೆ. ಸರ್ಕಾರಗಳಿಗೆ ಈ ಭೂಮಿ ಕೇವಲ ಮಾರಾಟದ ಸರಕಷ್ಟೇ. ಆದರೆ ಇಲ್ಲಿನ ರೈತರಿಗೆ ಇದು ಬದುಕಾಗಿದೆ. ಯಾವುದೇ ಕಾರಣಕ್ಕೂ ನಾವು ಭೂಮಿಯನ್ನು ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದರು. ಚನ್ನರಾಯಪಟ್ಟಣ ಹೋಬಳಿಯ ಭೂಸ್ವಾಧೀನ ಪ್ರಕ್ರಿಯೆ ಕೈಬಿಡುವಂತೆ 1,180 ದಿನಗಳಿಂದ 13 ಗ್ರಾಮಗಳ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ.

# ಹೆಡ್ ಕಾನ್ಸ್‌ಟೇಬಲ್ ನಿಂಗಪ್ಪಗೆ ನ್ಯಾಯಾಂಗ ಬಂಧನ

## ಲೋಕಾಯುಕ್ತ ಪೊಲೀಸರು 32,000 ರೂ. ನಗದು, ಕೆಲವು ಚಿನ್ನಾಭರಣಗಳು ಮತ್ತು ದಾಖಲೆ

• ಉದಯವಾಹಿನಿ, ಬೆಂಗಳೂರು

ಲೋಕಾಯುಕ್ತ ಅಧಿಕಾರಿಗಳ ಹೆಸರಿನಲ್ಲಿ ಹಣ ವಸೂಲಿ ಮಾಡಿದ ಪ್ರಕರಣದಲ್ಲಿ ಬಂಧಿತರಾಗಿರುವ ಚಿತ್ರದುರ್ಗ ಜಿಲ್ಲೆಯ ನಿವೃತ್ತ ಹೆಡ್ ಕಾನ್ಸ್‌ಟೇಬಲ್ ನಿಂಗಪ್ಪ ವಿರುದ್ಧ ನಡೆಯುತ್ತಿರುವ ತನಿಖೆಯಲ್ಲಿ ದೊರೆತ ಸುಳಿವು ಆಧರಿಸಿ, ಲೋಕಾಯುಕ್ತ ಪೊಲೀಸರು ಮಾಜಿ ಪೊಲೀಸ್ ವರಿಷ್ಠಾಧಿಕಾರಿ ಬೆಂಗಳೂರು ನಗರ ವಿಭಾಗ-1 ಶ್ರೀನಾಥ್ ಎಂ. ಜೋಶಿ ಅವರ ಮನೆಯಲ್ಲಿ ಪರಿಶೀಲನೆ ನಡೆಸಿದರು.

ಲೋಕಾಯುಕ್ತ ಮೂಲಗಳಿಂದ' ಮಾಹಿತಿ ಪಡೆದ ನಂತರ, ರಾಜ್ಯ ಸರ್ಕಾರಿ ಅಧಿಕಾರಿಗಳ ವಿರುದ್ಧ ನಡೆವ ಸಂಭವನೀಯ ದಾಳಿಗಳ ಬಗ್ಗೆ ಮಾಹಿತಿ ಸೋರಿಕೆ ಮಾಡಿ ಹಲವಾರು ಸರ್ಕಾರಿ ಅಧಿಕಾರಿಗಳಿಂದ ಕೋಟ್ಯಂತರ ರೂಪಾಯಿ ಸಂಗ್ರಹಿಸಿದ್ದಾರೆ ಎಂಬ ಆರೋಪದ ಮೇಲೆ ನಿಂಗಪ್ಪ ಅವರನ್ನು ಬಂಧಿಸಲಾಗಿದೆ.

ಆಗ್ನೇಯ ಬೆಂಗಳೂರಿನಲ್ಲಿರುವ ಐಪಿಎಸ್ ಅಧಿಕಾರಿಯ ನಿವಾಸದಲ್ಲಿ ನಡೆಸಿದ ಶೋಧದ ಸಂದರ್ಭದಲ್ಲಿ, ಲೋಕಾಯುಕ್ತ ಪೊಲೀಸರು 32,000 ರೂ. ನಗದು, ಕೆಲವು ಚಿನ್ನಾಭರಣಗಳು ಮತ್ತು ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ವಿಚಾರಣೆಗಾಗಿ ತಮ್ಮ ಮುಂದೆ ಹಾಜರಾಗುವಂತೆ ಜೋಶಿ ಅವರಿಗೆ ಪೊಲೀಸರು ನೋಟಿಸ್ ನೀಡಿದ್ದಾರೆ. ಶ್ರೀನಾಥ್ ಜೋಶಿ 2-3 ದಿನಗಳ ಕಾಲಾವಕಾಶ ಕೋರಿದ್ದಾರೆ ಎನ್ನಲಾಗಿದೆ. ಜೋಶಿ ನಿಂಗಪ್ಪ ಅವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ ಎಂದು ತನಿಖೆಯಲ್ಲಿ ಬಹಿರಂಗಗೊಂಡಿದ್ದು, ಇದು ಫೋನ್ ಕಾಲ್ ರೆಕಾರ್ಡ್ ನಲ್ಲಿ ಬಹಿರಂಗವಾಗಿದೆ. ಚಿತ್ರದುರ್ಗದಲ್ಲಿರುವ ನಿಂಗಪ್ಪ ಅವರ ಮನೆಗೆ ಜೋಶಿ ಭೇಟಿ ನೀಡಿದ್ದರು ಎಂದು ಹೇಳಲಾಗಿದ್ದು, ಅಲ್ಲಿ ಅವರನ್ನು ಸನ್ಮಾನಿಸಲಾಯಿತು, ನಿಂಗಪ್ಪ ಬೆಂಗಳೂರಿನಲ್ಲಿರುವ ಐಪಿಎಸ್ ಅಧಿಕಾರಿಯ ಮನೆಗೆ ಭೇಟಿ ನೀಡಿದ್ದರು ಎಂದು ವರದಿಯಾಗಿದೆ. ಜೋಶಿ ಅವರನ್ನು ಕಳೆದ ವಾರ ಬೆಂಗಳೂರು ನಗರ-1 ರ ಲೋಕಾಯುಕ್ತ ಎಸ್‌ಪಿ ಹುದ್ದೆಯಿಂದ ರಿಲೀವ್ ಮಾಡಲಾಯಿತು.

**ಹೈಕೋರ್ಟ್‌ಗೆ ಅರ್ಜಿ ಸಲ್ಲಿಕೆ**

ಜೋಶಿ ಅವರನ್ನು ತಮ್ಮ ಮಾತೃ ಇಲಾಖೆಗೆ ಹಿಂತಿರುಗಿಸಬೇಕಾಗಿರುವುದರಿಂದ ಅವರನ್ನು ಬಿಡುಗಡೆ ಮಾಡಲಾಗಿದೆ ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಸಂಸ್ಥೆಯಲ್ಲಿ ಮೂರು ವರ್ಷಗಳನ್ನು ಪೂರ್ಣಗೊಳಿಸಿದ್ದರಿಂದ ಅವರ ಜೋಶಿ ಅವರ ಕೋರಿಕೆಯ ಮೇರೆಗೆ ರಿಲೀವ್ ಮಾಡಲಾಗಿದೆ ಎಂದು ತಿಳಿದು ಬಂದಿದೆ. ನಿಂಗಪ್ಪ ತಮ್ಮ ಹೆಸರಿನಲ್ಲಿ ಮತ್ತು ಅವರ ಪತ್ನಿ ಮತ್ತು ಕೆಲವು ಐಪಿಎಸ್ ಅಧಿಕಾರಿಗಳ ಹೆಸರಿನಲ್ಲಿ ಹಲವಾರು ಕೋಟಿ ರೂಪಾಯಿಗಳನ್ನು ಕ್ರಿಪ್ಟೋಕರೆನ್ಸಿಯಲ್ಲಿ ಹೂಡಿಕೆ ಮಾಡಿದ್ದಾರೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.




ಉದಯವಾಹಿನಿ ಚಿತ್ರ

ಅವರು ಎಂಟು ಕ್ರಿಪ್ಟೋಕರೆನ್ಸಿ ವಿನಿಮಯ ಸಂಸ್ಥೆಗಳಲ್ಲಿ 4.19 ಕೋಟಿ ರೂ. ಹೂಡಿಕೆ ಮಾಡಿದ್ದರುಎಂದು ತಿಳಿದು ಬಂದಿದೆ. ಇನ್ನೂ ಹಲವಾರು ವಿನಿಮಯ ಸಂಸ್ಥೆಗಳಲ್ಲಿ ಅವರು ಹೂಡಿಕೆ ಮಾಡಿದ ಹಣದ ವಿವರಗಳನ್ನು ಲೋಕಾಯುಕ್ತ ಪೊಲೀಸರು ಪಡೆಯಬೇಕಾಗಿದೆ. ಪ್ರತಿಕ್ರಿಯೆ ಸಲ್ಲಿಸಲು ಲೋಕಾಯುಕ್ತ ಸಾರ್ವಜನಿಕ ಅಭಿಯೋಜಕರಿಗೆ ನಿರ್ದೇಶಿಸಿದ ನ್ಯಾಯಮೂರ್ತಿ ಎಸ್.ಆರ್. ಕೃಷ್ಣಕುಮಾರ್, ಚಂದ್ರಕಲಾ ಅವರ ಅರ್ಜಿಯ ವಿಚಾರಣೆಯನ್ನು ಮಂಗಳವಾರಕ್ಕೆ ಮುಂದೂಡಿದರು.

ಮೇ 31 ರಂದು ರಾತ್ರಿ 9 ಗಂಟೆಗೆ ಲೋಕಾಯುಕ್ತ ಪೊಲೀಸರು ತಮ್ಮ ಮನೆಯನ್ನು ಶೋಧಿಸಿದರು. ರಾತ್ರಿ 9.30 ಕ್ಕೆ ನಡೆದುಕೊಂಡು ಹೋಗುತ್ತಿದ್ದಾಗ ತಮ್ಮ ಪತಿಯನ್ನು ಬಂಧಿಸಲಾಯಿತು ಎಂದು ನಿಂಗಪ್ಪ ಅವರ ಪತ್ನಿ ಹೇಳಿದ್ದಾರೆ , ಎರಡು ದಿನಗಳವರೆಗೆ ಅವರು ಎಲ್ಲಿದ್ದಾರೆಂದು ತಿಳಿದಿರಲಿಲ್ಲ. ಜೂನ್ 2 ರಂದು, ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಯಿತು ಮತ್ತು ಮರುದಿನ ಅವರನ್ನು ನ್ಯಾಯಾಂಗ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು.

ಆದರೆ, ಲೋಕಾಯುಕ್ತ ಪೊಲೀಸರು ಜೂನ್ 2 ರಂದು ಸಂಜೆ 6.10 ಕ್ಕೆ ಬೆಂಗಳೂರಿನ ರಾಜಾಜಿನಗರದ ಮಾರುತಿ ಮೈದಾನದ ಬಳಿ ಅವರನ್ನು ಬಂಧಿಸಿ, ಸಂಜೆ 6.30 ಕ್ಕೆ ಲೋಕಾಯುಕ್ತ ಕಚೇರಿಗೆ ಕರೆತರಲಾಗಿದೆ ಎಂದು ರಿಮಾಂಡ್ ಮೆಮೊದಲ್ಲಿ ತೋರಿಸಿದ್ದಾರೆ.

> **ಮೇ 31 ರಿಂದ ಜೂನ್ 2 ರ ಸಂಜೆವರೆಗೆ ಯಾವುದೇ ಬಂಧನವನ್ನು ತೋರಿಸಲಾಗಿಲ್ಲ ಹಾಗೂ ಅವರ ಪತಿಗೆ ಯಾವುದೇ ಬಂಧನದ ಆಧಾರಗಳನ್ನು ನೀಡಲಾಗಿಲ್ಲ. ಆದ್ದರಿಂದ, ಬಂಧನ ಕಾನೂನುಬಾಹಿರವಾಗಿದೆ ಎಂದು ನಿಂಗಪ್ಪ ಅವರ ಪತ್ನಿ ಹೇಳಿದ್ದಾರೆ. ನಿಂಗಪ್ಪನನ್ನು ಬಂಧಿಸಿ ವಿಚಾರಣೆ ಕೈಗೊಂಡಾಗ ಪ್ರಕರಣ ಬೆಳಕಿಗೆ ಬಂದಿದೆ. ಇಲಾಖೆಯ ಹಿರಿಯ ಅಧಿಕಾರಿಗಳೇ ನಿಂಗಪ್ಪ ಜೊತೆಗೆ ಶಾಮೀಲಾಗಿದ್ದಾರೆಂಬ ಮಾಹಿತಿ ದೊರಕಿದೆ.**

> **ಆರೋಪಿಯನ್ನು 14 ದಿನ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ. ಈ ವೇಳೆ ಆರೋಪಿ ಪರ ವಕೀಲರು ಜಾಮೀನಿಗೆ ಅರ್ಜಿ ಸಲ್ಲಿಸಿದರು. ಜೂನ್ 19ರಂದು ಜಾಮೀನು ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ನ್ಯಾಯಾಲಯ ಆದೇಶಿಸಿತು. ಮತ್ತೊಂದೆಡೆ, ನಿಂಗಪ್ಪ ಅವರ ಪತ್ನಿ ಚಂದ್ರಕಲಾ ಅವರು ತಮ್ಮ ಪತಿಯ ಬಂಧನ ಕಾನೂನುಬಾಹಿರ ಎಂದು ಆರೋಪಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದರು.**

# ನೀರಿನ ವಿಚಾರದಲ್ಲಿ ರಾಜಕಾರಣ ಮಾಡಲ್ಲ


## ಬೆಂಗಳೂರು ಮಹಾನಗರ ಪಾಲಿಕೆ ಚುನಾವಣೆ ನಡೆಸಬೇಕು ಎಂದು ಆಗ್ರಹ

• ಉದಯವಾಹಿನಿ, ತುಮಕೂರು

ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ವಿಚಾರದಲ್ಲಿ ರಾಜಕಾರಣ ಮಾಡುವುದಿಲ್ಲ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸ್ಪಷ್ಟಪಡಿಸಿದರು.ನಗರದ ಸಿದ್ಧಗಂಗಾ ಮಠಕ್ಕೆ ಭೇಟಿ ನೀಡಿ ಸ್ವಾಮೀಜಿ ಆಶೀರ್ವಾದ ಪಡೆದುಕೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಹೇಮಾವತಿ ನೀರಿನ ವಿಚಾರದಲ್ಲಿ ರಾಜ್ಯ ಸರ್ಕಾರ ಸಂಘರ್ಷಕ್ಕೆ ಎಡೆಮಾಡಿಕೊಟ್ಟಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಜಲ ಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡಿಲ್ಲ. ರೈತ ಮುಖಂಡರು, ಜನಪ್ರತಿನಿಧಿಗಳ ಜತೆ ಚರ್ಚಿಸಿ, ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಿತ್ತು. ಸಂಘರ್ಷಕ್ಕೆ ದೂಡಿ, ಸುಮ್ಮನೆ ಕುಳಿತಿದ್ದಾರೆ ಎಂದು ಆರೋಪಿಸಿದರು.

ಜೆಡಿಎಸ್ ಮುಳುಗುತ್ತಿರುವ ಹಡಗು ಎಂದು ಕಾಂಗ್ರೆಸ್ ಆರೋಪಕ್ಕೆ ಪ್ರತಿಕ್ರಿಯಿಸಿ, ಯಾವುದು ಮುಳುಗಿರುವ ದೋಣಿ ಎಂಬುದು ಗೊತ್ತಾಗುತ್ತಿದೆ.

ಪಕ್ಷಕ್ಕೆ ರಾಜ್ಯದ ಜನರು ಆಶೀರ್ವಾದ ಮಾಡಿದ್ದಾರೆ. ಅನೇಕ ಚುನಾವಣೆಯಲ್ಲಿ ಇದು ಸಾಬೀತಾಗಿದೆ. ಜೆಡಿಎಸ್ ಪ್ರಾದೇಶಿಕ ಪಕ್ಷವಾಗಿದ್ದು, ಶೇ 20ರಷ್ಟು ಮತಗಳು ಪಕ್ಷದ ಪರವಾಗಿವೆ. ಜಿಲ್ಲೆಯಲ್ಲಿ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಶೇ 34ರಷ್ಟು ಮತಗಳನ್ನು ನೀಡಿದ್ದು, ಪಕ್ಷ ಮೊದಲ ಸ್ಥಾನದಲ್ಲಿದೆ. ಚುನಾವಣೆಯಲ್ಲಿ ಸೋತಿರಬಹುದು. ಮತ ಗಳಿಕೆಯಲ್ಲಿ ಇತರ ಪಕ್ಷಗಳಿಗಿಂತ ಮುಂದಿದ್ದೇವೆ' ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಜಿಲ್ಲಾ ಘಟಕದ ಅಧ್ಯಕ್ಷ ಆರ್.ಸಿ.ಅಂಜಿನಪ್ಪ, ಕಾರ್ಯಾಧ್ಯಕ್ಷ ಟಿ.ಆರ್.ನಾಗರಾಜು, ಶಾಸಕ ಎಚ್.ನಿಂಗಪ್ಪ, ಮುಖಂಡರಾದ ಕೆ.ಟಿ.ಶಾಂತಕುಮಾರ್, ಧರಣೇಂದ್ರ ಕುಮಾರ್, ಲಕ್ಷ್ಮಿನರಸಿಂಹರಾಜು ನರಸಿಂಹಮೂರ್ತಿ, ಶ್ರೀನಿವಾಸ್, ಕುಂಭಣ್ಣ, ದಾಂಡೇಲಿ ಗಂಗಣ್ಣ, ಗಂಗಹನುಮಯ್ಯ, ಲೀಲಾವತಿ, ಮೆಡಿಕಲ್ ಮಧು, ಸೋಲಾರ್ ಕೃಷ್ಣಮೂರ್ತಿ, ದರ್ಶನ್ ಯಾದವ್, ಲಕ್ಷ್ಮಮ್ಮ ವೀರಣ್ಣಗೌಡ, ಸುಮ ಜಗನ್ನಾಥ್, ಕುಸುಮ, ತಾಹೇರಾ ಬಾನು ಮತ್ತಿತರರು ಉಪಸ್ಥಿತರಿದ್ದರು. ಶಾಸಕರಾದ ಬಿ.ಸುರೇಶ್‌ಗೌಡ, ಜಿ.ಬಿ.ಜ್ಯೋತಿಗಣೇಶ್, ಎಚ್.ಎಸ್. ರವಿಶಂಕರ್ ಸೇರಿದಂತೆ ಬಿಜೆಪಿ ಮುಖಂಡರು ಸ್ವಾಗತಿಸಿದರು.

ಕಾಂಗ್ರೆಸ್ ಮುಳುಗುತ್ತಿರುವ ಹಡಗು


ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತದಿಂದ ಜನರು ಬೇಸತ್ತಿದ್ದಾರೆ.

**ಕಾಂಗ್ರೆಸ್ ಮುಳುಗುತ್ತಿರುವ ಹಡಗು ಎಂಬುದು ಎಲ್ಲರಿಗೂ ಗೊತ್ತಿದೆ. ಇಂತಹ ಪಕ್ಷಕ್ಕೆ ಜೆಡಿಎಸ್‌ನ ಯಾವ ಶಾಸಕರು ಹೋಗುವ ಮನಸ್ಥಿತಿಯಲ್ಲಿ ಇಲ್ಲ ಎಂದು ವಿಧಾನಸಭೆ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ.ಸುರೇಶ್ ಬಾಬು ಹೇಳಿದರು. ರಾಜ್ಯದಲ್ಲಿ ಹಲವಾರು ಕ್ಷೇತ್ರಗಳನ್ನು ಆಯ್ಕೆ ಮಾಡಿಕೊಂಡಿದ್ದು ಸಂಘಟನೆ ಮಾಡಲು ನಿರ್ಧರಿಸಲಾಗಿದೆ. ಮುಂಬರುವ ಜಿಲ್ಲಾ ತಾಲ್ಲೂಕು ಪಂಚಾಯಿತಿ ಚುನಾವಣೆಯನ್ನು ಸಮರ್ಥವಾಗಿ ಎದುರಿಸಲು ಸಂಘಟನೆ ಮಾಡಲಾಗುತ್ತಿದೆ ಎಂದರು. ಡಿ.ಕೆ.ಶಿವಕುಮಾರ್ ತಮ್ಮ ಕ್ಷೇತ್ರಕ್ಕೆ ಹೇಮಾವತಿ ನೀರು ತೆಗೆದುಕೊಂಡು ಹೋಗಲು ವಾಮಮಾರ್ಗ ಅನುಸರಿಸುತ್ತಿದ್ದಾರೆ. ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ನಿರ್ಮಾಣ ಮಾಡಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.**

# ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣಕ್ಕೆ ಸುಮಲತಾ ವಿರೋಧ

• ಉದಯವಾಹಿನಿ, ಮಂಡ್ಯ

ಕೆಆರ್‌ಎಸ್ ಬಳಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಿಸುವುದನ್ನ ಮಂಡ್ಯದ ಜನತೆ ಹಾಗೂ ರೈತ ಸಂಘಗಳು ವಿರೋಧಿಸಿದ ಹೊರತಾಗಿಯೂ ಸರ್ಕಾರ ತನ್ನ ನಿರ್ಧಾರವನ್ನು ಹಿಂಪಡೆಯದಿರುವುದು ಖಂಡನೀಯ ಎಂದು ಮಾಜಿ ಸಂಸದೆ ಸುಮಲತಾ ಅಂಬರೀಶ್ ತಿಳಿಸಿದ್ದಾರೆ. ಈ ಸಂಬಂಧ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿರುವ ಸುಮಲತಾ ಅವರು ಸರ್ಕಾರದ ನಡೆಗೆ ವಿರೋಧ ವ್ಯಕ್ತಪಡಿಸಿದ್ದಾರೆ.



ಕೃಷ್ಣರಾಜಸಾಗರ ಅಣೆಕಟ್ಟಿನ ಬಳಿ ಅಮ್ಯೂಸ್‌ಮೆಂಟ್ ಪಾರ್ಕ್ ನಿರ್ಮಿಸುವುದನ್ನ ಮಂಡ್ಯದ ಜನತೆ ಹಾಗೂ ರೈತ ಸಂಘಗಳು ವಿರೋಧಿಸಿದ ಹೊರತಾಗಿಯು ಸರ್ಕಾರ ತನ್ನ ನಿರ್ಧಾರವನ್ನು ಹಿಂಪಡೆಯದಿರುವುದು ಖಂಡನೀಯ. ಇದು ಕೇವಲ ಒಂದು ಅಣೆಕಟ್ಟಲ್ಲ, ಅದು ನಮ್ಮ ಇತಿಹಾಸ, ಸಂಸ್ಕೃತಿ ಮತ್ತು ಮಂಡ್ಯದ ಜನತೆಯ ಜೀವನಾಡಿ. ಅದರ ಪಾವಿತ್ರ್ಯತೆ ಮತ್ತು ಪರಿಸರ ಸೂಕ್ಷ್ಮತೆಯನ್ನು ಕಾಪಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ನಮ್ಮ ಮಂಡ್ಯದ ಅಭಿವೃದ್ಧಿಗೆ ಆದ್ಯತೆ ನೀಡುವ ಬದಲು ಇಂತಹ ದುಂದು ವೆಚ್ಚಕ್ಕೆ ಮುಂದಾಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ಈ ಯೋಜನೆಯ ವಿರೋಧಕ್ಕೆ ನನ್ನ ಬೆಂಬಲ ಸೂಚಿಸುತ್ತಿದ್ದೇನೆ. ಶತಮಾನಗಳ ಇತಿಹಾಸವಿರುವ ಕನ್ನಂಬಾಡಿ ಕಟ್ಟೆಯ ಅಸ್ತಿತ್ವಕ್ಕೆ ಧಕ್ಕೆ ತರುವ ಯಾವುದೇ ಯೋಜನೆಯನ್ನು ಜಾರಿಗೆ ತರಲು ಸ್ವಾಭಿಮಾನಿ ಮಂಡ್ಯದ ಜನತೆ ಅವಕಾಶ ಕೊಡಲಾರೆವು ಎಂದು ಸರ್ಕಾರಕ್ಕೆ ಮಾಜಿ ಸಂಸದೆ ಎಚ್ಚರಿಕೆ ನೀಡಿದ್ದಾರೆ.

## ಮಿನಿ ನ್ಯೂಸ್

### ಚಿರತೆ ಕೊಂದ ಆರೋಪಿ ಬಂಧನ

• ಉದಯವಾಹಿನಿ, ಕುಣಿಗಲ್

ತಾಲ್ಲೂಕಿನ ಹುತ್ರಿದುರ್ಗ ಹೋಬಳಿ ವಡಾಘಟ್ಟ ಗ್ರಾಮಕ್ಕೆ ಹೊಂದಿಕೊಂಡಿರುವ ಅರಣ್ಯ ಪ್ರದೇಶದಲ್ಲಿ ರಾತ್ರಿ ಗುಂಡು ಹಾರಿಸಿ ನಾಲ್ಕು ವರ್ಷದ ಗಂಡು ಚಿರತೆಯನ್ನು ಕೊಂದಿದ್ದು, ಪ್ರಮುಖ ಆರೋಪಿಯನ್ನು ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ. ವಡಾಘಟ್ಟ ಗ್ರಾಮದ ನಾಗರಾಜು ಬಂಧಿತ. ಈತನ ಸಹಚರರಾದ ಮೂರ್ತಿ ಮತ್ತು ರವಿ ಜತೆಗೂಡಿ ಅರಣ್ಯದ ಅಂಚಿನಲ್ಲಿ ಕಾಣಿಸಿಕೊಂಡಿದ್ದ ಚಿರತೆಯನ್ನು ಗುಂಡು ಹಾರಿಸಿ ಕೊಂದಿದ್ದರು. ಮಾಹಿತಿ ತಿಳಿದ ವಲಯ ಅರಣ್ಯಾಧಿಕಾರಿ ಜಗದೀಶ್ ಅವರ ತಂಡ ಪ್ರಮುಖ ಆರೋಪಿಯನ್ನು ಬಂಧಿಸಿದ್ದು, ಉಳಿದ ಇಬ್ಬರು ಪರಾರಿಯಾಗಿದ್ದಾರೆ.

### ಶ್ರೀ ರಾಮ ಭಾರತೀಯರ ಆದರ್ಶಪುರುಷ

• ಉದಯವಾಹಿನಿ, ಕೆ.ಆರ್.ಪೇಟೆ.

ಭಕ್ತಿಯ ಮೂಲಕ ಭಗವಂತನನ್ನು ಕಾಣುವ ಸರಳ ಮಾರ್ಗವನ್ನು ಜಗತ್ತಿಗೆ ತೋರಿಸಿಕೊಟ್ಟವರು ಭಾರತೀಯರು ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಠದ ಪೀಠಾಧ್ಯಕ್ಷ ಡಾ.ನಿಶ್ಚಲಾನಂದನಾಥ ಸ್ವಾಮೀಜಿ ಹೇಳಿದರು. ಅವರು ತಾಲ್ಲೂಕಿನ ಬೂಕನಕೆರೆ ಗ್ರಾಮದಲ್ಲಿ ಗ್ರಾಮಸ್ಥರು ನೂತನವಾಗಿ ನಿರ್ಮಿಸಿರುವ ಶ್ರೀ ರಾಮಮಂದಿರವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು. ಜಗತ್ತಿಗೆ ಶಾಂತಿ ಬಯಸಿದ, ಸರ್ವೇಜನಹ: ಸುಖಿನೋ ಭವಂತು ಎಂದು ಹೇಳುವ ಮೂಲಕ ಜಗತ್ತಿನ ಸರ್ವಜನರ ಸುಖ ಬಯಸಿದವರು ಭಾರತೀಯರು. ಶ್ರೀರಾಮ ಸಮಸ್ತ ಭಾರತೀಯರ ಆದರ್ಶಪುರುಷ. ಆದರೆ ನಮ್ಮ ನೆಲದಲ್ಲಿಯೇ ನಾವು ಶ್ರೀರಾಮ ಮಂದಿರ ನಿರ್ಮಿಸಲು ಸುಮಾರು 500 ವರ್ಷಗಳ ಕಾಲ ಹೋರಾಟ ನಡಸಬೇಕಾಯಿತು. ಕೋರ್ಟು ಕಛೇರಿಗಳ ನಿರಂತರ ಹೋರಾಟದ ಫಲವಾಗಿ ಅಯೋಧ್ಯೆಯಲ್ಲಿ ಭವ್ಯವಾದ ಶ್ರೀರಾಮಮಂದಿರ ನಿರ್ಮಾಣಗೊಂಡಿದೆ. ಅಯೋಧ್ಯೆಯ ಶ್ರೀ ರಾಮಮಂದಿರ ಭಾರತೀಯರ ಘನತೆ ಮತ್ತು ಹೆಮ್ಮೆಯ ಪ್ರತೀಕ ಎಂದು ನಿಶ್ಚಲಾನಂದನಾಥ ಶ್ರೀಗಳು ಅಭಿಪ್ರಾಯಪಟ್ಟರು.

ಸರ್ಕಾರಿ ಅಧಿಕಾರಿಯಾಗಿ ತಮ್ಮ ಪೂರ್ವಾಶ್ರಮದ ದಿನಗಳನ್ನು ಸ್ಮರಿಸಿದ ನಿಶ್ಚಲಾನಂದನಾಥ ಶ್ರೀಗಳು ನಾನು ಕೆ.ಆರ್.ಪೇಟೆ ನೆಲಕ್ಕೆ ಕಾಲಿಟ್ಟರೆ ನಾನು ನನ್ನ ತಾಯಿಯ ಮನೆಗೆ ಬಂದ ಅನುಭವವಾಗುತ್ತದೆ. ಇಲ್ಲಿಯ ಜನ ನನಗೆ ಅಂದು ಮತ್ತು ವಿಶೇಷ ಪ್ರೀತಿ ನೀಡುತ್ತಿದ್ದಾರೆ.

# ಸರ್ಕಾರದ ವಿರುದ್ಧ ಸ್ಥಳೀಯ ನಿವಾಸಿಗಳ ಕಿಡಿ, ಪ್ರತಿಭಟನೆ

• ಉದಯವಾಹಿನಿ, ಮೈಸೂರು

ಚಾಮುಂಡಿ ಬೆಟ್ಟದಲ್ಲಿ ಜೂನ್ 27ರಿಂದ ತಿಂಗಳ ಕಾಲ ಆಷಾಢ ಶುಕ್ರವಾರ ಆಚರಣೆ ನಡೆಯಲಿದೆ, ಇದರ ನಡುವೆ ವಿಶೇಷ ದರ್ಶನಕ್ಕೆ 2,000 ರೂ. ಟಿಕೆಟ್ ಪರಿಚಯಿಸಿದ ರಾಜ್ಯ ಸರ್ಕಾರದ ವಿರುದ್ಧ ಸ್ಥಳೀಯ ನಿವಾಸಿಗಳು ಕಿಡಿಕಾರಿದ್ದು, ಪ್ರತಿಭಟನೆ ನಡೆಸಿದ್ದಾರೆ. ನಗರದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಜಮಾವಣೆಗೊಂಡ ಪ್ರತಿಭಟನಾಕಾರರು, ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಚಾಮುಂಡಿ ಬೆಟ್ಟದಲ್ಲಿ ಸರಿಯಾಗಿ ಕುಡಿಯುವ ನೀರೇ ಇಲ್ಲ. 5-6 ದಿನಗಳಿಗೊಮ್ಮೆ ಬೆಟ್ಟಕ್ಕೆ ನೀರು ಬಿಡಲಾಗುತ್ತಿದೆ.

ಇದರಿಂದಾಗಿ ಅಲ್ಲಿನ ಸ್ಥಳೀಯ ನಿವಾಸಿಗಳು ಪರದಾಡುತ್ತಿದ್ದಾರೆ. ಬಹಳ ವರ್ಷಗಳ ಹಿಂದೆಯೇ ಆರಂಭವಾದ ಪೈಪ್‌ಲೈನ್ ಕಾಮಗಾರಿ ಇನ್ನೂ ಪೂರ್ಣವಾಗಿಲ್ಲ. ಇದರಿಂದ ಬೆಟ್ಟದಲ್ಲಿ ನೀರಿಗಾಗಿ ಹಾಹಾಕಾರ ಉಂಟಾಗುತ್ತಿದೆ. ಜೊತೆಗೆ ಚಾಮುಂಡಿ ಬೆಟ್ಟಕ್ಕೆ ಆಗಮಿಸುವ ಪ್ರವಾಸಿಗರಿಗೆ ಸರಿಯಾದ ಮೂಲಸೌಕರ್ಯಗಳೇ ಇಲ್ಲ.

ದರ್ಶನಕ್ಕೆ 2000 ರೂ ವಿಶೇಷ ಟಿಕೆಟ್


ಉದಯವಾಹಿನಿ ಚಿತ್ರ

ಕುಡಿಯುವ ನೀರು, ಶೌಚಗೃಹ, ಸ್ನಾನಗೃಹಗಳಿಲ್ಲ. ಈಗಿರುವ ಒಂದೇ ಶೌಚಗೃಹದಲ್ಲಿ ಮೂತ್ರ, ಮಲ ವಿಸರ್ಜನೆಗೆ 5, 10 ರೂ. ವಸೂಲಿ ಮಾಡಲಾಗುತ್ತಿದೆ. ಇದನ್ನು ಉಚಿತ ಮಾಡಬೇಕು. ಆಷಾಢದಲ್ಲಿ ಬೆಟ್ಟಕ್ಕೆ ಲಕ್ಷಾಂತರ ಭಕ್ತರು ಬರುವುದರಿಂದ ಕೂಡಲೇ ಮೂಲ ಸೌಕರ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಚಾಮುಂಡೇಶ್ವರಿ ದೇವಸ್ಥಾನದ ಸೇವಾ ಶುಲ್ಕಗಳನ್ನು ಏಕಾಏಕಿ 300 ರೂ. ನಿಂದ 550 ರೂ.ಗೆ ಏರಿಸಿರುವುದು ಖಂಡನೀಯ. ಭಕ್ತಾದಿಗಳ ಧಾರ್ಮಿಕ ಆಚರಣೆ ಮೇಲೆ ಕಣ್ಣಿಟ್ಟು, ಬಿಟ್ಟಿ ಭಾಗ್ಯಗಳಿಗೆ ಹಣ ಹೊಂದಿಸಲು ಹೊರಟಿರುವುದು ದುರಾದೃಷ್ಟಕರ ಸಂಗತಿ.

**ಈ ವರ್ಷ ಆಷಾಢ ಶುಕ್ರವಾರದ ವಿಶೇಷ ದರ್ಶನಕ್ಕಾಗಿ 2000 ರೂ. ಟಿಕೆಟ್ ಮಾಡಿರುವುದು ಖಂಡನೀಯ. ಸಾರ್ವಜನಿಕರಿಂದ ಹಣವನ್ನು ಹಗಲು ದರೋಡೆ ಮಾಡಲು ಹೊರಟಿದೆ. ದೇವರ ದರ್ಶನಕ್ಕೆ ಸರ್ಕಾರ ಇಷ್ಟೊಂದು ದುಬಾರಿ ಟಿಕೆಟ್ ಮಾಡಲು ಹೊರಟಿರುವುದು ನಾಚಿಕೆಗೇಡಿನ ಸಂಗತಿ. ಸರ್ಕಾರ ಜನರಿಗೆ ಒಂದು ಕೈಯಲ್ಲಿ ಕೊಟ್ಟು ದೇವರ ಹೆಸರಿನಲ್ಲಿ ಇನ್ನೊಂದು ಕೈಯಿಂದಕಿತ್ತುಕೊಳ್ಳುತ್ತಿದೆ. ಕೂಡಲೇ 2000 ರೂ. ದುಬಾರಿ ಟಿಕೆಟ್ ರದ್ದುಗೊಳಿಸಬೇಕು. ಸೇವಾಶುಲ್ಕವನ್ನು ಯಥಾ ಸ್ಥಿತಿಗೆ ತರಬೇಕು ಎಂದು ಒತ್ತಾಯಿಸಿದರು.**

# ಕರುನಾಡ ಕನ್ನಡ ಸಂಘದಿಂದ ಮಾಸ್ತಿ ಜಯಂತಿ

• ಉದಯವಾಹಿನಿ, ಮುಳಬಾಗಿಲು

ನಗರದ ಹೊರವಲಯದ ಎಸ್.ಡಿ.ಸಿ ಕಾಲೇಜಿನಲ್ಲಿ ಕರುನಾಡ ಕನ್ನಡ ಸಂಘದಿಂದ ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಜಯಂತಿ ಆಚರಿಸಲಾಯಿತು ಈ ವೇಳೆ ಮಕ್ಕಳಿಗೆ ಪ್ರಬಂಧ ಸೇರಿದಂತೆ ಇನ್ನಿತರ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಎಸ್.ಡಿ.ಸಿ. ವಿದ್ಯಾಸಂಸ್ಥೆಗಳ ಕಾರ್ಯದರ್ಶಿ ಉಷಾ ಗಂಗಾಧರ್ ಮಾತನಾಡಿ, ಗಡಿನಾಡು ಪ್ರದೇಶಗಳಲ್ಲಿ ತೆಲುಗು ಭಾಷೆ ಹೆಚ್ಚಾಗಿ ಬಳಕೆ ಇದ್ದರೂ, ಕನ್ನಡ ನಾಡು, ನುಡಿ, ಭಾಷೆ ಮತ್ತು ಸಾಹಿತ್ಯಕ್ಕೆ ನಮ್ಮ ಜನ ಮೊದಲ ಪ್ರಾಶಸ್ತ್ರ ನೀಡಿದ್ದಾರೆ. ಇದೇ ಕಾರಣಕ್ಕೆ ಕನ್ನಡ ಭಾಷೆ ಜೀವಂತವಾಗಿದೆ' ಎಂದರು.

ಬಿ.ಎಸ್.ವೆಂಕಟಾಚಲಪತಿ ಮಾತನಾಡಿ ಮಾಸ್ತಿಯವರ ಸಾಹಿತ್ಯಕ್ಕೆ ಜ್ಞಾನಪೀಠ ಪ್ರಶಸ್ತಿ ಲಭಿಸಿರುವುದು ನಮ್ಮ ಜಿಲ್ಲೆಗೆ ಹೆಮ್ಮೆಯ ವಿಷಯ. ಇದೇ ರೀತಿ ಸಾಧನೆ ಮಾಡಲು ಯುವಕರು ಹಾಗೂ ಯುವ ಕವಿಗಳು ಶ್ರಮಿಸಬೇಕು ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ತು ಕಾರ್ಯದರ್ಶಿ ಡಾ.ಶಂಕರಪ್ಪ ಹಾಗೂ ಬಿ.ಎಸ್. ವೆಂಕಟಾಚಲಪತಿ ಅವರು ಮಾಸ್ತಿ ವೆಂಕಟೇಶ ಅಯ್ಯಂಗಾರ್ ಬಗ್ಗೆ ಮಾತನಾಡಿದರು. ಕರುನಾಡ ಕನ್ನಡ ಸಂಘದ ಅಧ್ಯಕ್ಷ ಈ. ಶ್ರೀನಿವಾಸ ಗೌಡ, ಅರುಣ್‌ಕುಮಾರ್, ಮುರಳಿಕೃಷ್ಣ, ನಂಜಾಮರಿ, ಎನ್.ದೀಕ್ಷಾ, ಅತ್ತಿಕುಂಟೆ ಎಸ್. ಸುಬ್ರಮಣಿ, ಸಿದ್ದಲಿಂಗಯ್ಯ ಕೆ.ಸಿ.ವಿಜಯ್‌ಕುಮಾರ್ ಎಂ.ವಿ.ಸುಬ್ರಮಣಿ, ಚಂದ್ರಶೇಖರ್, ಚಂದ್ರಪ್ಪ, ಸೈಪ್‌ಉಲ್ಲಾ, ವಿವೇಕ್, ಬಾಬು ಇದ್ದರು.


ಉದಯವಾಹಿನಿ ಚಿತ್ರ

# ಗುಬ್ಬಿ ವೀರಣ್ಣ ಕಲಾಕ್ಷೇತ್ರ ಆಧುನೀಕರಣಕ್ಕೆ ರೂ.4 ಕೋಟಿ

• ಉದಯವಾಹಿನಿ, ತುಮಕೂರು

ಹೃದಯ ಭಾಗದಲ್ಲಿರುವ, ಕಲಾ ಚಟುವಟಿಕೆಗಳ ಕೇಂದ್ರವಾಗಿರುವ ಗುಬ್ಬಿ ವೀರಣ್ಣ ಕಲಾಕ್ಷೇತ್ರವನ್ನು 4 ಕೋಟಿ ವೆಚ್ಚದಲ್ಲಿ ಆಧುನೀಕರಣ ಮಾಡಲು ಉದ್ದೇಶಿಸಲಾಗಿದೆ. ಕಲಾಕ್ಷೇತ್ರದ ಆಧುನೀಕರಣಕ್ಕೆ ಎಚ್‌ಎಎಲ್ ಕಂಪನಿಯು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯಿಂದ 4 ಕೋಟಿ ಅನುದಾನ ನೀಡುತ್ತಿದೆ. ಕೆಲ ವರ್ಷಗಳ ಹಿಂದೆ ಸರ್ಕಾರದ ವತಿಯಿಂದ ಆಧುನೀಕರಣ ಕಾಮಗಾರಿ ಕೈಗೊಂಡಿದ್ದರೂ ಅಗತ್ಯ ಸೌಕರ್ಯ ಕಲ್ಪಿಸಲು ಸಾಧ್ಯವಾಗಿರಲಿಲ್ಲ. ಧ್ವನಿ ವ್ಯವಸ್ಥೆಯಂತೂ ಹಾಳಾಗಿತ್ತು.

ನಾಟಕ ಸೇರಿದಂತೆ ಕಲಾ ಚಟುವಟಿಕೆಗಳನ್ನು ನಡೆಸಲು ಕಲಾವಿದರು ಹರಸಾಹಸ ಪಡುತ್ತಿದ್ದರು.

ವೇದಿಕೆ ನವೀಕರಣ, ನೆಲಹಾಸು, ಪರದೆ ವ್ಯವಸ್ಥೆ, ಹೈಟೆಕ್ ಧ್ವನಿ, ಬೆಳಕು, ಶೌಚಾಲಯ ಆಧುನೀಕರಣ, ನಿರಂತರ ವಿದ್ಯುತ್ ಪೂರೈಕೆಗಾಗಿ ಜನರೇಟರ್, ಪ್ರೇಕ್ಷಕರಿಗೆ ಆರಾಮದಾಯಕ ಆಸನಗಳ ವ್ಯವಸ್ಥೆ ಸೇರಿದಂತೆ ಮತ್ತಿತರ ಸೌಲಭ್ಯ ಕಲ್ಪಿಸಲಾಗುತ್ತದೆ. ಕಲಾಕ್ಷೇತ್ರದ ಹೊರಾಂಗಣದಲ್ಲಿ ಉದ್ಯಾನವನ ಅಭಿವೃದ್ಧಿ, ವಾಹನಗಳ ನಿಲುಗಡೆ, ರಸ್ತೆ ನಿರ್ಮಾಣದಂತಹ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುತ್ತದೆ. ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಎಚ್‌ಎಎಲ್ ಅಧಿಕಾರಿಗಳೊಂದಿಗೆ ರಂಗ ಮಂದಿರಕ್ಕೆ ಭೇಟಿನೀಡಿ ಪರಿಶೀಲಿಸಿದರು. ಅದಷ್ಟು ಬೇಗ ಕೆಲಸ ಆರಂಭಿಸುವಂತೆ ಎಚ್‌ಎಎಲ್ ಅಧಿಕಾರಿಗಳಿಗೆ ನಿರ್ದೇಶಿಸಿದರು. ಎಚ್‌ಎಎಲ್ ಅಧಿಕಾರಿಗಳಾದ ಕೃಷ್ಣಪ್ಪ, ಸಾಯಿಕೃಷ್ಣ, ಮಂಜುನಾಥ್, ವನುವಾಮಲಾಯಿ, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್ ಉಪಸ್ಥಿತರಿದ್ದರು.




**ಕ್ರೀಡಾಂಗಣಕ್ಕೆ ಹೊನಲು ಬೆಳಕು**

**ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣಕ್ಕೂ ಶುಭ ಕಲ್ಯಾಣ್ ಎಚ್‌ಎಎಲ್ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲಿಸಿದರು. ಕ್ರೀಡಾಪಟುಗಳ ಅನುಕೂಲಕ್ಕಾಗಿ ಅತ್ಯಾಧುನಿಕ ಹೊನಲು- ಬೆಳಕಿನ ವ್ಯವಸ್ಥೆ ಕ್ರೀಡಾಂಗಣದಲ್ಲಿ ಒದಗಿಸಬಹುದಾದ ಸೌಕರ್ಯಗಳ ಬಗ್ಗೆ ಚರ್ಚಿಸಿದರು.**

### ಮಲೆ ಮಹದೇಶ್ವರ ಬೆಟ್ಟದಲ್ಲಿ ಆರಕೆ ಹೊತ್ತ ಭಕ್ತರಿಂದ ಅನ್ನಸಂತರ್ಪಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹನೂರು

ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಪುಣ್ಯಕ್ಷೇತ್ರ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಆರಕೆ ಹೊತ್ತ ಭಕ್ತರು ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕು, ತೊಪ್ಪನಹಳ್ಳಿ ಗ್ರಾಮದ ಭಕ್ತರಾದ ನಂದೀಶ್ ರವರು ಮುಡಿ ಕೌಂಟರ್ ಹಿಂಭಾಗ ಇರುವ ಪರ ಮಾಡುವ ಸ್ಥಳದಲ್ಲಿ ಅನ್ನ ಸಂತರ್ಪಣೆ ಮಾಡಿದರು. ಶ್ರೀ ಮಲೆ ಮಹದೇಶ್ವರ ಸ್ವಾಮಿಯವರ ಎಣ್ಣೆ ಮಜ್ಜನ ಸೇವಾಕರ್ತರಾದ ಶೆಟ್ಟಿ ಸರಗೂರು ಮೂಗಪ್ಪ ಹಾಗೂ ರಾಮವ್ವ ಮಠದ ಶ್ರೀ ಸಿದ್ದಪ್ಪ ಸ್ವಾಮಿಯವರು ಸಾನಿಧ್ಯವನ್ನುವಹಿಸಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಅನ್ನಪ್ರಸಾದಕ್ಕೆ ವಿಶೇಷ ಪೂಜೆ ನೆರವೇರಿಸಿ ಅನ್ನ ಸಂತರ್ಪಣೆಗೆ ಚಾಲನೆ ನೀಡಿದರು.

ಇದೆ ವೇಳೆ ಮಾತನಾಡಿದ ಅವರು ಇಂದು ಶ್ರೀ ಸ್ವಾಮಿಯ ಸನ್ನಿಧಿಯಲ್ಲಿ ಅಪಾರ ಭಕ್ತವೃಂದ ಪಾಲ್ಗೊಂಡು ಸೇವೆ ಮಾಡುತ್ತಿರುವುದು ಅಪಾರ ಸಂತಸ ತಂದಿದೆ ಹೀಗೆ ನಿಮ್ಮ ಸೇವೆ ಮುಂದುವರೆಯಲಿ ಅದರಂತೆ ನಾವು ಮಲೆ ಮಾದಪ್ಪನ ಸನ್ನಿಧಿಗೆ ಆಗಮಿಸುವಂತಹ ಸಹಸ್ರಾರು ಭಕ್ತಾದಿಗಳಿಗೆ ಅನ್ನ ಸಂತರ್ಪಣವನ್ನು ಏರ್ಪಡಿಸಿರುವುದು ಪುಣ್ಯದ ಕೆಲಸವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಈ ನಿಟ್ಟಿನಲ್ಲಿ ಪ್ರಾಧಿಕಾರದ ಅಧಿಕಾರಿಗಳು ನಿಜ ಸಂಗತಿಯನ್ನು ಭಕ್ತರಿಗೆ ಪರಿಚಯಿಸುವ ಪ್ರಯತ್ನ ಮಾಡಬೇಕು ಎಂದು ಆಗ್ರಹಿಸಿದರು.

# ರೂ.5.61 ಕೋಟಿ ಮೊತ್ತದ ವಸ್ತು ಜಪ್ತಿ

• ಉದಯವಾಹಿನಿ, ತುಮಕೂರು

ಜಿಲ್ಲೆಯ ಪೊಲೀಸರು ವಿವಿಧೆಡೆ ನಡೆಸಿದ ಕಾರ್ಯಾಚರಣೆಯಲ್ಲಿ 130 ಪ್ರಕರಣಗಳನ್ನು ಭೇದಿಸಿದ್ದು. 5.61 ಕೋಟಿ ಮೊತ್ತದ ಚಿನ್ನಾಭರಣ, ಕಾರು, ಬೈಕ್ ಹಾಗೂ ನಗದು ಸೇರಿದಂತೆ ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.ಕಳೆದ ಫೆಬ್ರುವರಿಯಿಂದ ಈವರೆಗೆ ವಿವಿಧ ಪ್ರಕರಣಗಳಲ್ಲಿ 170 ಕಳ್ಳರನ್ನು ಬಂಧಿಸಲಾಗಿದೆ. ಒಂದು ಕೊಲೆ ಪ್ರಕರಣ. 3 ದರೋಡೆ, 5 ಸುಲಿಗೆ, 21 ಸರಗಳವು, 38 ಮನೆ ಕಳವು, 53 ಸಾಮಾನ್ಯ ಕಳ್ಳತನ ಸೇರಿದಂತೆ 130 ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್ ಇಲ್ಲಿ ಮಂಗಳವಾರ ತಿಳಿಸಿದರು.

ರೂ.4.03 ಕೋಟಿ ಮೌಲ್ಯದ 4.31 ಕೆ.ಜಿ ಚಿನ್ನಾಭರಣಗಳು,ರೂ.7.20 ಲಕ್ಷ ಬೆಲೆ ಬಾಳುವ 7.207 ಕೆ.ಜಿ ಬೆಳ್ಳಿ ಆಭರಣಗಳು, 1.11 ಕೋಟಿ ಮೊತ್ತದ 99 ಬೈಕ್, 4 ಕಾರು, 2 ಟ್ರ್ಯಾಕ್ಟರ್, ಆಟೊ, ರೂ.36.73 ಲಕ್ಷದ ಇತರೆ ವಸ್ತುಗಳನ್ನು ಜಪ್ತಿ ಮಾಡಿದ್ದು, ರೂ.3 ಲಕ್ಷ ಮೌಲ್ಯದ ಜಾನುವಾರುಗಳನ್ನು ಪತ್ತೆ ಮಾಡಲಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

ತುಮಕೂರು ಉಪವಿಭಾಗದಲ್ಲಿ ಒಂದು ದರೋಡೆ, 2 ಸುಲಿಗೆ, 8 ಸರಗಳವು, 7 ಮನೆ ಕಳ್ಳತನ ಪತ್ತೆಯಾಗಿದೆ. ಒಟ್ಟು 48 ಮಂದಿಯನ್ನು ಬಂಧಿಸಿ ?1.46 ಕೋಟಿ ವಸ್ತು ಜಪ್ತಿ ಮಾಡಲಾಗಿದೆ. ಕುಣಿಗಲ್ ವಿಭಾಗದಲ್ಲಿ ದರೋಡೆ, ಸುಲಿಗೆ, 3 ಸರಗಳವು, 10 ಮನೆ ಕಳ್ಳತನ ಭೇದಿಸಿದ್ದು, 46 ಆರೋಪಿಗಳನ್ನು ಬಂಧಿಸಿ,ರೂ.1.66 ಕೋಟಿ ಮೌಲ್ಯದ ಮಾಲು ಜಪ್ತಿಯಾಗಿದೆ. ಶಿರಾ ವಿಭಾಗದಲ್ಲಿ ಸುಲಿಗೆ, 3 ಸರಗಳ್ಳತನ ಸೇರಿ ವಿವಿಧ ಪ್ರಕರಣಗಳಲ್ಲಿ 13 ಮಂದಿ ಬಂಧಿಸಲಾಗಿದೆ. ರೂ. 45.11 ಲಕ್ಷ ಮೊತ್ತದ ವಸ್ತು ಜಪ್ತಿ ಮಾಡಲಾಗಿದೆ. ತಿಪಟೂರು ವಿಭಾಗದಲ್ಲಿ ಮಹಿಳೆ ಕೊಲೆ ಪ್ರಕರಣ ಪತ್ತೆ ಮಾಡುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಮಧುಗಿರಿ ವಿಭಾಗದಲ್ಲಿ 48 ಮಂದಿ ಬಂಧಿಸಿ. ರೂ.1.65 ಕೋಟಿ ಮೌಲ್ಯದ ವಸ್ತು ಜಪ್ತಿ ಮಾಡಲಾಗಿದೆ ಎಂದು ವಿವರಿಸಿದರು.

**ವಾಹನ ನಿಲುಗಡೆ ನಿಷೇಧ**

**ನಗರದ ಬಿಜಿಎಸ್ (ಟೌನ್ ಹಾಲ್) ವೃತ್ತದಿಂದ ಗಾಯಿತ್ರಿ ಚಿತ್ರಮಂದಿರದ ವರೆಗೆ ಬಿ.ಎಚ್. ರಸ್ತೆಯ ಎರಡೂ ಬದಿಗಳಲ್ಲಿ ವಾಹನ ನಿಲುಗಡೆ ನಿಷೇಧಿಸುವ ಬಗ್ಗೆ ಚಿಂತನೆ ನಡೆದಿದೆ. ಆಟೊ ಹೊರತುಪಡಿಸಿ ಇತರೆ ವಾಹನಗಳ ನಿಲುಗಡೆ ನಿಷೇಧಿಸಲಾಗುತ್ತದೆ ಎಂದು ಅವರು ಹೇಳಿದರು. ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಹಾಗೂ ರೈಲು ನಿಲ್ದಾಣದ ಬಳಿ ಮುಂಗಡ ಹಣ ಪಾವತಿಸಿ ಆಟೊದಲ್ಲಿ ಸಂಚರಿಸುವ ವ್ಯವಸ್ಥೆ ಮಾಡಲಾಗುವುದು. ಆಟೊ ನಿಲ್ದಾಣ ವ್ಯವಸ್ಥೆ ಸರಿಪಡಿಸಿದ ನಂತರ ಆಟೊಗಳಿಗೆ ಮೀಟರ್ ಅಳವಡಿಕೆ ಕಡ್ಡಾಯ ಮಾಡಲಾಗುವುದು ಎಂದು ತಿಳಿಸಿದರು.**

# ಉಪ ಲೋಕಾಯುಕ್ತರಿಂದ ದಿಢೀರ್ ದಾಳಿ

• ಉದಯವಾಹಿನಿ, ಬಂಗಾರಪೇಟೆ



ಇತ್ತೀಚೆಗೆ ವಿವಿಧ ಇಲಾಖೆಗಳ ಮೇಲೆ ದಾಳಿ ನಡೆಸಿದ ಉಪ ಲೋಕಾಯುಕ್ತರು ಕರ್ತವ್ಯಲೋಪ ಸೇರಿದಂತೆ ಇನ್ನಿತರ ಕಾರಣಗಳಿಗಾಗಿ ತಾಲ್ಲೂಕಿನ 32 ಸಿಬ್ಬಂದಿ ವಿರುದ್ಧ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡಿದ್ದಾರೆ. ವಾರ್ಷಿಕ ವೇತನಕ್ಕಿಂತ ಹೆಚ್ಚು ವ್ಯವಹಾರ ನಡೆಸಿದ ಆರೋಪದ ಮೇರೆಗೆ ಭೂ ದಾಖಲೆಗಳ ಸಹಾಯಕ ನಿರ್ದೇಶಕ ಪರಶಿವಮೂರ್ತಿ, ಸಿಬ್ಬಂದಿ ಜಿ. ಶ್ರೀವೇಣಿ, ವಿ.ಕೆ.ಹರೀಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕಿ ಪ್ರತಿಭಾ, ಮೇಘಮಾಲ, ದ್ವಿತೀಯ ದರ್ಜೆ ಸಹಾಯಕ ಶ್ರೀನಿವಾಸ್, ಪ್ರಭಾರ ಉಪ ನೋಂದಣಾಧಿಕಾರಿ ಹಾಗೂ ದ್ವಿತೀಯ ದರ್ಜೆ ಸಹಾಯಕ ಮುರಳೀಧರ್ ಆರ್ ಮತ್ತು ಡೇಟಾ ಎಂಟ್ರಿ ಆಪರೇಟರ್ ವಿಜಯ್ ಕುಮಾರ್, ಕಾರ್ಯನಿರ್ವಾಹಕ ಕಚೇರಿಯ ಶೀಘ್ರಲಿಪಿಗಾರರಾದ ಲಲಿತಮ್ಮ ಅವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಜೊತೆಗೆ ತಾವು ಮಾಡಿರುವ ಹಣದ ವ್ಯವಹಾರಕ್ಕೆ ಪೂರಕ ದಾಖಲೆಗಳನ್ನು ಸಲ್ಲಿಸುವಂತೆಯೂ ಸೂಚಿಸಲಾಗಿದೆ ಎಂದು ತಿಳಿದುಬಂದಿದೆ.

ಈ ಎಲ್ಲಾ ಅಧಿಕಾರಿಗಳ ಬ್ಯಾಂಕ್ ವಹಿವಾಟು, ಯುಪಿಐ ವಹಿವಾಟುಗಳನ್ನು ಪರಿಶೀಲಿಸಿದಾಗ, ಅಧಿಕಾರಿಗಳು ತಮ್ಮ ವೇತನಕ್ಕಿಂತಲೂ ಹೆಚ್ಚಿನ ಹಣ ವಹಿವಾಟು ನಡೆಸಿರುವುದು ಗೊತ್ತಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆದೇಶಗಳ ಬೆರಳಚ್ಚು ಸಿದ್ಧವಾಗಿದ್ದು, ಅವುಗಳಿಗೆ ಮೇಲಾಧಿಕಾರಿಗಳ ಸಹಿ ಮಾಡಿಸಿರುವ ಹೊರತಾಗಿಯೂ, ಅವುಗಳನ್ನು ವಿಲೇವಾರಿ ಮಾಡದ ಕಾರಣಕ್ಕೆ ತಾಲ್ಲೂಕು ಕಚೇರಿಯ ದ್ವಿತೀಯ ದರ್ಜೆ ಸಹಾಯಕಿ ತೇಜಸ್ವಿನಿ ವಿರುದ್ಧ ಪ್ರಕರಣ ದಾಖಲಾಗಿದೆ. ಕರ್ತವ್ಯಲೋಪದ ಆರೋಪದ ಮೇರೆಗೆ ತಹಶೀಲ್ದಾರ್ ಗ್ರೇಡ್ 1 ಎಸ್. ವೆಂಕಟೇಶಪ್ಪ, ತಹಶೀಲ್ದಾರ್ ಗ್ರೇಡ್ 2 ಜಿ.ಎಸ್. ಗಾಯತ್ರಿ, ಆರ್.ಆರ್.ಟಿ. ಶಿರಸ್ತೇದಾರ್ ಪ್ರಭಾಗರನ್, ದ್ವಿತೀಯ ದರ್ಜೆ ಸಹಾಯಕರಾದ ತೇಜಸ್ವಿನಿ, ಶ್ರೀನಿವಾಸ್, ರೆಕಾರ್ಡ್ ಕೀಪರ್ ವಿನೋದ್ ವಿರುದ್ಧವೂ ಪ್ರಕರಣ ದಾಖಲಾಗಿದೆ.

ತಾಲ್ಲೂಕು ಕಚೇರಿ ಮತ್ತು ಕೃಷಿ ಇಲಾಖೆ ಕಚೇರಿ, ಸಾರ್ವಜನಿಕರ ಆಸ್ಪತ್ರೆ, ತಾಲ್ಲೂಕು ಪಂಚಾಯಿತಿ ಕಾರ್ಯಾಲಯ, ಉಪ ನೋಂದಣಾಧಿಕಾರಿ ಕಚೇರಿಗಳಲ್ಲಿ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಇಲ್ಲ. ಕಚೇರಿಯಲ್ಲಿನ ಚಲನವಲನಗಳು ಸಮರ್ಪಕವಾಗಿಲ್ಲ ಎಂದು ಉಪಲೋಕಾಯುಕ್ತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

### ಸಿಂಧುವಳ್ಳಿಯ ಗುಡಿಕಟ್ಟೆಗೆ ಜೀವಕಳೆ

• ಉದಯವಾಹಿನಿ, ಮೈಸೂರು

ತಾಲ್ಲೂಕು ಮಳೆಯಾಶ್ರಿತ ಪ್ರದೇಶವಾಗಿದ್ದು, ಬಿದ್ದ ಮಳೆ ನೀರು ಪೋಲಾಗದಂತೆ ಕೆರೆ- ಕಟ್ಟೆಗಳ ಜಾಲವನ್ನೇ ನಿರ್ಮಿಸಲಾಗಿತ್ತು. ದೊಡ್ಡ ಕೆರೆಗಳಲ್ಲದೇ ಕುಂಟೆ- ಕಟ್ಟೆಗಳು ನೀರನ್ನು ಇಂಗಿಸುತ್ತಿದ್ದವು. ದೊಡ್ಡ ಕೆರೆಗಳೇ ಒತ್ತುವರಿಯಿಂದ ನಲುಗಿರುವಾಗ ಪುಟ್ಟ ಕುಂಟೆ-ಕಟ್ಟೆಗಳನ್ನು ಉಳಿಸುವುದು ಸವಾಲು. ಜಿಲ್ಲೆಯ ನೂರಾರು ಕಟ್ಟೆಗಳು ನಗರೀಕರಣದಿಂದ ಕಣ್ಮರೆಯಾಗಿರುವಾಗ, ಜಯಪುರ ಹೋಬಳಿ ಸಿಂಧುವಳ್ಳಿ ಗ್ರಾಮದ ಗುಡಿ ಕಟ್ಟೆ ಮೂಲಸ್ವರೂಪಕ್ಕೆ ಮರಳಿದ್ದು, ಬೇಸಿಗೆಯಲ್ಲೂ ಅಂತರ್ಜಲ ಇಲ್ಲಿ ಉಕ್ಕಿ ಹರಿಯುತ್ತದೆ. ಕಟ್ಟೆಯು ಸರ್ವೆ ಸಂಖ್ಯೆ 179ರಲ್ಲಿದ್ದು, ಒಟ್ಟು ವಿಸ್ತೀರ್ಣ 1.3 ಎಕರೆಯಾಗಿದೆ. ಕಟ್ಟೆಯ ಬದುಗಳೆಲ್ಲ ಹಳ್ಳಕ್ಕೆ ಜರುಗಿದ್ದವು. ಆಳವೂ ಕಡಿಮೆಯಾಗಿತ್ತು.



ಐದು ವರ್ಷದ ಹಿಂದೆ ಏಷ್ಯನ್ ಪೇಂಟ್ಸ್‌ನ ಸಿಎಸ್‌ಆರ್ ನಿಧಿಯಲ್ಲಿ ಅಭಿವೃದ್ಧಿ ಕಂಡಿದ್ದು, ಜೀವಕಳೆ ಪಡೆದಿದೆ. ಕಂಪನಿಯ ಜೊತೆಗೆ ಗ್ರಾಮೀಣಾಭಿವೃದ್ಧಿ ಇಲಾಖೆ, ಜಿಲ್ಲಾ ಪಂಚಾಯಿತಿ, ನ್ಯಾಷನಲ್ ಆಗ್ರೋ ಫೌಂಡೇಶನ್ ಕೂಡ ಅಭಿವೃದ್ಧಿಗೆ ಶ್ರಮಿಸಿವೆ. ಆಕ್ರೋ ಫೌಂಡೇಷನ್ ತಾಂತ್ರಿಕ ಮಾರ್ಗದರ್ಶನವನ್ನೂ ನೀಡಿದೆ. ಕಟ್ಟೆಯ ತಳ ಸೇರಿದ್ದ ಕಲ್ಲುಗಳನ್ನು ಮತ್ತೆ ತೆಗೆದು ಬದುಗಳನ್ನು ನಿರ್ಮಿಸಲಾಗಿದ್ದು ಕಾಂಕ್ರೀಟ್ ಬಳಸದೇ ಏರಿಯನ್ನು ಬಿಗಿಗೊಳಿಸಲಾಗಿದೆ. ಅಂಚಿನ ಹೂಳನ್ನು ಇಳಿಜಾರುಮ, ಮೆಟ್ಟಿಲು ಸ್ವರೂಪದಲ್ಲಿ ತೆಗೆಯಲಾಗಿದೆ. ಕಟ್ಟೆಯ ಒಡಲಲ್ಲಿ ಬೆಳೆದಿದ್ದ ಬಳ್ಳಾರಿ ಜಾಲಿ ಸೇರಿದಂತೆ ಕುರುಚಲು ಗಿಡಗಳನ್ನು ತೆರವು ಮಾಡಲಾಗಿದೆ. ಕಟ್ಟೆಯ ನೀರನ್ನು ಮೊದಲು ಕುಡಿಯಲು ಬಳಸಲಾಗುತ್ತಿತ್ತು. ನಲ್ಲಿಯಲ್ಲಿ ನೀರು ಬರುತ್ತಿರುವುದರಿಂದ ಜಾನುವಾರುಗಳಿಗೆ ಮಾತ್ರ ಬಳಸುತ್ತೇವೆ. ಹೂಳು ತುಂಬಿದ್ದ ಕಟ್ಟೆ ದುರಸ್ತಿ ಮಾಡಲಾಗಿದೆ ಗ್ರಾಮಸ್ಥರೇ ಇದರ ನಿರ್ವಹಣೆ ಮಾಡುತ್ತಿದ್ದೇವೆ' ಎಂದು ಗ್ರಾಮದ ನಿವಾಸಿ ಮಹದೇವಸ್ವಾಮಿ ತಿಳಿಸಿದರು.

# ನಿಗದಿಯಾಗಿರುವ ಸಂಪುಟ ಸಭೆಯ ಮೇಲೆ ಅನಿಶ್ಚಿತತೆಯ ತೂಗುಗತ್ತಿ!

## ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ, ಸಚಿವ ಡಾ.ಎಂ.ಸಿ.ಸುಧಾಕರ್ ಗಿರಿಧಾಮಕ್ಕೆ ಭೇಟಿ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನಂದಿಗಿರಿಧಾಮದಲ್ಲಿ ಜೂನ್ 19ರಂದು ನಿಗದಿಯಾಗಿರುವ ಸಚಿವ ಸಂಪುಟ ಸಭೆಯ ಮೇಲೆ ಅನಿಶ್ಚಿತತೆಯ ತೂಗುಗತ್ತಿ ನೇತಾಡುತ್ತಿದೆ.

ಸಂಪುಟ ಸಭೆಯನ್ನು ಮುಂದೂಡಲಾಗುತ್ತದೆಯೊ ಅಥವಾ ನಿಗದಿಯಂತೆ 19ರಂದೇ ನಡೆಯಲಿದೆಯೇ ಎನ್ನುವ ನಿರ್ಧಾರ ಮಧ್ಯಾಹ್ನದ ವೇಳೆಗೆ ಖಚಿತವಾಗಲಿದೆ. ದಾವಣಗೆರೆಯಿಂದ ಹಿಂದಿರುಗಲಿರುವ ಸಿದ್ದರಾಮಯ್ಯ ಅವರನ್ನು ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಯ ಜನಪ್ರತಿನಿಧಿಗಳು ಮಂಗಳವಾರ ಭೇಟಿಯಾಗಿ ಸಾಧಕ, ಬಾಧಕ ಕುರಿತು ಚರ್ಚಿಸಿದ ನಂತರ ಅಂತಿಮ ನಿರ್ಧಾರ ಹೊರಬೀಳಲಿದೆ ಎನ್ನುತ್ತವೆ ಮೂಲಗಳು. ಮತ್ತೊಂದೆಡೆ ಜಿಲ್ಲಾಡಳಿತ ಭರದ ಸಿದ್ಧತೆಯಲ್ಲಿ ತೊಡಗಿದೆ. ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಗಿರಿಧಾಮಕ್ಕೆ ಭೇಟಿ ನೀಡಿ ಸಿದ್ಧತೆ ಪರಿಶೀಲಿಸಿದ್ದಾರೆ. ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಈಗಾಗಲೇ ಸರಣಿ ಸಭೆ ನಡೆಸಿದ್ದಾರೆ. ಲೋಕೋಪಯೋಗಿ ಇಲಾಖೆಯು ಗಿರಿಧಾಮದ ರಸ್ತೆ ಗುಂಡಿ ಮುಚ್ಚಿದೆ. ಸಚಿವರು ತಂಗುವ ವಸತಿ ನಿಲಯ, ಕಟ್ಟಡಗಳಿಗೆ ಕಟ್ಟಡಗಳಿಗೆ ಸುಣ್ಣ, ಬಣ್ಣ ಬಳಿಯಲಾಗಿದೆ. ಒಬ್ಬರ ನಂತರ ಒಬ್ಬರು ಗಿರಿಧಾಮಕ್ಕೆ ಭೇಟಿ ನೀಡಿ ಸಿದ್ಧತೆ ಪರಿಶೀಲಿಸುತ್ತಿದ್ದಾರೆ.

**ಅನಿಶ್ಚಿತತೆ ಕಾರಣ ಏನು?:** ಚಾಮರಾಜ ನಗರ ಜಿಲ್ಲೆಯ ಮಹದೇಶ್ವರ ಬೆಟ್ಟದಲ್ಲಿ ಏಪ್ರಿಲ್‌ನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಆ ಭಾಗದ ಜಿಲ್ಲೆಗಳ ಅಭಿವೃದ್ಧಿಗೆ ಹಲವು ಕೊಡುಗೆ ಘೋಷಿಸಲಾಯಿತು. ಹಿಂದುಳಿದ ಮತ್ತು ಗಡಿ ಜಿಲ್ಲೆ ಚಾಮರಾಜ ನಗರ ಅಭಿವೃದ್ಧಿಗೆ ಆದ್ಯತೆ ನೀಡಲಾಯಿತು. ನಂದಿ ಗಿರಿಧಾಮದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿಶೇಷ ಕೊಡುಗೆ. ಅನುದಾನ ನೀಡಬೇಕು ಎನ್ನುವುದು ಎರಡೂ ಜಿಲ್ಲೆಗಳ ಕಾಂಗ್ರೆಸ್ ಶಾಸಕರ ಒತ್ತಾಯ. ಆದರೆ ಈ ವಿಚಾರವಾಗಿ ಮುಖ್ಯಮಂತ್ರಿ ಯಾವುದೇ ಖಚಿತ ಭರವಸೆ ನೀಡಿಲ್ಲ. ಅನುದಾನ ಘೋಷಣೆ ಮಾಡದಿದ್ದರೆ ಸಚಿವ ಸಂಪುಟ ಸಭೆಯನ್ನು ಜಿಲ್ಲೆಯಲ್ಲಿ ಮಾಡಿ ಏನು ಪ್ರಯೋಜನ ಜನರ ನಿರೀಕ್ಷೆ ಹುಸಿಯಾಗುತ್ತದೆ. ಇದರಿಂದ ಮುಂದಿನ ದಿನಗಳಲ್ಲಿ ಪಕ್ಷಕ್ಕೆ ಮತ್ತು ಪಕ್ಷದ ಶಾಸಕರಿಗೆ ಹಿನ್ನಡೆಯಾಗುತ್ತದೆ. ವಿರೋಧ ಪಕ್ಷಗಳು ಇದನ್ನೇ ಮುಂದಿಟ್ಟುಕೊಂಡು ವಾಗ್ದಾಳಿ ನಡೆಸುತ್ತಾರೆ. ಹಾಗಾಗಿ ಅವಳಿ ಜಿಲ್ಲೆಗಳಿಗೆ ವಿಶೇಷ ಅನುದಾನ ಘೋಷಿಸದಿದ್ದರೆ, ಸಂಪುಟ ಸಭೆಯನ್ನು ಮುಂದೂಡುವುದು ಒಳಿತು ಎಂಬ ಭಿಪ್ರಾಯವನ್ನು ಉಭಯ ಜಿಲ್ಲೆಗಳ ಕಾಂಗ್ರೆಸ್ ಶಾಸಕರು ವ್ಯಕ್ತಪಡಿಸಿದ್ದಾರೆ ಎಂದು ತಿಳಿದು ಬಂದಿದೆ.ಅನುದಾನ ಘೋಷಣೆ ಸೇರಿದಂತೆ ಮಹತ್ವದ ಯೋಜನೆಗಳ ಕಾರ್ಯಗತದ ಬಗ್ಗೆ ಚರ್ಚಿಸಿದ ನಂತರವೇ ಸಚಿವ ಸಂಪುಟ ಸಭೆ ನಡೆಸಿ ಎಂದು ಎರಡೂ ಜಿಲ್ಲೆಯ ಕಾಂಗ್ರೆಸ್ ಶಾಸಕರು ಆಗ್ರಹಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಚಿವ ಸಂಪುಟ ಸಭೆ ನಿಗದಿತ ದಿನದಂದು ನಡೆಯುತ್ತದೆಯೇ ಅಥವಾ ಇಲ್ಲವೇ ಎನ್ನುವ ಖಚಿತ ಮಾಹಿತಿ ಖುದ್ದು ಶಾಸಕರಿಗೂ ಇಲ್ಲ. ಮಂಗಳವಾರ ಮಧ್ಯಾಹ್ನ ಮುಖ್ಯಮಂತ್ರಿ ಅವರನ್ನು ಅವಳಿ ಜಿಲ್ಲೆಗಳ ಕಾಂಗ್ರೆಸ್ ಶಾಸಕರು ಭೇಟಿ ಮಾಡಲಿದ್ದಾರೆ.

ಅನುದಾನ ನೀಡುವುದಿದ್ದರೆ ಮಾತ್ರ ಸಚಿವ ಸಂಪುಟ ಸಭೆ ನಡೆಸಿ. ನಮ್ಮ ಜಿಲ್ಲೆಗಳ ಜನರು ಸಭೆಯ ಬಗ್ಗೆ ಹೆಚ್ಚಿನ ನಿರೀಕ್ಷೆಗಳನ್ನು ಹೊಂದಿದ್ದಾರೆ. ಅನುದಾನ ದೊರೆಯುತ್ತದೆ ಎನ್ನುವ ಆಶಾಭಾವನೆ ಇದೆ ಎಂಬ ಅಂಶವನ್ನು ಮನವರಿಕೆ ಮಾಡಿಕೊಡುವ ಪ್ರಯತ್ನ ಮಾಡಲಿದ್ದಾರೆ. ಸಭೆ ನಡೆದು ಯಾವುದೇ ಅನುದಾನ ಘೋಷಣೆ ಆಗದಿದ್ದರೆ ನಮಗೆ ಹಿನ್ನಡೆ ಆಗುತ್ತದೆ.

ಉದಯವಾಹಿನಿ ಚಿತ್ರ



**ಕಾರ್ಯದರ್ಶಿ ಅವರ ಜೊತೆ ಸಭೆ**

**ಪ್ರಸ್ತಾವಗಳ ಮಾಹಿತಿಗೆ ಸೂಚನೆ**

**ಸಚಿವ ಸಂಪುಟ ಸಭೆ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಬೆಂಗಳೂರಿನಲ್ಲಿ ಮುಖ್ಯಕಾರ್ಯದರ್ಶಿ ಅವರ ಜೊತೆ ಸಭೆ ನಡೆಸಿದರು. ಮುಖ್ಯಕಾರ್ಯದರ್ಶಿ ಮತ್ತು ಸಚಿವರು ವಿವಿಧ ಇಲಾಖೆಗಳ ಕಾರ್ಯದರ್ಶಿಗಳ ಜೊತೆ ವಿಡಿಯೊ ಸಂವಾದ ನಡೆಸಿದರು. ಚಿಕ್ಕಬಳ್ಳಾಪುರ ಜಿಲ್ಲೆಗೆ ಸಂಬಂಧಿಸಿದಂತೆ ಯಾವ ಯಾವ ಪ್ರಸ್ತಾವಗಳು, ಅಭಿವೃದ್ಧಿ ಯೋಜನೆಗಳು ಇವೆ ಎನ್ನುವ ಬಗ್ಗೆ ಮಾಹಿತಿ ನೀಡುವಂತೆ ಮುಖ್ಯ ಕಾರ್ಯದರ್ಶಿ ಅವರು ಆಯಾ ಇಲಾಖೆ ಉನ್ನತ ಅಧಿಕಾರಿಗಳಿಗೆ ಸೂಚಿಸಿದ್ದಾರೆ.**

# ರಾಷ್ಟ್ರೀಯ ಹೆದ್ದಾರಿ ಚತುಷ್ಪಥಕ್ಕೆ ಹೊಸ ಡಿಪಿಆರ್

## ವಿಜಯಪುರ-ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿಯಲ್ಲಿನ 68 ಕೋಟಿ ರೂ. ಮೊತ್ತದ ಆರ್‌ಒಬಿ ಮಂಜೂರು

• ಉದಯವಾಹಿನಿ, ವಿಜಯಪುರ

ಹುಬ್ಬಳ್ಳಿ-ವಿಜಯಪುರ ರಾಷ್ಟ್ರೀಯ ಹೆದ್ದಾರಿಯ ಹೊನಗನಳ್ಳಿ ಬಳಿ 70 ಕೋಟಿ ರೂ. ಮೊತ್ತದಲ್ಲಿ ನಿರ್ಮಿಸಿದ ರೈಲ್ವೆ ಮೇಲ್ಸೇತುವೆ ಉದ್ಘಾಟನೆಗೊಳ್ಳುತ್ತಿದ್ದು, ರೈಲ್ವೆ ಗೇಟ್ ಹಾಕಿದಾಗ ವಾಹನಗಳು ಕಿಲೋಮೀಟರ್ ಗಟ್ಟಲೆ ಸಾಲುಗಟ್ಟಿ ನಿಲ್ಲುವ ಸಮಸ್ಯೆಗೆ ಕೊನೆಗೂ ಮುಕ್ತಿ ಸಿಗುತ್ತಿದೆ. ಹೊನಗನಳ್ಳಿ ರೈಲ್ವೆ ಮೇಲ್ಸೇತುವೆ ಸಾರ್ವಜನಿಕ ಸಂಚಾರಕ್ಕೆ ಮುಕ್ತವಾಗುವುದರಿಂದ ವಾಹನಗಳ ಸಂಚಾರಕ್ಕೆ ಹೆಚ್ಚಿನ ಅನುಕೂಲವಾಗಲಿದೆ, ಎಂದು ಸಂಸದ ರಮೇಶ ಜಿಗಜಿಣಗಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

**ಬೇಡಿಕೆ ಈಡೇರಿಕೆ:** ವಿಜಯಪುರ-ಹುಬ್ಬಳ್ಳಿ ಮಾರ್ಗದಲ್ಲಿ ಸುಗಮ ಸಂಚಾರಕ್ಕಾಗಿ ಹೊನಗನಹಳ್ಳಿ ರೈಲ್ವೆ ಕ್ರಾಸಿಂಗ್‌ನಲ್ಲಿ ಮೇಲ್ಸೇತುವೆ ನಿರ್ಮಿಸಬೇಕೆಂಬುದು ಬಹುದಿನಗಳ ಬೇಡಿಕೆಯಾಗಿತ್ತು. ಅದರಂತೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವ ನಿತಿನ್ ಗಡ್ಕರಿಯವರನ್ನು ಭೇಟಿಯಾಗಿ ಮನವಿ ಸಲ್ಲಿಸಲಾಗಿತ್ತು. ಸ್ಪಂದಿಸಿದ ಕೇಂದ್ರ ಸರಕಾರ 78.88 ಕೋಟಿ ರೂ. ಮಂಜೂರು ಮಾಡಿತ್ತು. ಇದೀಗ ಕಾಮಗಾರಿ ಪೂರ್ಣಗೊಂಡು ಸಂಚಾರಕ್ಕೆ ಮುಕ್ತವಾಗುತ್ತಿದೆ ಎಂದರು.

**ಗಮನ ಸೆಳೆದ ವಿಕ ವರದಿ:** ಸಂಚಾರ ಸಮಸ್ಯೆ ನಿವಾರಣೆಗೆ 1.51 ಕಿಮೀ ಉದ್ದ ರೈಲ್ವೆ ಮೇಲ್ಸೇತುವೆ ಮುಂಜೂರಾಗಿ 2021ರಲ್ಲೇ ಕಾಮಗಾರಿ ಚಾಲನೆ ನೀಡಲಾಗಿತ್ತು, 2023ರ ವೇಳೆಗೆ ಪೂರ್ಣಗೊಳ್ಳಬೇಕಿತ್ತು. ಆದರೆ, ಕಾಮಗಾರಿ ವಿಳಂಬವಾಗಿದ್ದರ ಬಗ್ಗೆ ಕೆಲದಿನಗಳ ಹಿಂದೆ ವಿಜಯ ಕರ್ನಾಟಕ ಪತ್ರಿಕೆ ಅರ್ಧಂಬರ್ಧ ಕಾಮಗಾರಿ ಮುಗಿಯೋದು ಯಾವಾಗ ಶೀರ್ಷಿಕೆಯಡಿ ವಿಶೇಷ ವರದಿ ಪ್ರಕಟಿಸಿ ಗಮನ ಸೆಳೆದಿತ್ತು. ಇದೀಗ ಕಾಮಗಾರಿ ಪೂರ್ಣಗೊಂಡು ಸಂಚಾರಕ್ಕೆ ಮುಕ್ತವಾಗುತ್ತಿದೆ. ರೈಲ್ವೆ ಮೇಲ್ಸೇತುವೆ ಕಾಮಗಾರಿಯನ್ನು ರೈಲ್ವೆ ಇಲಾಖೆಯ ತಾಂತ್ರಿಕತೆ, ಅನುಮತಿ ಮೇರೆಗೆ ಕೈಗೊಳ್ಳಬೇಕಿತ್ತು.


ಉದಯವಾಹಿನಿ ಚಿತ್ರ

**ಸಮಸ್ಯೆಗೆ ಕೊನೆಗೂ ಮುಕ್ತಿ**

ಸುಮಾರು 30 ಮೀಟರ್‌ನಷ್ಟು ಸ್ಟೀಲ್ ಬ್ರಿಡ್ಜ್ ನಿರ್ಮಿಸಲಾಗಿದೆ. ಇದಕ್ಕಾಗಿ ಬೋಸ್ಟರಿಂಗ್ ಗರ್ಡರ್ ಕೂರಿಸಲಾಗಿದೆ. ಬೋಸ್ಟರಿಂಗ್ ಗರ್ಡರ್‌ಅನ್ನು ತಮಿಳುನಾಡಿನ ಹೊಸೂರಿನಲ್ಲಿ ತಯಾರಿಸಿ ಅಲ್ಲಿಂದ ತಂದು ಜೋಡಿಸಲಾಗಿದೆ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಎಂಜಿನಿಯರ್‌ಗಳು ವಿವರಿಸಿದರು. ಬೋಸ್ಟರಿಂಗ್ ಗರ್ಡರ್ ಜೋಡಣೆ ಕಾಮಗಾರಿ ವೇಳೆ ರೈಲು ಸಂಚಾರ ಸ್ಥಗಿತಗೊಳಿಸಬೇಕಿತ್ತು.

ರೈಲ್ವೆ ಇಲಾಖೆ ಪ್ರತಿದಿನ 2 ಗಂಟೆ ರೈಲು ಸಂಚಾರಕ್ಕೆ ಬ್ರೇಕ್ ಕೊಡುತ್ತಿತ್ತು. ಆ ಅವಧಿಯಲ್ಲಿ ಕಡಿಮೆ ಕಾಮಗಾರಿ ಸಾಧ್ಯವಾಗುತ್ತಿತ್ತು. ಬಿಡುವಿಲ್ಲದ ರೈಲು ಸಂಚಾರ ಹಾಗೂ ಭೂಸ್ವಾಧೀನ ಪ್ರಕ್ರಿಯೆಗೆ ಕೆಲ ತೊಡಕಿದ್ದ ಕಾರಣ ಕಾಮಗಾರಿ ವಿಳಂಬವಾಯಿತು. ಗುತ್ತಿಗೆದಾರರಿಗೆ 2 ಬಾರಿ ಕಾಮಗಾರಿ ಅವಧಿ ವಿಸ್ತರಿಸಬೇಕಾಯಿತು ಎಂದು ಎಂಜಿನಿಯರ್‌ಗಳು ತಿಳಿಸಿದರು.

**2ನೇ ರಿಂಗ್ ರೋಡ್**

ವಿಜಯಪುರ ನಗರ ದಿನೇದಿನೆ ಬೆಳೆಯುತ್ತಿದ್ದು, ವಾಹನಗಳ ದಟ್ಟಣೆ ಹೆಚ್ಚಾಗಿದೆ. ಈ ಹಿನ್ನೆಲೆಯಲ್ಲಿ ಎರಡನೇ ರಿಂಗ್ ರೋಡ್ ನಿರ್ಮಾಣಕ್ಕೆ ಕೇಂದ್ರ ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದೆ. ಇದೀಗ 770 ಕೋಟಿ ರೂ. ಮೊತ್ತದಲ್ಲಿ 47 ಕಿಮೀ ಉದ್ದನೆಯ ರಿಂಗ್‌ರೋಡ್ ನಿರ್ಮಾಣಕ್ಕೆ ಡಿಪಿಆರ್ ಸಿದ್ಧವಾಗಿದೆ

-ಜಿಗಜಿಣಗಿ, ಸಂಸದ

**ಗಣೇಶ ನಗರಕ್ಕೆ ಆರ್‌ಒಬಿ ಮಂಜೂರು:** ವಿಜಯಪುರದ ಗಣೇಶ ನಗರ ಸಮೀಪ ಸೊಲ್ಲಾಪುರ-ಚಿತ್ರದುರ್ಗ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವಲ್ಲಿ ವಾಹನಗಳ ಸರಾಗ ಸಂಚಾರಕ್ಕೆ ಅನುಕೂಲವಾಗುವಂತೆ 68 ಕೋಟಿ ರೂ. ಮೊತ್ತದ ಆರ್‌ಒಬಿ ಮಂಜೂರಾಗಿದೆ. ಶೀಘ್ರದಲ್ಲೇ ಭೂಮಿಪೂಜೆ ನೆರವೇರಲಿದೆ, ಎಂದು ಸಂಸದ ರಮೇಶ ಜಿಗಜಿಣಗಿ ತಿಳಿಸಿದರು.

ವಿಜಯಪುರ ನಗರದ ಬಾಗಲಕೋಟೆ ರಸ್ತೆಯಲ್ಲಿ ವಜ್ರ ಹನುಮಾನ್ ದೇವಸ್ಥಾನದ ಬಳಿ ರೈಲ್ವೆ ಅಂಡರ್ ಪಾಸ್ ನಿರ್ಮಾಣಕ್ಕೂ ಬೇಡಿಕೆ ಸಲ್ಲಿಸಿದ್ದು, ಈ ಸಂಬಂಧದ ಡಿಪಿಆರ್‌ಗೆ ಶೀಘ್ರದಲ್ಲೇ ಅನುಮೋದನೆ ಸಿಗಲಿದೆ ಎಂದರು. ವಿಜಯಪುರ -ಗದಗ ನಡುವಿನ ರೈಲ್ವೆ ಮಾರ್ಗದ ಡಬ್ಲಿಂಗ್ ಕಾಮಗಾರಿ ಪೂರ್ಣವಾಗಿಲ್ಲದ ಕಾರಣಕ್ಕೆ ಈ ಮಾರ್ಗದಲ್ಲಿ ವಂದೇ ಭಾರತ್ ರೈಲು ಓಡಿಸಲು ಸಾಧ್ಯವಾಗಿಲ್ಲ. ಕಾಮಗಾರಿ ಪೂರ್ಣವಾದ ಬಳಿಕ ವಂದೇ ಭಾರತ್ ರೈಲು ಸಂಚಾರ ಆರಂಭವಾಗಲಿದೆ ಎಂದರು. ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ವಿಜಯಪುರ ಜಿಲ್ಲೆಯ ಅಭಿವೃದ್ಧಿಗೆ ಸಂಸದ ರಮೇಶ ಜಿಗಜಿಣಗಿ ಮತ್ತು ಪ್ರಧಾನಿ ಮೋದಿ ಅವರು ದೊಡ್ಡ ಕೊಡುಗೆ ನೀಡಿದ್ದಾರೆ ಎಂದರು.

**ವಿಜಯಪುರ-ಹುಬ್ಬಳ್ಳಿ ಚತುಷ್ಪಥಕ್ಕೆ ಡಿಪಿಆರ್**

ವಿಜಯಪುರ-ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ ಚತುಷ್ಪಥವನ್ನಾಗಿ ಮೇಲ್ದರ್ಜೆಗೇರಿಸಲು ಡಿಪಿಆರ್ ಸಿದ್ಧವಾಗಿದೆ ಎಂದು ರಮೇಶ ಜಿಗಜಿಣಗಿ ತಿಳಿಸಿದರು. ಸೊಲ್ಲಾಪುರ-ವಿಜಯಪುರ-ಹುಬ್ಬಳ್ಳಿ ಹೆದ್ದಾರಿಯನ್ನು ಚತುಷ್ಪಥ ಹೆದ್ದಾರಿಯನ್ನಾಗಿ ಪರಿವರ್ತಿಸಬೇಕೆಂಬ ಬೇಡಿಕೆ ಇತ್ತು. ಈ ನಿಟ್ಟಿನಲ್ಲಿ ಪ್ರಯತ್ನಿಸಲಾಗಿತ್ತು. ಈ ಕಾಮಗಾರಿ ಅನುಷ್ಠಾನಗೊಂಡರೆ ವಿಜಯಪುರ-ಹುಬ್ಬಳ್ಳಿ ಸಂಪರ್ಕಕ್ಕೆ ಹೆಚ್ಚು ಅನುಕೂಲವಾಗಲಿದೆ, ಇಂಡಿ ಕಾಲುವೆ ಪುನರ್ ನವೀಕರಣಕ್ಕೆ ಕೇಂದ್ರ ಸರಕಾರಕ್ಕೆ ಬೇಡಿಕೆ ಸಲ್ಲಿಸಲಾಗಿದ್ದು, ಅಂದಾಜು 2500 ಕೋಟಿ ರೂ. ಮೊತ್ತದಲ್ಲಿ ಕಾಲುವೆ ನವೀಕರಣ ಕಾರ್ಯ ಕೈಗೊಳ್ಳುವ ಸಂಬಂಧ ಮುಂದಿನ ವಾರ ಸಿಡಬ್ಲ್ಯೂಸಿ ಸಭೆಯಲ್ಲಿ ಚರ್ಚೆಯಾಗಲಿದೆ ಎಂದರು.

# ಬಸ್ ಅವ್ಯವಸ್ಥೆ: ಭರಡಿ ಗ್ರಾಮಸ್ಥರ ಪ್ರತಿಭಟನೆ

• ಉದಯವಾಹಿನಿ, ಹಾವೇರಿ

ಗ್ರಾಮಕ್ಕೆ ಸೂಕ್ತ ಬಸ್ಸಿನ ವ್ಯವಸ್ಥೆ ಇಲ್ಲದಿದ್ದರಿಂದ, ವಿದ್ಯಾರ್ಥಿಗಳು ಹಾಗೂ ಜನರಿಗೆ ಬೇರೆ ಊರುಗಳಿಗೆ ಹೋಗಿಬರಲು ತೊಂದರೆಯಾಗುತ್ತಿದೆ ಎಂದು ಆರೋಪಿಸಿ ಗ್ರಾಮಸ್ಥರು ದಿಢೀರ್ ಪ್ರತಿಭಟನೆ ನಡೆಸಿದರು. ಗ್ರಾಮದ ಮೂಲಕ ಸಂಚರಿಸುವ ಬಸ್ ತಡೆದು ಆಕ್ರೋಶ ವ್ಯಕ್ತಪಡಿಸಿದ ಗ್ರಾಮಸ್ಥರು, ಗ್ರಾಮಕ್ಕೆ ಒಂದೇ ಬಸ್ ಬರುತ್ತದೆ. ಅದು ಸಹ ಸಮಯಕ್ಕೆ ಸರಿಯಾಗಿ ಬರುವುದಿಲ್ಲ ಎಂದು ದೂರಿದರು.

ಭರಡಿ ಗ್ರಾಮವು ಮೂಲ ಸೌಕರ್ಯಗಳಿಂದ ವಂಚಿತವಾಗಿದೆ. ಶೈಕ್ಷಣಿಕವಾಗಿಯೂ ಹಿಂದುಳಿದಿದ್ದು, ಗ್ರಾಮದ ಮಕ್ಕಳು ಕಲಿಕೆಗಾಗಿ ಅಕ್ಕ-ಪಕ್ಕದ ಊರುಗಳಿಗೆ ಹೋಗುತ್ತಿದ್ದಾರೆ. ಸಮಯಕ್ಕೆ ಸರಿಯಾಗಿ ಬಸ್ ಇಲ್ಲದಿದ್ದರಿಂದ, ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹೊಡೆತ ಬೀಳುತ್ತಿದೆ ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ


ಹಾವೇರಿ-ಕೂರಗುಂದ-ಗುತ್ತಲ ಮಾರ್ಗದ ಬಸ್, ಬೆಳಿಗ್ಗೆ ಹಾಗೂ ಸಂಜೆ ಭರಡಿ ಗ್ರಾಮಕ್ಕೆ ಬಂದು ಹೋಗಬೇಕು. ಆದರೆ, ಸಮಯಕ್ಕೆ ಸರಿಯಾಗಿ ಬರುವುದಿಲ್ಲ. ಬೆಳಿಗ್ಗೆ ಬಸ್ ತಡವಾಗಿ ಬರುತ್ತದೆ. ಮಕ್ಕಳು ಶಾಲೆಗೆ ನಿಗದಿತ ಸಮಯಕ್ಕೆ ಹೋಗಲು ಆಗುತ್ತಿಲ್ಲ. ಸಂಜೆಯೂ ನಿಗದಿತ ಸಮಯಕ್ಕೆ ಬಸ್ ಬರುವುದಿಲ್ಲ. ಕೆಲ ಬಾರಿ, ಊರಿಗೆ ಬಸ್ಸೆ ಬರುವುದಿಲ್ಲ. ಇಂಥ ಸಂದರ್ಭದಲ್ಲಿ ವಿದ್ಯಾರ್ಥಿಗಳು, ನಡೆದುಕೊಂಡು ಹೋಗುವ ಸ್ಥಿತಿಯಿದೆ ಎಂದು ದೂರಿದರು.

# ಶೇ. 60ರಷ್ಟು ಜನರಿಗೆ ಪಂಚ ಗ್ಯಾರಂಟಿ ಆಸರೆ: ಶಾಸಕ

• ಉದಯವಾಹಿನಿ, ಸಿಂಧನೂರು

ತಾಲ್ಲೂಕಿನಲ್ಲಿ 3.40 ಲಕ್ಷ ಜನಸಂಖ್ಯೆ ಇದೆ. ಅದರಲ್ಲಿ ಶೇ 60ರಷ್ಟು ಜನರಿಗೆ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಿಂದ ಆರ್ಥಿಕ ಆಸರೆ ಲಭಿಸಿದೆ ಎಂದು ಶಾಸಕ ಹಂಪನಗೌಡ ಬಾದರ್ಲಿ ಹೇಳಿದರು. ನಗರದ ಟೌನ್ ಹಾಲ್‌ನಲ್ಲಿ ಕರ್ನಾಟಕ ರಾಜ್ಯ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಯಶೋಗಾಥೆ ಶಿಬಿರ' ಉದ್ಘಾಟಿಸಿ ಅವರು ಮಾತನಾಡಿದರು.

> ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಪಂಚ ಗ್ಯಾರಂಟಿ ಯೋಜನೆಗಳಿಂದ ತಾಲ್ಲೂಕಿಗೆ 400 ಕೋಟಿ 83 ಲಕ್ಷ ಬಿಡುಗಡೆಯಾಗಿದೆ.
>
> -ಚಂದ್ರಶೇಖರ, ಅಧಿಕಾರಿ


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಡ ಜನರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದಾರೆ. ಸರ್ಕಾರದ ಆಯವ್ಯಯದಲ್ಲಿ ಪ್ರತಿವರ್ಷ 56 ಸಾವಿರ ಕೋಟಿ ಪಂಚ ಗ್ಯಾರಂಟಿಗಳಿಗೆ ಕಾಯ್ದಿರಿಸುವ ಮೂಲಕ ನುಡಿದಂತೆ ನಡೆದಿದ್ದಾರೆ ಎಂದರು.

ವಿವಿಧ ಯೋಜನೆಗಳಿಂದ ರಾಜ್ಯದ 4.65 ಕೋಟಿ ಜನ ಪ್ರಯೋಜನ ಪಡೆಯುತ್ತಿದ್ದು, ಪ್ರತಿ ಕುಟುಂಬಕ್ಕೆ ಕನಿಷ್ಠ ಪ್ರತಿ ತಿಂಗಳು 8 ಸಾವಿರ ಲಭಿಸುತ್ತಿರುವುದು ವಿಶಿಷ್ಟವಾಗಿದೆ. ಇಂಥ ಸಮಾಜ ಪರಿವರ್ತನಾ ಕಾರ್ಯಕ್ರಮವನ್ನು ಸಿದ್ದರಾಮಯ್ಯ ಹೊರತುಪಡಿಸಿ ಯಾವ ಮುಖ್ಯಮಂತ್ರಿಯೂ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು.

# ಹಿರಿಯ ನಾಗರಿಕರ ಬೇಡಿಕೆ ಈಡೇರಿಕೆಗೆ ಆಗ್ರಹ

• ಉದಯವಾಹನಿ, ಲಕ್ಷ್ಮೇಶ್ವರ

ಪಟ್ಟಣದ ಹಿರಿಯ ನಾಗರಿಕರ ಸಂಘದ ಚಟುವಟಿಕೆ ನಡೆಸಲು ಪುರಸಭೆ ವತಿಯಿಂದ ಸ್ಥಳವಕಾಶ ನೀಡುವ ಮೂಲಕ ಹಿರಿಯ ನಾಗರಿಕರಿಗೆ ಸೂಕ್ತ ಗೌರವ ಕೊಡಬೇಕು ಎಂದು ಹಿರಿಯ ನಾಗರಿಕರ ವೇದಿಕೆಯ ಸದಸ್ಯ ಚನ್ನಪ್ಪ ಕೋಲಕಾರ ಆಗ್ರಹಿಸಿದರು.

ಸಂಘದ ವತಿಯಿಂದ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಸೋಮವಾರ ಹಿರಿಯ ನಾಗರಿಕರ ವೇದಿಕೆ ವತಿಯಿಂದ ಮನವಿ ಸಲ್ಲಿಸಿ ಅವರು ಮಾತನಾಡಿದ ಅವರು, ಹಿರಿಯ ನಾಗರಿಕರಿಗೆ ಕಚೇರಿಯ ಅಗತ್ಯವಿದೆ. ಪಟ್ಟಣದ ಮಹಾಕವಿ ಪಂಪ ವರ್ತುಲದ ಹತ್ತಿರವಿರುವ ಪುರಸಭೆಯ ಮಾಲಿಕತ್ವದ ಕಟ್ಟಡವನ್ನು ಹಿರಿಯ ನಾಗರಿಕರಿಗೆ ನೀಡಬೇಕು. ಬೇಡಿಕೆ ಈಡೇರದಿದ್ದಲ್ಲಿ ಪುರಸಭೆ ಎದುರು ಸತ್ಯಾಗ್ರಹ ನಡೆಸಲಾಗುವುದು ಎಂದರು.


ಉದಯವಾಹಿನಿ ಚಿತ್ರ

ಎಪಿಎಂಸಿ ಮಾಜಿ ಅಧ್ಯಕ್ಷ ಎಸ್.ಪಿ. ಪಾಟೀಲ ಮಾತನಾಡಿ, ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ ಹಿರಿಯ ನಾಗರಿಕರನ್ನು ಕಡೆಗಣಿಸುವುದು ಸರಿ ಅಲ್ಲ. ಅವರ ಅನುಭವ ಬಳಸಿಕೊಂಡು ಉತ್ತಮ ಸಮಾಜ ನಿರ್ಮಾಣ ಮಾಡಲು ಮುಂದಾಗಬೇಕು ಎಂದು ತಿಳಿಸಿದರು.

> ಪಟ್ಟಣದಲ್ಲಿ ಹಿರಿಯ ನಾಗರಿಕರಿಗೆ ಸೌಲಭ್ಯ ಒದಗಿಸಲು ಸಹಕಾರ ನೀಡಲಾಗುವುದು. ಪುರಸಭೆ ಸಾಮಾನ್ಯ ಸಭೆಯಲ್ಲಿ ಹಿರಿಯ ನಾಗರಿಕರಿಗೆ ಬೇಕಾಗಿರುವ ಸೌಲಭ್ಯ ನೀಡಲು ಪ್ರಯತ್ನಿಸುತ್ತೇನೆ
>
> -ಮಹೇಶ ಹಡಪದ, ಪುರಸಭೆ ಮುಖ್ಯಾಧಿಕಾರಿ

# ಸಚಿವ ತಂಗಡಗಿ ಭದ್ರತಾ ವಾಹನ ಡಿಕ್ಕಿ

• ಉದಯವಾಹಿನಿ, ಕೂಡ್ಲಿಗಿ

ಕೂಡ್ಲಿಗಿ ತಾಲ್ಲೂಕಿನ ಸಕಲಾಪುರದ ಹಟ್ಟಿ ಕ್ರಾಸ್ ಬಳಿ ರಾಷ್ಟ್ರೀಯ ಹೆದ್ದಾರಿ-50ರಲ್ಲಿ ಮಂಗಳವಾರ ರಾತ್ರಿ ಸಚಿವ ಶಿವರಾಜ್ ತಂಗಡಗಿ ಅವರ ಭದ್ರತೆಗೆ ಮೀಸಲಾಗಿದ್ದ ಹೆಚ್ಚುವರಿ ವಾಹನ ಡಿಕ್ಕಿಯಾಗಿ ಹೆದ್ದಾರಿ ಗಸ್ತು ವಾಹನದಲ್ಲಿದ್ದ ಎಎಸ್‌ಐ ಗಾಯಗೊಂಡ ಘಟನೆ ಮಂಗಳವಾರ ರಾತ್ರಿ ನಡೆದಿದೆ. ಸಚಿವ ಶಿವರಾಜ ತಂಗಡಗಿ ಅವರು ಮಂಗಳವಾರ ರಾತ್ರಿ 7.30ರ ಸುಮಾರಿಗೆ ರಾಷ್ಟ್ರೀಯ ಹೆದ್ದಾರಿ-50ರ ಮುಖಾಂತರ ಕನಕಗಿರಿಯಿಂದ ಬೆಂಗಳೂರು ಕಡೆ ಹೋಗುತ್ತಿದ್ದಾಗ ತಾಲ್ಲೂಕಿನ ಸಕಲಾಪುರಹಟ್ಟಿ ಗೊಲ್ಲರಹಟ್ಟಿ ಕ್ರಾಸ್ ಬಳಿ ಹಿಂದಿನಿಂದ ಬಂದ ಸಚಿವರ ಹೆಚ್ಚುವರಿ ವಾಹನವು ಮುಂದೆ ಹೋಗುತ್ತಿದ್ದ ಹೆದ್ದಾರಿ ಗಸ್ತು ವಾಹನಕ್ಕೆ ಡಿಕ್ಕಿ ಹೊಡೆದಿದೆ. ಇದರಿಂದ ಗಸ್ತು ವಾನಹದಲ್ಲಿದ್ದ ಕೊಟ್ಟೂರು ಠಾಣೆಯ ಎಎಸ್‌ಐ ಹುಲಿಯಪ್ಪ ಅವರಿಗೆ ಪೆಟ್ಟಾಗಿದೆ. ಘಟನೆ ನಡೆದ ನಂತರ ಸಚಿವ ತಂಗಡಿಗೆ ಅವರು ಗಾಯಾಳನ್ನು ತಕ್ಷಣ ಅಸ್ಪತ್ರೆಗೆ ಕಳಿಸಿದರು.ಕೂಡ್ಲಿಗಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದಾರೆ. ಚಾಲಕನಿಗೆ ಯಾವುದೇ ಅಪಾಯವಾಗಿಲ್ಲ.

ಸ್ಥಳಕ್ಕೆ ಕೂಡ್ಲಿಗಿ ಉಪ ವಿಭಾಗದ ಡಿವೈಎಸ್ಪಿ ಮಲ್ಲೇಶ್ ದೊಡ್ಡಮನೆ ಬೇಟಿ ನೀಡಿ ಪರಿಶೀಲಿಸಿದ್ದಾರೆ. ನಂತರ ಸಚಿವರು ಬೆಂಗಳೂರಿನತ್ತ ಹೋಗಿದ್ದಾರೆ.

# ಅವಿರತ ಪೌಂಡೇಷನ್ ವತಿಯಿಂದ ಮಕ್ಕಳಿಗೆ ಉಚಿತ ನೋಟ್ ಬುಕ್ ವಿತರಣೆ

• ಉದಯವಾಹಿನಿ, ಮುದ್ದೇಬಿಹಾಳ

ತಾಲ್ಲೂಕಿನ ನೇಬಗೇರಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ನೋಟ್ ಬುಕ್ ವಿತರಣಾ ಸಮಾರಂಭ ನಡೆಯಿತು.ಅವಿರತ ಫೌಂಡೇಶನ್ ವತಿಯಿಂದ ನಿರಂತರ ಸೇವೆಎಂಬ ಧ್ಯೇಯವಾಕ್ಯದೊಂದಿಗೆ ಹಳ್ಳಿಯ ಬಡ ಮಕ್ಕಳಿಗೆ ಉಚಿತವಾಗಿ ಹಲವಾರು ವರ್ಷಗಳಿಂದ ನೋಟ್ ಬುಕ್ ಗಳನ್ನು ವಿತರಣೆ ಮಾಡುತ್ತಾ ಬಂದಿದ್ದು ಬಡಮಕ್ಕಳ ಕಲಿಕೆಗೆ ದಾರಿದೀಪವಾಗಿದೆ, ಕೂಲಿ ಕೆಲಸ ಮಾಡಿಕೊಂಡು ಜೀವನ ನಡೆಸುವ ಸಂದರ್ಭದಲ್ಲಿ ಪಾಲಕರಿಗೆ ಮಕ್ಕಳಿಗೆ ನೋಟ್ ಬುಕ್ ಗಳನ್ನು ಕೊಡಿಸುವುದು ಬಹಳಷ್ಟು ಕಷ್ಟವಾಗುತ್ತದೆ, ನೀಡಿದ ದಾನದಿಂದ ಅದೆಷ್ಟು ಬಡಮಕ್ಕಳ ಬಾಳಿಗೆ ಬೆಳಕಾಗಲು ಸಾಧ್ಯ ಎಂದು ಗಣಿತ ಶಿಕ್ಷಕರಾದ ಶ್ರೀ ಎಸ್ ಬಿ ಹೂಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು, ಈ ಸಂದರ್ಭದಲ್ಲಿ ಅತಿಥಿಗಳಾಗಿ ಮಹಾಬಳೇಶ ದೇಗಿನಾಳ, ಮುಖ್ಯಗುರುಗಳಾದ ಪಿ ಆರ್ ನಾಯಕ, ಹಿರಿಯ ಗುರುಗಳಾದ ಐ ಎ ಹಿರೇಮಠ,ಬಿ ಆರ್ ರಾಠೋಡ, ಗುರುಮಾತೆಯರಾದ ಶ್ರೀಮತಿ ಐ ಎ ಹಾವರಗಿ,ಜಿ ಎಸ್ ತಾಳಿಕೋಟಿ, ಮಂಜುಳಾ ಮೇಡಂ, ಶಿಕ್ಷಕರಾದ ರವಿ ಗೌಡರ ನಿರೂಪಿಸಿದರು, ಅತಿಥಿ ಶಿಕ್ಷಕರಾದ ಶರಣಗೌಡ ಕೋಳೂರ ಸ್ವಾಗತಿಸಿದರು ಬಿ ಆರ್ ರಾಠೋಡ ಗುರುಗಳು ವಂದಿಸಿದರು ಈ ಸಂದರ್ಭದಲ್ಲಿ ಊರಿನ ಗುರು ಹಿರಿಯರು, ಶಿಕ್ಷಣ ಪ್ರೇಮಿಗಳು, ಅಡುಗೆ ಸಿಬ್ಬಂದಿ ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# ಜಿಲ್ಲೆಯಲ್ಲಿ 825 ತೀವ್ರ ಅಪೌಷ್ಟಿಕತೆ ಮಕ್ಕಳು

• ಉದಯವಾಹಿನಿ, ಹೊಸಪೇಟೆ

ಜಿಲ್ಲೆಯಲ್ಲಿ ತೀವ್ರ ಅಪೌಷ್ಟಿಕತೆಯ 825 ಮಕ್ಕಳು ಇರುವುದು ಕಳವಳಕಾರಿ ಸಂಗತಿ, ಅಧಿಕಾರಿಗಳು ಇದನ್ನು ಗಂಭೀರವಾಗಿ ತೆಗೆದುಕೊಳ್ಳಲೇಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹೇಳಿದೆ. ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ, ಡಾ.ತಿಪ್ಪೇಸ್ವಾಮಿ ಕೆ.ಟಿ., ಶೇಖರ ಗೌಡ ರಾಮತ್ನಾಳ ನೇತೃತ್ವದ ತಂಡ ಮಂಗಳವಾರ ಇಲ್ಲಿನ ಸಾರ್ವಜನಿಕ ಆಸ್ಪತ್ರೆ ಹಾಗೂ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿದ ಬಳಿಕ ಈ ಅಭಿಪ್ರಾಯ ವ್ಯಕ್ತಪಡಿಸಿತು.

> ವಿವಿಧ ಇಲಾಖೆಗಳು ಸಮನ್ವಯತೆಯ ತುರ್ತು ಸಭೆ ನಡೆಸಿ ತೀವ್ರ ಅಪೌಷ್ಟಿಕತೆಯಿಂದ ಬಳಲುವ ಮಕ್ಕಳಿಗೆ ಸಕಾಲದಲ್ಲಿ ದಾಖಲು ಮಾಡುವ ಮೂಲಕ ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಮುಂದಾಗಬೇಕು.
>
> - ಶಶಿಧರ ಕೋಸಂಬೆ ಸದಸ್ಯರು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ

ಮಕ್ಕಳ ಅಪೌಷ್ಟಿಕ ಪುನಃಶ್ವೇತನ ಘಟಕಕ್ಕೆ ಭೇಟಿ ನೀಡಿದ ತಂಡ, ದಾಖಲಾದ ಆರು ಮಕ್ಕಳ ಸ್ಥಿತಿಗತಿ ಪರಿಶೀಲಿಸಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಾರ ಜಿಲ್ಲೆಯಲ್ಲಿ ಅಪೌಷ್ಟಿಕತೆಯಿಂದ ಬಳಲುತ್ತಿರುವ 825 ಮಕ್ಕಳು ಮತ್ತು ಸಾಧಾರಣ ಅಪೌಷ್ಟಿಕತೆಯ 1,250ಕ್ಕೂ ಹೆಚ್ಚು ಮಕ್ಕಳು ಇದ್ದಾರೆ. ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದ ತಂಡದ ಮಾಹಿತಿ ಪ್ರಕಾರ 451 ಮಕ್ಕಳು ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಇಷ್ಟೊಂದು ಅಪೌಷ್ಟಿಕತೆಯಿಂದ ಮಕ್ಕಳು ಬಳಲುತ್ತಿದ್ದರೂ ಸಂಬಂಧಿಸಿದ ಅಧಿಕಾರಿಗಳು ಮಾತ್ರ ತಮಗೆ ಸಂಬಂಧವೇ ಇಲ್ಲ ಎಂಬಂತೆ ವರ್ತನೆ ಮಾಡುತ್ತಿರುವುದು ಸರಿಯಲ್ಲ ಎಂದು ಆಯೋಗದ ಸದಸ್ಯರು ಹೇಳಿದರು.


ಉದಯವಾಹಿನಿ ಚಿತ್ರ

**ತುರ್ತು ಸಭೆ ನಡೆಸಿ**

**ಸೆಖೆ ಇದ್ದರೂ ಎ.ಸಿ ಇಲ್ಲ:** ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವಿಶೇಷ ನವಜಾತ ಶಿಶುಗಳ ಆರೈಕೆ ಘಟಕಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಆಯೋಗ, ಇಷ್ಟೊಂದು ಸೆಖೆಯಿದೆ, ಇಲ್ಲಿ ಅಳವಡಿಸಿದ ಎ.ಸಿಗಳನ್ನು ಏಕೆ ಬಂದ್ ಮಾಡಲಾಗಿದೆ ಎಂದು ಪ್ರಶ್ನಿಸಿತು. ದಾಖಲಾದ ಮಕ್ಕಳ ಆರೋಗ್ಯದ ಸ್ಥಿತಿಗತಿಯ ಕುರಿತು ಮಾಹಿತಿ ಪಡೆದುಕೊಂಡಿತು. ಮಕ್ಕಳ ಮಾದರಿ ಚುಚ್ಚುಮದ್ದು ಕೇಂದ್ರ, ಮಕ್ಕಳ ವಾರ್ಡ್, ಸ್ಕ್ಯಾನಿಂಗ್ ಸೆಂಟರ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು. ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಲ್. ಆರ್. ಶಂಕರ್ ನಾಯ್ಕ,, ಆರ್‌ಸಿಎಚ್ ಅಧಿಕಾರಿ ಡಾ.ಜಂಬಯ್ಯ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಸುದೀಪ್ ಕುಮಾರ್ ಊಂಕಿ ಇದ್ದರು.

**ಹಾಸ್ಟೆಲ್‌ನಲ್ಲಿ ಬಲ್ಸ್‌ಗೆ ತತ್ವಾರ**

ಹೊಸಪೇಟೆ ತಾಲ್ಲೂಕಿನ ಬುಕ್ಕಸಾಗರ ಬಳಿಯ ಮೂರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿದ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಮಕ್ಕಳ ವಸತಿ ಕೊಠಡಿಗಳನ್ನು ಪರಿಶೀಲಿಸಿತು. ಒಂದು ಕೊಠಡಿಯಲ್ಲಿ 25 ಮಕ್ಕಳು ವಾಸಿಸುವ ಜತೆಗೆ ವಿದ್ಯಾಭ್ಯಾಸ ಮಾಡುತ್ತಾರೆ ಆದರೆ ಒಂದು ಹೆಚ್ಚುವರಿ ಬಲ್ಡ್ ಅಳವಡಿಸಲು ಏನು ತೊಂದರೆ? ಎಂದು ಸದಸ್ಯರು ಪ್ರಶ್ನಿಸಿದರು. ಶೌಚಾಲಯ ಹಾಗೂ ಸ್ನಾನದ ಅವ್ಯವಸ್ಥೆ ಕಂಡು ಪ್ರಾ.ಚಾರ್ಯರನ್ನು ತರಾಟೆಗೆ ತೆಗೆದುಕೊಂಡರು. ಕೊಂಡನಾಯಕನಹಳ್ಳಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಕ್ಷಯ ಪಾತ್ರೆ ವತಿಯಿಂದ ತಯಾರಿಸಲಾದ ಪಲಾವ್ ಅನ್ನು ಸದಸ್ಯರು ಸೇವಿಸಿದರು. ಪಲಾವಗೆ ತಾಳಿ ಎಣ್ಣೆ ಜಾಸ್ತಿ ಬಳಿಸಿದ್ದು ಕಂಡು ಬಂದಿದೆ ಸಂಬಂಧಪಟ್ಟವರು ಗಮನಿಸಿ ಕ್ರಮ ವಹಿಸಬೇಕು ಎಂದು ಸೂಚಿಸಿದರು.

# ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ: ಪಿಎಸ್‌ಐ

• ಉದಯವಾಹಿನಿ, ಸುರಪುರ

ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ. ಇದಕ್ಕೆ ಕಾರಣವಾಗುವ ಪೋಷಕರು ಮತ್ತು ಸಂಸ್ಥೆಯವರಿಗೆ ಎರಡು ವರ್ಷ ಸೆರೆಮನೆ, 1 ಲಕ್ಷ ದಂಡ ವಿಧಿಸುವ ಅವಕಾಶವಿದೆ ಎಂದು ಪಿಎಸ್‌ಐ ಶರಣಪ್ಪ ಹವಾಲ್ದಾರ ಹೇಳಿದರು. ತಾಲ್ಲೂಕಿನ ಪೇಠ ಅಮ್ಮಾಪುರ ಮತ್ತು ಜಾಲಿಬೆಂಚಿ ಗ್ರಾಮಗಳ ಶಾಲೆಗಳಲ್ಲಿ ಮಂಗಳವಾರ ಪೊಲೀಸ್ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ ಜಾಗೃತಿ ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ರ ಪ್ರಕಾರ ಹುಡುಗನಿಗೆ ಕನಿಷ್ಠ 21, ಹುಡುಗಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು. ಒಂದು ವೇಳೆ ಬಾಲ್ಯವಿವಾಹ ಮಾಡಲು ಯತ್ನಿಸಿದರೆ ಬಾಲಕಿಯರು ಪ್ರತಿಭಟಿಸಬೇಕು ಎಂದು ಸಲಹೆ ನೀಡಿದರು. ಮಕ್ಕಳ ಮೇಲೆ ಲೈಂಗಿಕ ಶೋಷಣೆ ನಡೆದಲ್ಲಿ 2012 ಪೋ ಕಾಯ್ದೆ ಶಿಕ್ಷೆಗೆ ಅವಕಾಶ ಕಲ್ಪಿಸುತ್ತದೆ. ತುರ್ತು ಸಂದರ್ಭಗಳಲ್ಲಿ ದೂ.112ಕ್ಕೆ ಕರೆ ಮಾಡಿ. ಕೆಲವೇ ಸಮಯದಲ್ಲಿ ಪೊಲೀಸರು ಸ್ಥಳಕ್ಕೆ ಧಾವಿಸುತ್ತಾರೆ ಎಂದು ತಿಳಿಸಿದರು. ಅಪರಿಚಿತರು ಅಥವಾ ಯಾರಾದರೂ ಕರೆ ಮಾಡಿ, ನಿಮ್ಮ ಆಧಾರ್ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ, ಒಟಿಪಿ ಕೇಳಿದರೆ ಹಂಚಿಕೊಳ್ಳಬೇಡಿ ಎಂದು ಸಲಹೆ ನೀಡಿದರು.

# ಬೋರ್‌ವೆಲ್ ಸಂಪರ್ಕ ಸ್ಥಗಿತ: ಟ್ಯಾಂಕರ್ ಮೂಲಕ ನೀರು ಪೂರೈಕೆ

## ಮಾನ್ಯರಮಸಲವಾಡ: ಮತ್ತೆ 7 ಜನರಿಗೆ ವಾಂತಿಭೇದಿ, ಜಿ.ಪಂ. ಸಿಇಒ ಭೇಟಿ

• ಉದಯವಾಹಿನಿ, ಹೂವಿನಹಡಗಲಿ

ತಾಲ್ಲೂಕಿನ ಮಾನ್ಯರಮಸಲವಾಡ ಗ್ರಾಮದಲ್ಲಿ ಮತ್ತೆ 7 ಜನರಿಗೆ ವಾಂತಿಭೇದಿ ಕಾಣಿಸಿಕೊಂಡಿದ್ದು, ಅಸ್ವಸ್ಥ ಮೂವರನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮದ ಭೋವಿ ಕಾಲೊನಿ, ಕುರುಬರ ಓಣಿಗೆ ಕುಡಿಯುವ ನೀರು ಪೂರೈಸುವ ಕೊಳವೆ ಬಾವಿ ಮತ್ತು ಪೈಪ್ ಲೈನ್‌ನಲ್ಲಿ ಕಲುಷಿತ ನೀರು ಮಿಶ್ರಣವಾಗಿತ್ತು. ಈ ನೀರು ಸೇವಿಸಿದ್ದ 27ಕ್ಕೂ ಹೆಚ್ಚು ಜನರಿಗೆ ವಾಂತಿಭೇದಿ ಕಾಣಿಸಿಕೊಂಡಿತ್ತು.




ಉದಯವಾಹಿನಿ ಚಿತ್ರ

ಅಸ್ವಸ್ಥರು ದಾವಣಗೆರೆ, ಗದಗ, ಹರಪನಹಳ್ಳಿ, ಹೂವಿನಹಡಗಲಿ ಆಸ್ಪತ್ರೆಗಳಲ್ಲಿ ದಾಖಲಾಗಿದ್ದಾರೆ. ದಾವಣಗೆರೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವೃದ್ಧೆ ಅಮಲಮ್ಮ ಅವರನ್ನು ವೈದ್ಯರು ಡಯಾಲಿಸಿಸ್‌ಗೆ ಶಿಫಾರಸು ಮಾಡಿದ್ದು, ಉಳಿದವರೆಲ್ಲರೂ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ಆರೋಗ್ಯಾಧಿಕಾರಿಗಳು ತಿಳಿಸಿದ್ದಾರೆ. ಗ್ರಾಮದಲ್ಲಿ ವಾಂತಿಭೇದಿ ನಿಯಂತ್ರಣಕ್ಕೆ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ. ಕೊಳವೆಬಾವಿ ನೀರು ಪೂರೈಕೆಯನ್ನು ಸ್ಥಗಿತಗೊಳಿಸಲಾಗಿದ್ದು, ಶುದ್ಧೀಕರಿಸಿದ ನೀರನ್ನು ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ಸಂಗ್ರಹಿಸಿರುವ ನೀರನ್ನು ಖಾಲಿ ಮಾಡಿಸಿದ್ದಾರೆ. ಗ್ರಾಮದಲ್ಲಿ ಕುಡಿಯುವ ನೀರು ನೈರ್ಮಲ್ಯ ಕಾಪಾಡಲು ಕ್ರಮ ಕೈಗೊಂಡಿದ್ದೇವೆ. ಮುಂಜಾಗ್ರತಾ ಕ್ರಮವಾಗಿ ಎಲ್ಲ ಕೊಳವೆ ಬಾವಿ ಸ್ಥಗಿತಗೊಳಿಸಿ, ನಾಲ್ಕು ಟ್ಯಾಂಕರ್ ಗಳಿಂದ ನೀರು ಪೂರೈಸುತ್ತಿದ್ದೇವೆ. ನೀರಿನ ಮಾದರಿ ಪರೀಕ್ಷಾ ವರದಿ ಬಂದ ನಂತರ ಯೋಗ್ಯವಿರುವ ಬೋರ್ ವೆಲ್ ಗಳಿಂದ ಮಾತ್ರ ನೀರು ಪೂರೈಸಲಾಗುತ್ತದೆ. ಸದ್ಯ ವಾಂತಿಭೇದಿ ನಿಯಂತ್ರಣಕ್ಕೆ ಬರುತ್ತಿದೆ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಎಂ.ಉಮೇಶ್ ಹೇಳಿದರು.

**ಜೆಜೆಎಂ ಕಾಮಗಾರಿ ಪೂರ್ಣಗೊಳಿಸಲು ಸೂಚನೆ**

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೊಂಗ್ಜಾಯ್ ಅಕ್ರಂ ಪಾಷಾ ಅವರು ಮಂಗಳವಾರ ಮಾನ್ಯರಮಸಲವಾಡ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಆರೋಗ್ಯ ಇಲಾಖೆ ಗ್ರಾಮ ಪಂಚಾಯಿತಿ ಸಮನ್ವಯದೊಂದಿಗೆ ಕೆಲಸ ಮಾಡಿ ವಾಂತಿಭೇದಿ ನಿಯಂತ್ರಿಸಬೇಕು. ಅಸ್ವಸ್ಥರನ್ನು ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ದಾಖಲಿಸಿಕೊಂಡು ಚಿಕಿತ್ಸೆ ನೀಡಬೇಕು ಎಂದು ಸೂಚಿಸಿದರು. ಅಪೂರ್ಣಗೊಂಡಿರುವ ಜಲಜೀವನ್ ಮಿಷನ್ ಕಾಮಗಾರಿಯನ್ನು ತಿಂಗಳೊಳಗೆ ಪೂರ್ಣಗೊಳಿಸಿ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸುವಂತೆ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ದೀಪಾ ಅವರಿಗೆ ಸೂಚಿಸಿದರು.

> ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಷಣ್ಮುಖನಾಯ್ಕ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸಪ್ನಾ ಕಟ್ಟಿ ಮನೆಗಳಿಗೆ ಭೇಟಿ ನೀಡಿ ಜನರ ಆರೋಗ್ಯ ವಿಚಾರಿಸುತ್ತಿದ್ದಾರೆ. ಪ್ರತಿ ಮನೆಗೂ ಒಆರ್ ಎಸ್ ಪಾಕೀಟ್ ಗಳನ್ನು ವಿತರಿಸಿದ್ದಾರೆ. ವಾಂತಿಭೇದಿ, ಜ್ವರದ ಲಕ್ಷಣಗಳು ಕಾಣಿಸಿಕೊಂಡರೆ ತಕ್ಷಣ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಬರುವಂತೆ ತಿಳಿಸಿದ್ದಾರೆ.

## ಮಿನಿ ನ್ಯೂಸ್

### ಕೇಂದ್ರ ಸರ್ಕಾರದಿಂದ ರಸಗೊಬ್ಬರ ವಿತರಣೆಗೆ ಒತ್ತಾಯ

• ಉದಯವಾಹಿನಿ, ಮೂಡಲಗಿ

ರಾಜ್ಯದಲ್ಲಿ ಈಗಾಗಲೇ ಮುಂಗಾರು ಹಂಗಾಮು ಆರಂಭವಾಗಿದ್ದು ಕೇಂದ್ರ ಸರ್ಕಾರದಿಂದ ಪೂರೈಸಲಾಗುವ ರಸಗೊಬ್ಬರಗಳು ವಿತರಣಾ ಕೇಂದ್ರಗಳಿಗೆ ತಲುಪಲು ವಿಳಂಬವಾಗುತ್ತಿದೆ. ರೈತರ ಕೃಷಿ ಚಟುವಟಿಕೆಗೆ ತೊಂದರೆಯಾಗಿದೆ. ಪದೆ ಪದೇ ಬೆಲೆ ಏರಿಕೆ ಆಗುತ್ತಿರುವುದರಿಂದ ರೈತರಿಗೆ ಆರ್ಥಿಕ ಹೊರೆಯಾಗುತ್ತಿದೆ.

ಈ ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸಬೇಕು ಎಂದು ಕರ್ನಾಟಕ ನವನಿರ್ಮಾಣ ಸೇನೆ ತಾಲ್ಲೂಕು ಪ್ರಧಾನ ಸಂಚಾಲಕ ರಮೇಶ ನಾಯಕ ನೇತೃತ್ವದಲ್ಲಿ ರಾಜ್ಯಸಭೆ ಸದಸ್ಯರಾದ ಈರಣ್ಣ ಕಡಾಡಿ ಅವರಿಗೆ ಮನವಿ ಸಲ್ಲಿಸಲಾಯಿತು. ವೆಂಕಟಾಪುರ ಗ್ರಾಮಕ್ಕೆ ಈರಣ್ಣ ಕಡಾಡಿ ಭೇಟಿ ನೀಡಿದ ಸಂದರ್ಭದಲ್ಲಿ ಅವರನ್ನು ಭೇಟಿಯಾದ ಸಂಘಟನೆಯ ಪದಾಧಿಕಾರಿಗಳು, ಎಲ್ಲೆಡೆ ಕೃಷಿ ಚಟುವಟಿಕೆ ಭರದಿಂದ ಸಾಗಿವೆ. ಸರಿಯಾದ ಸಮಯಕ್ಕೆ, ಬೆಲೆಗೆ ರಸಗೊಬ್ಬರ ಪೂರೈಕೆ ಆಗದ್ದಿದರೆ ರೈತರಿಗೆ ಸಾಕಷ್ಟು ಹಾನಿಯಾಗುತ್ತದೆ. ರಾಜ್ಯದ ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ರಾಜ್ಯದ ರೈತರಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

### ಪಕ್ಷದ ಬಲವರ್ಧನೆಗೆ ಯುವಶಕ್ತಿ ಮುಖ್ಯ: ಶಾಸಕ ಪಠಾಣ

• ಉದಯವಾಹಿನಿ, ಶಿಗ್ಗಾವಿ

ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಕಾಂಗ್ರೆಸ್ ಪಕ್ಷ ನಮ್ಮದು, ಅಂತಹ ಪಕ್ಷದಿಂದ ಮಾತ್ರ ದೇಶದ ಸರ್ವಾಂಗೀಣ ಅಭಿವೃದ್ಧಿ ಕಾಣಲು ಸಾಧ್ಯವಿದೆ. ಅದಕ್ಕೆ ಯುವ ಸಂಘಟನೆ ಶ್ರಮ ಮುಖ್ಯವಾಗಿದೆ ಎಂದು ಶಾಸಕ ಯಾಸೀರ ಅಹ್ಮದಖಾನ್ ಪಠಾಣ ಹೇಳಿದರು. ಪಟ್ಟಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಹಾಗೂ ಜಿಲ್ಲಾ ಯುವ ಕಾರ್ಯಕಾರಣಿ ಸಭೆಯಲ್ಲಿ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷ ತನ್ನದೇಯಾದ ತತ್ವಸಿದ್ಧಾಂತದಲ್ಲಿ ನಡೆಯುತ್ತಾ ಬಂದಿದ್ದು, ಪಕ್ಷಕ್ಕಾಗಿ ಶ್ರಮಿಸಿದ ವ್ಯಕ್ತಿಗಳನ್ನು ಗುರುತಿಸಿ ಉತ್ತಮ ಸ್ಥಾನಮಾನ ನೀಡುತ್ತಿದೆ. ಅದಕ್ಕೆ ಸಾಮಾನ್ಯ ಕಾರ್ಯಕರ್ತನಾದ ನನ್ನನ್ನು ಶಾಸಕನ್ನಾಗಿ ಮಾಡಿದ್ದು, ತಮಗೆಲ್ಲ ಪ್ರೇರಣೆಯಾಗಲಿ ಎಂದರು. ಕೆಪಿಸಿಸಿ ರಾಜ್ಯ ಘಟಕದ ಅಧ್ಯಕ್ಷ ಮಂಜುನಾಥ ಎಚ್. ಎಸ್ ಮಾತನಾಡಿ, ಬಡವರ ಧ್ವನಿಯಾದಾಗ ಮಾತ್ರ ನಾಯಕತ್ವದ ಗುಣಗಳು ಬೆಳಸಿಕೊಳ್ಳಲು ಸಾಧ್ಯವಿದೆ ಎಂದರು.

### ಟೋಲ್ ಗೇಟ್ ರದ್ದುಗೊಳಿಸಲು ಆಗ್ರಹ

• ಉದಯವಾಹಿನಿ, ಹಾನಗಲ್

ತಾಲ್ಲೂಕಿನ ಕರಗುದರಿ ಬಳಿ ಹೊಸದಾಗಿ ಸ್ಥಾಪನೆಯಾದ ಟೋಲ್ ಗೇಟ್‌ನಲ್ಲಿ ಸೋಮವಾರದಿಂದ ವಾಹನಗಳ ಶುಲ್ಕ ಸಂಗ್ರಹಣೆ ಶುರುವಾಗಿದ್ದು, ಹದಗೆಟ್ಟ ಹೆದ್ದಾರಿಗೆ ಸುಂಕವೇಕೆ ಎಂದು ಈ ರಸ್ತೆಯಲ್ಲಿ ಓಡಾಡುವವರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ತಡಸ-ಶಿವಮೊಗ್ಗ ರಸ್ತೆಗೆ ಹಾನಗಲ್ ಹೊರಭಾಗದ ಕರಗುದರಿ ಕ್ರಾಸ್ ಬಳಿಯಲ್ಲಿ ಟೋಲ್‌ಗೇಟ್ ಸ್ಥಾಪಿಸುವ ಪ್ರಕ್ರಿಯೆಗಳ ಆರಂಭದಿಂದಲೂ ಜನರ ವಿರೋಧ ವ್ಯಕ್ತವಾಗಿತ್ತು. ವಿವಿಧ ಸಂಘಟನೆಗಳಿಂದ ಹಲವಾರು ಬಾರಿ ಪ್ರತಿಭಟನೆ ನಡೆದಿದ್ದವು. ಜನರ ವಿರೋಧದ ನಡುವೆಯೂ ಟೋಲ್ ಗೇಟ್ ಸ್ಥಾಪನೆಯಾಗಿ ಸುಂಕ ವಸೂಲಿ ನಡೆದಿರುವುದು ಈ ಭಾಗದ ಜನರಲ್ಲಿ ಅಸಮಾಧಾನ ಬುಗಿಲೇಳಲು ಕಾರಣವಾಗಿದೆ.

ಮಂಗಳವಾರ ಟೋಲ್ ಗೇಟ್ ಸ್ಥಳದಲ್ಲಿ ಇಲ್ಲಿನ ವಿವಿಧ ಸಂಘಟನೆಗಳ ಪ್ರಮುಖರು, ಖಾಸಗಿ ವಾಹನ ಚಾಲಕರ ಸಂಘದವರು ಪ್ರತಿಭಟನೆ ನಡೆಸಿದರು. ಸುಮಾರು 3 ಗಂಟೆ ಟೋಲ್‌ಗೇಟ್ ಸ್ಥಳದಲ್ಲಿ ಪ್ರತಿಭಟನೆ ನಡೆಸಿದರು. ಈ ಸಮಯದಲ್ಲಿ ಓಡಾಡುವ ವಾಹನಗಳಿಗೆ ಶುಲ್ಕ ಪಡೆಯದಂತೆ ಟೋಲ್ ಸಿಬ್ಬಂದಿಗೆ ಪ್ರತಿಭಟನಾ ನಿರತರು ತಾಕೀತು ಮಾಡಿದರು. ಸ್ಥಳಕ್ಕೆ ಆಗಮಿಸಿದ ಕೆಆರ್‌ಡಿಸಿಎಲ್ ಅಧಿಕಾರಿ ದಯಾನಂದ ಅವರಿಗೆ ಮನವಿ ಸಲ್ಲಿಸಿದರು. ಈ ಭಾಗದ ಜನರ ಪ್ರತಿಭಟನೆಯ ವಿಷಯವನ್ನು ಇಲಾಖೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುತ್ತದೆ ಎಂದು ಅಧಿಕಾರಿ ದಯಾನಂದ ಹೇಳಿದರು.

### ಮೋದಿ ವಿರುದ್ಧ ಟೀಕೆ ಸಲ್ಲ: ಶಾಸಕ

• ಉದಯವಾಹಿನಿ, ಇಳಕಲ್

ಆಪರೇಷನ್ ಸಿಂಧೂರ ಮೂಲಕ ಪಾಕಿಸ್ತಾನ ಶರಣಾಗುವಂತೆ ಮಾಡಿದ್ದು ಪ್ರಧಾನಿ ಮೋದಿ. ಅವರು ಸರೆಂಡರ್ ಆಗಿದ್ದಾರೆ ಎಂಬ ಕಾಂಗ್ರೆಸ್ ಟೀಕೆಯಲ್ಲಿ ಅರ್ಥವಿಲ್ಲ ಎಂದು ಮಾಜಿ ಶಾಸಕ ದೊಡ್ಡನಗೌಡ ಪಾಟೀಲ ಹೇಳಿದರು. ಪ್ರಧಾನಿ ಮೋದಿ ನೇತೃತ್ವದ ಕೇಂದ್ರ ಸರ್ಕಾರ 11 ವರ್ಷ ಪೂರೈಸಿದ ಅಂಗವಾಗಿ ನಗರದ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ನಡೆದ ಕಾರ್ಯಕರ್ತರ, ಹಿತೈಷಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಭಾರತದ ಅಭಿವೃದ್ಧಿ, ರಕ್ಷಣೆ ಹಾಗೂ ಗೌರವ ವೃದ್ಧಿಯು ಪ್ರಧಾನಿ ಮೋದಿ ಅವರಿಂದ ಮಾತ್ರ ಸಾಧ್ಯ.

ಅವರ 11 ವರ್ಷದ ಆಳ್ವಿಕೆಯಲ್ಲಿ ಭಾರತವು ವಿಶ್ವದ ಪ್ರಮುಖ ಶಕ್ತಿಶಾಲಿ ರಾಷ್ಟ್ರಗಳಲ್ಲಿ ಒಂದಾಗಿದೆ ಎಂದರು. ಇಲ್ಲಿಯ ಶಾಸಕರು, ತೊಂಡಿಹಾಳ, ದಾಸಬಾಳ ಹತ್ತಿರ ಹೋದರೆ ಅಕ್ರಮ ಮರಳು ಸಾಗಣೆ ಕಾಣಬಹುದು. ಇಳಕಲ್ ಡಿಪೊ ಹಿಂಭಾಗದಲ್ಲಿ ಜೂಜು ಅಡ್ಡಯನ್ನೂ ನೋಡಬಹುದು. ಆದರೆ, ಯಾವ ಅಕ್ರಮಗಳೂ ನಡೆಯುತ್ತಿಲ್ಲ ಎಂಬುದಾಗಿ ಸುಳ್ಳು ಹೇಳುತ್ತಿದ್ದಾರೆ ಎಂದು ಟೀಕಿಸಿದರು. ಕಂದಗಲ್ ರಸ್ತೆಯ ನೇಕಾರ ಕಾಲೊನಿ, ಹೆದ್ದಾರಿ ಪಕ್ಕದ 500 ಮನೆಗಳನ್ನು ಯಾರು ಕಟ್ಟಿದ್ದು ಎಂದು ಕೇಳಿದರೆ, ಅಲ್ಲಿಯ ನಿವಾಸಿಗಳೇ ನಿಜ ಹೇಳುತ್ತಾರೆ. ಎಲ್ಲವನ್ನೂ ನಾನೇ ಮಾಡಿದ್ದು ಎಂಬುದಾಗಿ ಹೇಳಿಕೊಳ್ಳುವುದು ಶಾಸಕರಿಗೆ ಅಭ್ಯಾಸವಾಗಿದೆ ಎಂದರು.

### ತೇರದಾಳ ರಸ್ತೆ ಗುಂಡಿ ಮುಚ್ಚಿದ ಆಟೊ ಚಾಲಕರು

• ಉದಯವಾಹಿನಿ, ತೇರದಾಳ

ಇಲ್ಲಿನ ಬಸ್ ನಿಲ್ದಾಣದ ಮುಂಭಾಗದ ಜಮಖಂಡಿ- ಕುಡಚಿ ರಾಜ್ಯ ಹೆದ್ದಾರಿಯಲ್ಲಿ ಮಳೆಯಿಂದ ರಸ್ತೆ ಟಾರು ಕಿತ್ತು ಹೋಗಿ ಗುಂಡಿಯಾಗಿ ಸಂಚಾರಿಗಳಿಗೆ ತೊಂದರೆಯಾಗುತ್ತಿದ್ದ ಗುಂಡಿಗಳನ್ನು ಆಟೊ ಚಾಲಕರಿಬ್ಬರು ಮುಚ್ಚುವ ಮೂಲಕ ತಮ್ಮ ಸಾಮಾಜಿಕ ಕಳಕಳಿ ಮೆರೆದರು. ಬಸ್ ನಿಲ್ದಾಣದಿಂದ ಹೊರಬರುತ್ತಿದ್ದಂತೆ ಎರಡು ಆಳವಾದ ಗುಂಡಿಗಳು ರಸ್ತೆಯಲ್ಲಿ ಉಂಟಾಗಿದ್ದವು. ಅವು ವಾಹನ ಸವಾರರಿಗೆ ತೊಂದರೆಯನ್ನುಂಟು ಮಾಡುತ್ತಿರುವುದನ್ನು ಆಟೋ ಚಾಲಕರಾದ ದಾವುದ ನಾಯಕವಾಡಿ, ರಿಯಾಜ ಸಂಗತ್ರಾಸ ಗಮನಿಸಿದರು. ಭಾನುವಾರ ಬೆಳಗಿನ ಜಾವ ರಸ್ತೆ ಬದಿ ಬಿದ್ದಿದ್ದ ಸಣ್ಣ ಸಣ್ಣ ಕಲ್ಲುಗಳನ್ನು ಹಾಕಿ ಗುಂಡಿ ಮುಚ್ಚಿ ವಾಹನ ಸವಾರರಿಗೆ ಅನುಕೂಲ ಮಾಡಿದರು. ಇವರ ಈ ಕಾರ್ಯಕ್ಕೆ ಸಾರ್ವಜನಿಕರಿಂದ ಪ್ರಶಂಸೆಗಳು ವ್ಯಕ್ತವಾದವು.

ಉದಯ ವಾಹಿನಿ

ಪ್ರಾದೇಶಿಕ

ಬುಧವಾರ 18 ಜೂನ್ 2025



## ಇಸ್ರೇಲ್ ದಾಳಿ: ನೇರ ಪ್ರಸಾರ ಬಿಟ್ಟು ಓಡಿದ ನಿರೂಪಕಿ

**ಟೆಹ್ರಾನ್:** ಇಸ್ರೇಲ್ ಮತ್ತೆ ಇರಾನ್ ರಾಜಧಾನಿ ಟೆಹ್ರಾನ್ ಮೇಲೆ ಕ್ಷಿಪಣಿ ದಾಳಿ ಮಾಡಿದೆ. ಈ ಬಾರಿ ಇಸ್ರೇಲ್ ಸೇನೆಯು ಇರಾನ್ ಸರ್ಕಾರಿ ಟಿವಿ ಚಾನೆಲ್‌ನ ಕಟ್ಟಡವನ್ನು ಗುರಿಯಾಗಿಸಿಕೊಂಡಿದೆ. ಇರಾನ್‌ನ ಟೆಹ್ರಾನ್‌ನಲ್ಲಿರುವ ಸರ್ಕಾರಿ ದೂರದರ್ಶನ ಕೇಂದ್ರವನ್ನು ಇಸ್ರೇಲ್ ನೇರ ಪ್ರಸಾರದ ಸಮಯದಲ್ಲಿ ಸ್ಫೋಟಿಸಿದೆ.



ಇದರಿಂದಾಗಿ, ಚಾನೆಲ್ ತನ್ನ ನೇರ ಪ್ರಸಾರವನ್ನು ನಿಲ್ಲಿಸಬೇಕಾಯಿತು. ಈ ಘಟನೆಯ ವಿಡಿಯೋವನ್ನು ಸಾಮಾಜಿಕ ಮಾಧ್ಯಮದಲ್ಲಿಯೂ ಹಂಚಿಕೊಳ್ಳಲಾಗುತ್ತಿದೆ. ಈ ವಿಡಿಯೋದಲ್ಲಿ, ನೇರ ಪ್ರಸಾರದ ಸಮಯದಲ್ಲಿ ಸ್ಫೋಟದ ಶಬ್ದ ಕೇಳಿಸುತ್ತದೆ. ಇದರಿಂದಾಗಿ, ಚಾನೆಲ್‌ನ ಸ್ಟುಡಿಯೋ ಧೂಳು ಮತ್ತು ಹೊಗೆಯಿಂದ ತುಂಬಿ , ಚಾನೆಲ್‌ನ ಸ್ಟುಡಿಯೋ ಅಲುಗಾಡಿದೆ.ತಕ್ಷಣವೇ ಟಿವಿ ನಿರೂಪಕಿ ಮತ್ತು ಉಳಿದ ಸಿಬ್ಬಂದಿ ಕ್ಯಾಮೆರಾವನ್ನು ಬಿಟ್ಟು ಹೊರಗೆ ಹೋಗಿ ಜೀವ ಉಳಿಸಿಕೊಂಡಿದ್ದಾರೆ. ನಿರೂಪಕಿ ಸಹರ್ ಎಮಾಮಿ ಸ್ಟುಡಿಯೋದಲ್ಲಿ ಸುದ್ದಿ ಬುಲೆಟಿನ್ ಓದುತ್ತಿದ್ದರು.

ಈ ಸಮಯದಲ್ಲಿ, ಅಲ್ಲಿದ್ದ ಜನರು ಅಲ್ಲಾಹು ಅಕ್ಬರ್ ಘೋಷಣೆಗಳನ್ನು ಕೂಗುವುದನ್ನು ಕೇಳಬಹುದು. ಇಸ್ರೇಲ್ ದಾಳಿ ಮಾಡುವ ಮೊದಲು ಇರಾನ್ ರಾಜಧಾನಿ ಟೆಹ್ರಾನ್‌ನ ಆ ಪ್ರದೇಶವನ್ನು ಖಾಲಿ ಮಾಡುವಂತೆ ಎಚ್ಚರಿಕೆ ನೀಡಿದೆ. ಈ ಟಿವಿ ಸ್ಟುಡಿಯೋ ಕೂಡ ಅದೇ ಪ್ರದೇಶದಲ್ಲಿದೆ. ಸೋಮವಾರ, ಇರಾನ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳಿಂದ ಇಸ್ರೇಲ್ ಮೇಲೆ ದಾಳಿ ಮಾಡಿತ್ತು, ಇದರಿಂದಾಗಿ ಬಹಳಷ್ಟು ಹಾನಿ ಸಂಭವಿಸಿದೆ. ಇರಾನಿನ ದಾಳಿಯಿಂದಾಗಿ, ಇಸ್ರೇಲ್‌ನಾದ್ಯಂತ ವಾಯುದಾಳಿಯ ಸೈರನ್‌ಗಳು ಕೇಳಿಬಂದವು. ಇರಾನಿನ ದಾಳಿಯಲ್ಲಿ ಕನಿಷ್ಠ ಎಂಟು ಇಸ್ರೇಲಿ ನಾಗರಿಕರು ಸಾವನ್ನಪ್ಪಿದ್ದಾರೆ ಮತ್ತು 12 ಜನರು ಗಾಯಗೊಂಡಿದ್ದಾರೆ ಎಂದು ತುರ್ತು ಸೇವೆಗಳು ವರದಿ ಮಾಡಿವೆ.

## ಇರಾನ್‌ನ ಮತ್ತೋರ್ವ ಟಾಪ್ ಕಮಾಂಡರ್ ಹೊಡೆದ ಇಸ್ರೇಲ್

### ಇಸ್ರೇಲ್ ವಾಯು ದಾಳಿಯಲ್ಲಿ ಮತ್ತೋರ್ವ ಇರಾನ್ ಟಾಪ್ ಕಮಾಂಡರ್ ಹತ್ಯೆ



ಆಯತೊಲ್ಲಾ ನಿಕಟವರ್ತಿ ಅಲಿ ಶಾದ್ಮಾನಿ ಹತ

**ತೆಹ್ರಾನ್:** ಇಸ್ರೇಲ್-ಇರಾನ್ ನಡುವಿನ ಸಂಘರ್ಷ ತಾರಕಕ್ಕೇರಿದ್ದು, ಕಳೆದ ನಾಲ್ಕು ದಿನಗಳಿಂದ ಉಭಯ ದೇಶಗಳು ಪರಸ್ಪರರ ಮೇಲೆ ಭಾರೀ ವೈಮಾನಿಕ ದಾಳಿ ನಡೆಸುತ್ತಿವೆ. ಇಸ್ರೇಲ್-ಇರಾನ್ ನಡುವೆ ಕದನ ವಿರಾಮ ಒಪ್ಪಂದ ಜಾರಿಗೊಳಿಸುವ ಪ್ರಯತ್ನ ಆರಂಭವಾಗಿರುವ ಮಧ್ಯೆಯೇ, ಇರಾನ್‌ನ ಮತ್ತೋರ್ವ ಉನ್ನತ ಮಿಲಿಟರಿ ಅಧಿಕಾರಿಯನ್ನು ಇಸ್ರೇಲ್ ಹೊಡೆದುರುಳಿಸಿದೆ. ಇರಾನ್‌ನ ಉನ್ನತ ಮಿಲಿಟರಿ ಕಮಾಂಡರ್ ಮತ್ತು ಇರಾನ್ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಅವರ ನಿಕಟವರ್ತಿ ಅಲಿ ಶಾದ್ಮಾನಿ, ವೈಮಾನಿಕ ದಾಳಿಯಲ್ಲಿ ಮೃತಪಟ್ಟಿರುವುದಾಗಿ ಇಸ್ರೇಲ್ ಸೇನೆ ಘೋಷಿಸಿದೆ. ಈ ಕುರಿತು ಅಧಿಕೃತ ಹೇಳಿಕೆ ಬಿಡುಗಡೆ ಮಾಡಿರುವ ಇಸ್ರೇಲ್ ಸೇನೆ, ರಾತ್ರಿ ವೇಳೆ ದೊರೆತ ಅವಕಾಶವನ್ನು ಬಳಸಿಕೊಂಡು ಇಸ್ರೇಲ್ ವಾಯುಪಡೆ ತೆಹ್ರಾನ್ ಹೃದಯಭಾಗದಲ್ಲಿರುವ ಸಿಬ್ಬಂದಿ ಕಮಾಂಡ್ ಸೆಂಟರ್ ಮೇಲೆ ದಾಳಿ ಮಾಡಿದೆ. ಈ ವೇಳೆ ಇರಾನ್‌ನ ಯುದ್ಧಕಾಲದ ಮುಖ್ಯಸ್ಥ ಮತ್ತು ಅತ್ಯಂತ ಹಿರಿಯ ಮಿಲಿಟರಿ ಕಮಾಂಡರ್ ಅಲಿ ಶಾದ್ಮಾನಿ ದಾಳಿಯಲ್ಲಿ ಮೃತಪಟ್ಟಿದ್ದಾರೆ ಎಂದು ಸ್ಪಷ್ಟಪಡಿಸಿದೆ. ಅಲಿ ಶಾದ್ಮಾನಿ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್, ಇರಾನ್‌ನ ಸಶಸ್ತ್ರ ಪಡೆಗಳೆರಡನ್ನೂ ಕಮಾಂಡ್ ಮಾಡಿದ್ದರು. ಇದೀಗ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಅಲಿ ಶಾದ್ಮಾನಿ ಮೃತಪಟ್ಟಿರುವುದು ಖಚಿತವಾಗಿದೆ. ಕೆಲ ದಿನಗಳ ಹಿಂದಷ್ಟೇ, ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ, ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಮುಖ್ಯಸ್ಥ ಮೇಜರ್ ಜನರಲ್ ಹುಸೇನ್ ಸಲಾಮಿ ಸಾವನ್ನಪ್ಪಿದ್ದರು. ಆಪರೇಷನ್ ರೈಸಿಂಗ್ ಲಯನ್ ಕಾರ್ಯಾಚರಣೆಯಲ್ಲಿ ಇಸ್ರೇಲ್ ಇದುವರೆಗೂ ಇರಾನ್‌ನ ಇಬ್ಬರು ಉನ್ನತ ಮಿಲಿಟರಿ ಅಧಿಕಾರಿಗಳನ್ನು ಹತ್ಯೆ ಮಾಡಿದಂತಾಗಿದೆ. ಅಲಿ ಶಾದ್ಮಾನಿ ಅವರ ಹತ್ಯೆಯನ್ನು ಖುದ್ದು ಇಸ್ರೇಲ್ ದೃಢಪಡಿಸಿದ್ದು, ಸಿಬ್ಬಂದಿ ಕಮಾಂಡ್ ಸೆಂಟರ್ ಮೇಲಿನ ದಾಳಿಯಲ್ಲಿ ಶಾದ್ಮಾನಿ ಮೃತಪಟ್ಟಿರುವುದಾಗಿ ದೃಢಪಡಿಸಿದೆ. ಇರಾನ್ ಈ ಕುರಿತು ಅಧಿಕೃತ ಮಾಹಿತಿ ನೀಡಬೇಕಿದೆ. ಇಸ್ರೇಲ್ ಇರಾನ್‌ನ ಸರ್ವೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಹತ್ಯೆ ಯತ್ನ ಯೋಜನೆರೂಪಿಸುತ್ತಿದೆ.


**ಕದನ ವಿರಾಮ ಪ್ರಯತ್ನ**

**ಈ ಮಧ್ಯೆ ಇಸ್ರೇಲ್ ಮತ್ತು ಇರಾನ್ ನಡುವೆ ಕದನ ವಿರಾಮ ಜಾರಿಗೊಳಿಸಲು ಗಲ್ಫ್ ರಾಷ್ಟ್ರಗಳು ಮತ್ತು ಅಮೆರಿಕ ಪ್ರಯತ್ನ ಆರಂಭಿಸಿವೆ. ಖುದ್ದು ಇರಾನ್ ಇಸ್ರೇಲ್‌ನ್ನು ಕದನ ವಿರಾಮ ಒಪ್ಪಂದಕ್ಕೆ ಒಪ್ಪಿಸುವಂತೆ ಅಮೆರಿಕದ ಮೇಲೆ ಒತ್ತಡ ಹೇರುವಂತೆ ಗಲ್ಫ್ ರಾಷ್ಟ್ರಗಳಿಗೆ ಮನವಿ ಮಾಡಿದೆ. ಇದಕ್ಕೆ ಪೂರಕವಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಧ್ಯಪ್ರಾಚ್ಯ ಉದ್ವಿಗ್ನತೆ ಕಡಿಮೆ ಮಾಡುವ ಉದ್ದೇಶದಿಂದ, ಕೆನಡಾದಲ್ಲಿ ನಡೆಯುತ್ತಿರುವ ಜಿ-7 ಶೃಂಗಸಭೆಯಿಂದ ಒಂದು ದಿನ ಮುಂಚಿತವಾಗಿ ಹೊರಡಲಿದ್ದಾರೆ.**

ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ಯೋಜನೆಯನ್ನು ವಿರೋಧಿಸುತ್ತಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿವೆ. ಕಳೆದ ನಾಲ್ಕು ದಿನಗಳಿಂದ ನಡೆಯುತ್ತಿರುವ ಸಂಘರ್ಷದಲ್ಲಿ ಇರಾನ್‌ಗೆ ಭಾರೀ ಪ್ರಮಾಣದ ನಷ್ಟ ಉಂಟಾಗಿರುವುದು ಇದೀಗ ಸ್ಪಷ್ಟವಾಗಿದೆ. ಇಬ್ಬರು ಟಾಪ್ ಮಿಲಿಟರಿ ಕಮಾಂಡರ್‌ಗಳನ್ನು ಕಳೆದುಕೊಂಡಿರುವ ಇರಾನ್, ಸಾಕಷ್ಟು ಸಂಖ್ಯೆಯಲ್ಲಿ ಸಾಮಾನ್ಯ ನಾಗರಿಕರ ಸಾವು-ನೋವುಗಳಿಗೂ ಸಾಕ್ಷಿಯಾಗಿದೆ. ಇದಕ್ಕೆ ವ್ಯತಿರಿಕ್ತವಾಗಿ ಇಸ್ರೇಲ್ ಕಡಿಮೆ ನಷ್ಟವನ್ನು ಎದುರಿಸಿದೆ.

## ಕೆನಡಾ ಜಿ-7 ಶೃಂಗಸಭೆಗೆ ಹಾಫ್ ಅಟೆಂಡೆನ್ಸ್ ಹಾಕಲಿರುವ ಟ್ರಂಪ್

**ವಾಷಿಂಗ್ಟನ್:** ಮಧ್ಯಪ್ರಾಚ್ಯದಲ್ಲಿನ ವಿಷಮ ಪರಿಸ್ಥಿತಿಯಿಂದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆನಡಾದಲ್ಲಿ ನಡೆಯುತ್ತಿರುವ ಗ್ರೂಪ್ ಆಫ್ ಸೆವೆನ್ ಶೃಂಗಸಭೆಯಿಂದ, ಒಂದು ದಿನ ಮುಂಚಿತವಾಗಿ ಹೊರಡಲಿದ್ದಾರೆ ಎಂದು ಶ್ವೇತಭವನ ಮಾಹಿತಿ ನೀಡಿದೆ. ಇಸ್ರೇಲ್-ಇರಾನ್ ನಡುವಿನ ಸಂಘರ್ಷ ನಾಲ್ಕನೇ ದಿನಕ್ಕೆ ಕಾಲಿಟ್ಟಿದ್ದು, ಉಭಯ ರಾಷ್ಟ್ರಗಳು ಬಹುತೇಕ ಪೂರ್ಣ ಪ್ರಮಾಣದ ಯುದ್ಧಕ್ಕೆ ಸಿದ್ಧತೆ ನಡೆಸುತ್ತಿವೆ. ಇಂತಹ ವಿಷಮ ಪರಿಸ್ಥಿತಿಯಲ್ಲಿ ಅಧ್ಯಕ್ಷರು ಪರಿಸ್ಥಿತಿಯ ನಿರಂತರ ಮೇಲ್ವಿಚಾರಣೆ ನಡೆಸುವುದು ಅತ್ಯಂತ ಅವಶ್ಯವಾಗಿದೆ. ಈ ಹಿನ್ನೆಲೆಯಲ್ಲಿ ಡೊನಾಲ್ಡ್ ಟ್ರಂಪ್, ಕೆನಡಾ ಜಿ-7 ಶೃಂಗಸಭೆಯಿಂದ ಒಂದು ದಿನ ಮುಂಚಿತವಾಗಿ ಹೊರಡಲಿದ್ದಾರೆ ಎಂದು ಶ್ವೇತಭವನ ಸ್ಪಷ್ಟಪಡಿಸಿದೆ. ಡೊನಾಲ್ಡ್ ಟ್ರಂಪ್ ಅವರು ಮಂಗಳವಾರ ರಾತ್ರಿ ನಡೆಯಲಿರುವ ಜಿ-7 ಸದಸ್ಯ ರಾಷ್ಟ್ರಗಳ ಮುಖ್ಯಸ್ಥರ ಭೋಜ ಕೂಟದಲ್ಲಿ ಭಾಗಿಯಾದ ಬಳಿಕ, ಮರಳಿ ಅಮೆರಿಕಕ್ಕೆ ಪ್ರಯಾಣ ಬೆಳೆಸಲಿದ್ದಾರೆ. ಮಧ್ಯಪ್ರಾಚ್ಯದಲ್ಲಿ ಕದನ ವಿರಾಮವನ್ನು ಸಾಧಿಸುವ ಉದ್ದೇಶದಿಂದ, ಟ್ರಂಪ್ ಜಿ-7 ಶೃಂಗಸಭೆಯಿಂದ ಬೇಗ ಹೊರಡುವುದು ಅನಿವಾರ್ಯವಾಗಿದೆ ಎಂದು ಶ್ವೇತಭವನದ ಪತ್ರಿಕಾ ಕಾರ್ಯದರ್ಶಿ ಕ್ಯಾರೋಲಿನ್ ಲೀವಿಟ್ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿದ್ದಾರೆ.



ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದ ಕುರಿತು ಜಿ-7 ಒಗ್ಗಟ್ಟನ್ನು ಕಂಡುಕೊಳ್ಳಲು ಹೆಣಗಾಡುತ್ತಿದೆ. ಅಮೆರಿಕವು ಇಸ್ರೇಲ್‌ಗೆ ಬಹಿರಂಗವಾಗಿ ಬೆಂಬಲ ಘೋಷಿಸಿದೆಯಾದರೂ, ಇರಾನ್ ವಿರುದ್ಧ ಪೂರ್ಣ ಪ್ರಮಾಣದ ಯುದ್ಧದ ಪರವಾಗಿಲ್ಲ. ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಒಪ್ಪಂದ ಜಾರಿಗೊಳಿಸುವಲ್ಲಿ ಅಮೆರಿಕ ಮಹತ್ವದ ಪಾತ್ರ ನಿರ್ವಹಿಸಬೇಕಿದೆ. ಇದಿಷ್ಟೇ ಅಲ್ಲದೇ ರಷ್ಯಾ-ಉಕ್ರೇನ್ ನಡುವಿನ ಸುದೀರ್ಘ ಯುದ್ಧದ ಕುರಿತೂ ಜಿ-7 ಸದಸ್ಯ ಗುಂಪಿನ ರಾಷ್ಟ್ರಗಳ ನಡುವೆ ಒಮ್ಮತವಿಲ್ಲ. ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಒಪ್ಪಂದ ಜಾರಿಗೊಳಿಸುವಲ್ಲಿ ನಿರಂತರ ಪ್ರಯತ್ನ ನಡೆಸಿದ್ದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ನಿಟ್ಟಿನಲ್ಲಿ ಸಕಾರಾತ್ಮಕ ಪ್ರತಿಕ್ರಿಯೆ ಬಾರದ ಹಿನ್ನೆಲೆಯಲ್ಲಿ ಒಂದು ಹೆಜ್ಜೆ ಹಿಂದೆ ಇಟ್ಟಿದ್ದಾರೆ. ಬಹಿರಂಗವಾಗಿ ರಷ್ಯಾ, ಅದರ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಪರ ಮಾತನಾಡಿರುವ ಡೊನಾಲ್ಡ್ ಟ್ರಂಪ್, ಪಾಶ್ಚಿಮಾತ್ರ ಜಗತ್ತನ್ನು ಅಚ್ಚರಿಗೆ ದೂಡಿದ್ದಾರೆ. ಆದಾಗ್ಯೂ, ಉಕ್ರೇನ್ ಮೇಲಿನ ರಷ್ಯಾ ದಾಳಿಗಳನ್ನು ವಿರೋಧಿಸಿರುವ ಟ್ರಂಪ್, ಎರಡೂ ದೇಶಗಳು ಸಕಾರಾತ್ಮಕವಾಗಿ ಸ್ಪಂದಿಸಿದರೆ ಮಾತ್ರ ಕದನ ವಿರಾಮ ಒಪ್ಪಂದ ಮಾತುಕತೆಯಲ್ಲಿ ತೊಡಗಿಕೊಳ್ಳುವುದಾಗಿ ಸ್ಪಷ್ಟಪಡಿಸಿದ್ದಾರೆ.

**ಈ ಹಿನ್ನೆಲೆಯಲ್ಲಿ ಜಿ-7 ಶೃಂಗಸಭೆಯಿಂದ ಡೊನಾಲ್ಡ್ ಟ್ರಂಪ್ ಅವರು ಬೇಗ ನಿರ್ಗಮಿಸುತ್ತಿರುವುದು ಹಲವು ರೀತಿಯ ಚರ್ಚೆಗಳಿಗೆ ಅವಕಾಶ ಮಾಡಿ ಕೊಟ್ಟಿದೆ. ಆದರೆ ಶ್ವೇತಭವನ ಮಾತ್ರ ಇಸ್ರೇಲ್-ಇರಾನ್ ಸಂಘರ್ಷವನ್ನು ಕೊನೆಗಾಣಿಸುವ ಹೊಣೆಗಾರಿಗೆ ನಿಭಾಯಿಸಲು, ಟ್ರಂಪ್ ಮುಂಚಿತವಾಗಿ ಹೊರಡಲಿದ್ದಾರೆ ಎಂದು ತಿಳಿಸಿದೆ.**

## ಭಜ್ಜಿ, ರೈನಾ, ಊರ್ವಶಿಗೆ ಇಡಿ ಗ್ರಿಲ್

**ನವದೆಹಲಿ:** ಜಾರಿ ನಿರ್ದೇಶನಾಲಯವು ಅಕ್ರಮ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ತನಿಖೆಯನ್ನು ವಿಸ್ತರಿಸಿದ್ದು, ಖ್ಯಾತ ಕ್ರಿಕೆಟಿಗರಾದ ಹರ್ಭಜನ್ ಸಿಂಗ್, ಸುರೇಶ್ ರೈನಾ, ನಟಿ ಊರ್ವಶಿ ರೌಟೇಲಾ ಅವರನ್ನು ವಿಚಾರಣೆಗೆ ಒಳಪಡಿಸಿದೆ ಎಂದು ತಿಳಿದುಬಂದಿದೆ. ಬೆಟ್ಟಿಂಗ್ ಆ್ಯಪ್‌ನಂತಹ ನಿಷೇಧಿತ ಪ್ಲಾಟ್‌ಫಾರ್ಮ್‌ಗಳ ಪ್ರಚಾರದ ಕುರಿತು ನಡೆಯುತ್ತಿರುವ ತನಿಖೆಯ ಭಾಗವಾಗಿ ಈ, ಇತರ ಸೆಲೆಬ್ರಿಟಿಗಳನ್ನು ಪ್ರಶ್ನಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಈ ಪ್ಲಾಟ್‌ಫಾರ್ಮ್‌ಗಳು, ವೆಬ್ ಲಿಂಕ್‌ಗಳು, ಕೋಡ್‌ಗಳನ್ನು ಒಳಗೊಂಡಿರುವ ಜಾಹೀರಾತು ಪ್ರಚಾರಗಳಲ್ಲಿ 1 ನಂತಹ ಬಾಡಿಗೆ ಹೆಸರುಗಳನ್ನು ಬಳಸುತ್ತಿವೆ ಎಂದು ಅವರು ಹೇಳಿದರು.


ಇದು ಬಳಕೆದಾರರನ್ನು ಮೂಲ ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗೆ ಮರುನಿರ್ದೇಶಿಸುತ್ತದೆ, ಇದು ಪ್ರಸ್ತುತ ಕಾನೂನುಗಳನ್ನು ಸ್ಪಷ್ಟವಾಗಿ ಉಲ್ಲಂಘಿಸುತ್ತದೆ. ಈ ಪ್ಲಾಟ್‌ಫಾರ್ಮ್‌ಗಳು ತಮ್ಮನ್ನು ಕೌಶಲ್ಯ ಆಧಾರಿತ ಆಟಗಳನ್ನು ಹೋಸ್ಟ್ ಮಾಡುತ್ತವೆ ಎಂದು ತೋರಿಸಿಕೊಂಡವು ಆದರೆ ಅಸ್ತಿತ್ವದಲ್ಲಿರುವ ಭಾರತೀಯ ಕಾನೂನುಗಳ ಅಡಿಯಲ್ಲಿ ಅವುಗಳನ್ನು ಜೂಜಾಟ ಕಾರ್ಯಾಚರಣೆಗಳು ಎಂದು ವರ್ಗೀಕರಿಸುವ ಕಠೋರ ಅಲ್ಗಾರಿದಮ್‌ಗಳನ್ನು



ಬಳಸಿದವು ಎಂದು ಹೇಳಿದೆ. ಸೆಲೆಬ್ರಿಟಿಗಳೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ಮೂಲಕ ಮತ್ತೊಬ್ಬ ಭಾರತೀಯ ಕ್ರಿಕೆಟಿಗ ಯುವರಾಜ್ ಸಿಂಗ್ ಅವರನ್ನು ಒಳಗೊಂಡಿರುವ ಪಟ್ಟಿ 1 ನಂತಹ ಪ್ಲಾಟ್‌ಫಾರ್ಮ್ ಬೃಹತ್ ಗೋಚರತೆಯನ್ನು ಪಡೆದುಕೊಂಡವು, ಜನರನ್ನು ಮೋಸ ಮಾಡುತ್ತಿವೆ. ಫೆಡರಲ್ ಏಜೆನ್ಸಿಯ ಪ್ರಾಥಮಿಕ ವಿಚಾರಣೆಯು ಮಾಹಿತಿ ತಂತ್ರಜ್ಞಾನ ಕಾಯ್ದೆ, ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ, ಕಠಿಣ ಹಣ ವರ್ಗಾವಣೆ ತಡೆ ಕಾಯ್ದೆ, ಸರ್ಕಾರಿ ಅಧಿಸೂಚನೆಗಳು ಸೇರಿದಂತೆ ಹಲವು ಕಾನೂನುಗಳನ್ನು ಉಲ್ಲಂಘಿಸಿರಬಹುದು ಎಂದು ಸೂಚಿಸುತ್ತದೆ. ಸಿಂಗ್, ರೈನಾ ಅವರ ಪ್ರತಿನಿಧಿಗಳು ಲಾಭದೊಂದಿಗೆ ಮಾತನಾಡಲು ನಿರಾಕರಿಸಿದರು, ಆದರೆ ಶ್ರೀಮತಿ ರೌಟೇಲಾ ಮತ್ತು ಜನಪ್ರಿಯ ಗಾಯಕ ಸೋನು ಸೂದ್ ಸೇರಿದಂತೆ ಇತರರ ಪ್ರತಿನಿಧಿಗಳು ಪ್ರಶ್ನೆಗಳಿಗೆ ಉತ್ತರಿಸಿಲ್ಲ.

## ರಾಜಾ ರಘುವಂಶಿ ಕೊಲೆ ಕೃತ್ಯದ ಮರುಸೃಷ್ಟಿ

**ಸೊಹ್ರಾ:** ಉದ್ಯಮಿ ರಾಜಾ ರಘುವಂಶಿ ಕೊಲೆ ಪ್ರಕರಣದಲ್ಲಿ ಆರೋಪಿಗಳಾಗಿರುವ ಪತ್ನಿ ಸೋನಮ್ ಸೇರಿದಂತೆ ಇತರರನ್ನು ಮೇಘಾಲಯ ಪೊಲೀಸರು ಮಂಗಳವಾರ ಅಪರಾಧ ಕೃತ್ಯದ ಮರುಸೃಷ್ಟಿಗಾಗಿ ಇಲ್ಲಿಗೆ ಕರೆತಂದಿದ್ದರು. ಪತ್ನಿ ಸೋನಮ್



ಜತೆ ಮಧುಚಂದ್ರಕ್ಕೆ ಬಂದಿದ್ದಾಗ ಮೇ 23ರಂದು ರಾಜಾ ರಘುವಂಶಿ ಅವರ ಭೀಕರ ಹತ್ಯೆ ನಡೆದಿತ್ತು. ಆನಂತರ ಪತ್ನಿ, ಆಕೆಯ ಪ್ರಿಯಕರನೆಂದು ಶಂಕಿಸಲಾದ ರಾಜ್ ಮತ್ತು ಮೂವರು ಹಲ್ಲೆಕೋರರನ್ನು ಪೊಲೀಸರು ಬಂಧಿಸಿದ್ದರು. ಪ್ರವಾಸಿಗರು ಸಾಮಾಜಿಕ ಮಾಧ್ಯಮದಲ್ಲಿ ಹರಿಬಿಟ್ಟ ದೃಶ್ಯದಲ್ಲಿ ಸೋನಮ್, ರಾಜ್ ಕಾಣಿಸಿಕೊಂಡಿದ್ದರು. ಜೂನ್ 2ರಂದು ರಘುವಂಶಿ ಅವರ ಕೊಳೆತ ಶವ ದೊರೆತಿದ್ದ ವೇಯಿ ಸಾವಡೋಂಗ್ ಜಲಪಾತ ಸಮೀಪದ ಕಂದಕದ ಮೇಲಿನ ಪಾರ್ಕಿಂಗ್ ಸ್ಥಳಕ್ಕೆ ಆರೋಪಿಗಳನ್ನು ಕರೆತಂದು, ಅವರು ನೀಡಿರುವ ಹೇಳಿಕೆ ಆಧಾರದ ಮೇಲೆ ಕೃತ್ಯದ ಕೊನೆಯ ಕ್ಷಣಗಳನ್ನು ಮರುಸೃಷ್ಟಿ ಮಾಡಲಾಗುತ್ತದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದರು.

## ಬಾಬಾ ಸಾಹೇಬರನ್ನು ಟೀಕಿಸಿದ ಲಾಲು ಧೋರಣೆಗೆ ಖಂಡನೆ

**ಬಿಕಾನೇರ್:** ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಅವರು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರನ್ನು ಅವಮಾನಿಸಿದ್ದಾರೆ ಎಂದು ಕೇಂದ್ರ ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಟೀಕಿಸಿದ್ದಾರೆ. ಈ ವಿಷಯದಲ್ಲಿ ಕ್ಷಮೆ ಕೇಳದಿರುವುದು ಅವರನ್ನು ದುರಹಂಕಾರಿ ಎಂದು ಕರೆದಿದ್ದಾರೆ.



ಲಾಲು ಯಾದವ್ ಅವರ ಪಕ್ಷದ ಸಿದ್ಧಾಂತಗಳಿಗೆ ವಿರುದ್ಧವಾದ ಕ್ರಮಗಳ ಬಗ್ಗೆ ಕೇಂದ್ರ ಸಚಿವರು ವಾಗ್ದಾಳಿ ನಡೆಸಿದರು, ಒಂದೆಡೆ, ಅವರು ಸಾಮಾಜಿಕ ನ್ಯಾಯಕ್ಕಾಗಿ ಪ್ರತಿಪಾದಿಸುತ್ತಾರೆ, ಆದರೆ ಮತ್ತೊಂದೆಡೆ, ಅವರು ಬಿ.ಆರ್. ಅಂಬೇಡ್ಕರ್ ಅವರನ್ನು ಅವಮಾನಿಸುತ್ತಿದ್ದಾರೆ ಎಂದು ಹೇಳಿದರು. ಬಾಬಾಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರ ಚಿತ್ರವನ್ನು ತಂದ ಕಾರ್ಯಕರ್ತ ಅದನ್ನು ಲಾಲು ಯಾದವ್‌ಗೆ ನೀಡಲು ಬಯಸಿದ್ದರು.


ಆದರೆ ಲಾಲು ಯಾದವ್ ಅವರ ದುರಹಂಕಾರವು ಅವರ ದೇಹ ಭಾಷೆ ಮತ್ತು ಅವರು ಕುಳಿತಿದ್ದ ರೀತಿಯಲ್ಲಿ ಪ್ರತಿಫಲಿಸುತ್ತದೆ. ಈ ವಿಷಯವು ತುಂಬಾ ದೊಡ್ಡದಾಗಿದೆ ಆದರೆ ಲಾಲು ಪ್ರಸಾದ್ ಯಾದವ್ ಕ್ಷಮೆಯಾಚಿಸಲಿಲ್ಲ. ಬಾಬಾಸಾಹೇಬ್ ಅವರ ಈ ಅವಮಾನವನ್ನು ದೇಶದ ಜನರು ಸಹಿಸುವುದಿಲ್ಲ. ಒಂದೆಡೆ, ನೀವು ದಲಿತರು ಮತ್ತು ಹಿಂದುಳಿದ ಸಮುದಾಯದ ನಾಯಕ ಎಂದು ಹೇಳುತ್ತೀರಿ, ನೀವು ಸಾಮಾಜಿಕ ನ್ಯಾಯವನ್ನು ಪ್ರತಿಪಾದಿಸುತ್ತೀರಿ ಎಂದು ಹೇಳುತ್ತೀರಿ? ಮತ್ತೊಂದೆಡೆ, ನೀವು ಬಾಬಾಸಾಹೇಬರನ್ನು ಅವಮಾನಿಸುತ್ತೀರಿ ಮತ್ತು ನೀವು ತುಂಬಾ ಸೊಕ್ಕಿನವರಾಗಿದ್ದು, ನೀವು ಕ್ಷಮೆಯಾಚಿಸುವುದಿಲ್ಲ ಎಂದು ಮೇಘವಾಲ್ ಐಎನ್ಐಗೆ ತಿಳಿಸಿದರು. ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಅವರು ದಲಿತ ಐಕಾನ್ ಅವರನ್ನು ಅವಮಾನಿಸಿದ್ದಾರೆ ಎಂದು ಆರೋಪಿಸಿ ಅವರಿಂದ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಗಿರಿರಾಜ್ ಸಿಂಗ್, ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಅವರು ದಲಿತರ ಬಗ್ಗೆ ತಮ್ಮ ನಿಜವಾದ ಮನಸ್ಥಿತಿಯನ್ನು ಬಹಿರಂಗಪಡಿಸಿದ್ದಾರೆ ಅವರು ಬಾಬಾಸಾಹೇಬ್ ಅಂಬೇಡ್ಕರ್ ಅವರನ್ನು ಅವಮಾನಿಸಿದ್ದಾರೆ. ಈ ಅಗೌರವ ಕೃತ್ಯಕ್ಕಾಗಿ ಅವರು ದೇಶದ ದಲಿತರಲ್ಲಿ ಕ್ಷಮೆಯಾಚಿಸಬೇಕು. ಕೇವಲ ಕ್ಷಮೆಯಾಚನೆಯಲ್ಲ, ಅವರು ಗಂಗಾ ನದಿಯ ದಡಕ್ಕೆ ಹೋಗಿ ತಮ್ಮ ಕಾರ್ಯಗಳಿಗಾಗಿ ಪಶ್ಚಾತ್ತಾಪ ಪಡಬೇಕು ಎಂದಿದ್ದಾರೆ.

**ವಿವಾದದ ಮಧ್ಯೆ ಹೇಳಿಕೆ**

**ಲಾಲು ಪ್ರಸಾದ್ ಯಾದವ್ ಅವರು ಬಿ.ಆರ್. ಅಂಬೇಡ್ಕರ್ ಅವರ ಹುಟ್ಟುಹಬ್ಬದ ಆಚರಣೆಯ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಚಿತ್ರವನ್ನು ತಮ್ಮ ಪಾದದ ಬಳಿ ಇಟ್ಟುಕೊಂಡಿದ್ದರು ಎಂಬ ಆರೋಪದ ಮೇಲೆ ನಡೆಯುತ್ತಿರುವ ರಾಜಕೀಯ ವಿವಾದದ ಮಧ್ಯೆ ಈ ಹೇಳಿಕೆಗಳು ಬಂದಿವೆ.**

## ಟಾಟಾ ಮುಖ್ಯಸ್ಥರನ್ನು ಭೇಟಿಯಾದ ಬೋಯಿಂಗ್ ಚೀಫ್

**ಮುಂಬೈ:** ಅಮೆರಿಕದ ವಿಮಾನ ದೈತ್ಯ ಬೋಯಿಂಗ್‌ನ ವಾಣಿಜ್ಯ ವಿಮಾನಗಳ ಮುಖ್ಯಸ್ಥೆ ಸ್ಟೆಫನಿ ಪೋಪ್ ಅವರು ಗುರುಗ್ರಾಮ್‌ನಲ್ಲಿರುವ ಏರ್ ಇಂಡಿಯಾ ಪ್ರಧಾನ ಕಚೇರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಟಾಟಾ ಸನ್ಸ್ ಅಧ್ಯಕ್ಷ ಎನ್ ಚಂದ್ರಶೇಖರನ್ ಅವರನ್ನು ಭೇಟಿಯಾದರು ಎಂದು ಮೂಲವೊಂದು ತಿಳಿಸಿದೆ.



ಸಭೆಯ ನಿರ್ದಿಷ್ಟ ವಿವರಗಳು ತಿಳಿದಿಲ್ಲವಾದರೂ, ಕಳೆದ ವಾರ ಅಹಮದಾಬಾದ್‌ನಲ್ಲಿ ಏರ್ ಇಂಡಿಯಾದ ಲಂಡನ್‌ಗೆ ಹೊರಟಿದ್ದ ವಿಮಾನ 171 ಬೋಯಿಂಗ್ 787-8 ಡ್ರೀಮ್‌ಲೈನರ್ ಅಪಘಾತದ ಸುತ್ತ ಚರ್ಚೆಗಳು ಕೇಂದ್ರೀಕೃತವಾಗಿದ್ದವು ಎಂದು ಮೂಲಗಳು ತಿಳಿಸಿವೆ. ಜೂನ್ 12 ರಂದು ನಡೆದ ಅಪಘಾತದಲ್ಲಿ 270 ಕ್ಕೂ ಹೆಚ್ಚು ಜನರು ಸಾವನ್ನಪ್ಪಿದರು. 242 ಪ್ರಯಾಣಿಕರು ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ವಿಮಾನವು ಟೇಕ್ ಆಫ್ ಆದ ಒಂದು ನಿಮಿಷಕ್ಕಿಂತ ಕಡಿಮೆ ಸಮಯದಲ್ಲಿ ವೈದ್ಯಕೀಯ ಕಾಲೇಜು ಸಂಕೀರ್ಣಕ್ಕೆ ಅಪ್ಪಳಿಸಿತು.ವಿಮಾನವು ಮಧ್ಯಾಹ್ನ 1:39 ಕ್ಕೆ ಹೊರಟಿತು ಸುಮಾರು 650 ಅಡಿ ಎತ್ತರವನ್ನು ತಲುಪಿದ ನಂತರ ಕೆಲವು ಸೆಕೆಂಡುಗಳ ನಂತರ ಮುಳುಗಲು ಪ್ರಾರಂಭಿಸಿತು.

ಮಧ್ಯಾಹ್ನ 1:39 ಕ್ಕೆ, ಪೈಲಟ್ ಅಹಮದಾಬಾದ್ ಎಟಿಸಿಗೆ ಮೇ ದಿನದ ಕರೆಯನ್ನು ಕಳುಹಿಸಿದರು. ಪೋಪ್, ಚಂದ್ರಶೇಖರನ್ ನಡುವಿನ ಸಭೆಯ ಬಗ್ಗೆ ಸಂಪರ್ಕಿಸಿದಾಗ, ಬೋಯಿಂಗ್ ಪ್ರತಿಕ್ರಿಯಿಸಲು ನಿರಾಕರಿಸಿದೆ. ನಾವು ಅದರ ಬಗ್ಗೆ ಪ್ರತಿಕ್ರಿಯಿಸಲು ಹೋಗುವುದಿಲ್ಲ.

ನಾವು ಹೇಳಿದಂತೆ, ಏರ್ ಇಂಡಿಯಾ ಫ್ಲೈಟ್ 171 ನಿಂದ ತೊಂದರೆಗೊಳಗಾದ ಎಲ್ಲರ ಪ್ರೀತಿಪಾತ್ರರೊಂದಿಗೆ ನಮ್ಮ ಆಲೋಚನೆಗಳು ಇವೆ. ತನಿಖೆ ಮತ್ತು ನಮ್ಮ ಗ್ರಾಹಕರನ್ನು ಬೆಂಬಲಿಸುವತ್ತ ನಾವು ಗಮನಹರಿಸಿದ್ದೇವೆ ಎಂದು ಬೋಯಿಂಗ್ ವಕ್ತಾರರು ತಿಳಿಸಿದ್ದಾರೆ. ಏರ್ ಇಂಡಿಯಾ ವಕ್ತಾರರ ಪ್ರತಿಕ್ರಿಯೆಗಾಗಿ ಅವರನ್ನು ಸಂಪರ್ಕಿಸಲು ಸಾಧ್ಯವಾಗಲಿಲ್ಲ. ಜೂನ್ 12 ರ ಅಪಘಾತದ ನಂತರ ಚಂದ್ರಶೇಖರನ್ ಏರ್ ಇಂಡಿಯಾ ಪ್ರಧಾನ ಕಚೇರಿ ಮತ್ತು ತರಬೇತಿ ಅಕಾಡೆಮಿಗೆ ಭೇಟಿ ನೀಡಿ ಸುಮಾರು 700 ಉದ್ಯೋಗಿಗಳು ಮತ್ತು ನಾಯಕತ್ವ ತಂಡವನ್ನು ಉದ್ದೇಶಿಸಿ ಮಾತನಾಡಿದರು. ಇದು ನಾನು ಎಂದಿಗೂ ನೋಡುವುದಿಲ್ಲ ಎಂದು ಭಾವಿಸದ ಅತ್ಯಂತ ಹೃದಯವಿದ್ರಾವಕವಾಗಿದೆ ಎಂದು ಚಂದ್ರಶೇಖರನ್ ಹೇಳಿರುವುದಾಗಿ ಮೂಲಗಳು ಉಲ್ಲೇಖಿಸಿವೆ.

## ತಕ್ಷಣ ಇರಾನ್ ತೊರೆಯಲು ಭಾರತೀಯರಿಗೆ ಸಲಹೆ

**ಟೆಹ್ರಾನ್:** ಇರಾನ್ ಮತ್ತು ಇಸ್ರೇಲ್ ನಡುವಿನ ಸಂಘರ್ಷ ತೀವ್ರಗೊಂಡಿರುವುದರಿಂದ ಟೆಹ್ರಾನ್‌ನಲ್ಲಿರುವ ಎಲ್ಲಾ ಭಾರತೀಯ ಪ್ರಜೆಗಳು ತಕ್ಷಣವೇ ಭಾರತದ ರಾಯಭಾರ ಕಚೇರಿಯನ್ನು ಸಂಪರ್ಕಿಸಿ ತಮ್ಮ ಸ್ಥಳ, ಸಂಪರ್ಕ ಸಂಖ್ಯೆಗಳನ್ನು ನೀಡುವಂತೆ ಕೋರಲಾಗಿದೆ. ತಮ್ಮ ಸ್ವಂತ ಸಂಪನ್ಮೂಲಗಳನ್ನು ಬಳಸಿಕೊಂಡು ಟೆಹ್ರಾನ್‌ನಿಂದ ಹೊರಹೋಗಬಹುದಾದ ಎಲ್ಲಾ ಭಾರತೀಯ ಪ್ರಜೆಗಳು ಮತ್ತು ಪಿಐಒಗಳು ನಗರದ ಹೊರಗಿನ ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಭಾರತೀಯ ಮಿಷನ್ ಸಲಹೆ ನೀಡಿದೆ. ಟೆಹ್ರಾನ್‌ನಲ್ಲಿರುವ ಮತ್ತು ರಾಯಭಾರ ಕಚೇರಿಯೊಂದಿಗೆ ಸಂಪರ್ಕದಲ್ಲಿರದ ಎಲ್ಲಾ ಭಾರತೀಯ ಪ್ರಜೆಗಳು ತಕ್ಷಣವೇ ಟೆಹ್ರಾನ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯನ್ನು ಸಂಪರ್ಕಿಸಿ ಮತ್ತು ಅವರ ಸ್ಥಳ ಮತ್ತು ಸಂಪರ್ಕ ಸಂಖ್ಯೆಗಳನ್ನು ಒದಗಿಸುವಂತೆ ಕೋರಲಾಗಿದೆ. ದಯವಿಟ್ಟು ಸಂಪರ್ಕಿಸಿ: +989010144557; +989128109115; +989128109109, ಎಂದು ಟೆಹ್ರಾನ್‌ನಲ್ಲಿರುವ ಭಾರತದ ರಾಯಭಾರ ಕಚೇರಿ ಎಕ್ಸ್‌ನ ಪೋಸ್ಟ್‌ನಲ್ಲಿ ತಿಳಿಸಿದೆ. ಐದನೇ ದಿನದಲ್ಲಿ



ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ತೀವ್ರಗೊಂಡಾಗ ಈ ಪೋಸ್ಟ್ ಬಂದಿದೆ.ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆನಡಾದಲ್ಲಿ ನಡೆದ ಜಿ7 ಶೃಂಗಸಭೆಯಿಂದ ವಾಷಿಂಗ್ಟನ್‌ಗೆ ಮರಳಲು ಒಂದು ದಿನ ಮುಂಚಿತವಾಗಿ ಹೊರಟರು.

ಟೆಹ್ರಾನ್‌ನ 10 ಮಿಲಿಯನ್ ನಿವಾಸಿಗಳಿಗೆ ಅಪಾಯವನ್ನುಂಟುಮಾಡುವ ಅಪಾಯವನ್ನು ಟ್ರಂಪ್ ಎತ್ತಿ ತೋರಿಸಿದ್ದು, ಟೆಹ್ರಾನ್‌ನಿಂದ ಸ್ಥಳಾಂತರಗೊಳ್ಳುವಂತೆ ಇರಾನಿನ ನಾಗರಿಕರಿಗೆ ಎಚ್ಚರಿಕೆ ನೀಡಿದೆ. ಇರಾನ್, ಇಸ್ರೇಲ್‌ನಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಸಚಿವಾಲಯದಲ್ಲಿ 24 ಗಂಟೆಗಳ ಕಾಲ ಕಾರ್ಯ ನಿರ್ವಹಿಸುವ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದೆ ಎಂದು ವಿದೇಶಾಂಗ ಸಚಿವಾಲಯ ನವದೆಹಲಿ ತಿಳಿಸಿದೆ.

ನಿಯಂತ್ರಣ ಕೊಠಡಿಯ ಸಂಪರ್ಕ ವಿವರಗಳು ಈ ಕೆಳಗಿನಂತಿವೆ: 1800118797 (ಟೋಲ್-ಫ್ರೀ), +91-11-23012113, +91-11-23014104, +91-11-23017905 +91-9968291988 (ವಾಟ್ಸಾಪ್) ಎಂದು ಅದು ಹೇಳಿಕೆಯಲ್ಲಿ ತಿಳಿಸಿದೆ. ಇದಲ್ಲದೆ, ಟೆಹ್ರಾನ್‌ನಲ್ಲಿರುವ ಭಾರತದ ರಾಯಭಾರ ಕಚೇರಿಯು ಸಂಪರ್ಕದೊಂದಿಗೆ 247 ತುರ್ತು ಸಹಾಯವಾಣಿಯನ್ನು ಸ್ಥಾಪಿಸಿದೆ.


ಕರೆ ಮಾಡಲು ಮಾತ್ರ: +98 9128109115, +98 9128109109; ಗ: +98 901044557, +98 9015993320, +91 8086871709, ಬಂದರ್ ಅಬ್ಬಾಸ್: +98 9177699036, ಜಹೇದನ್: +98 9396356649, ಎಂದು ಅದು ಹೇಳಿದೆ. ಪಿಟಿಐಇಸ್ರೇಲ್ ಶುಕ್ರವಾರ ಮುಂಜಾನೆ ಇರಾನ್ ಮೇಲೆ ದಾಳಿ ಮಾಡಿತು, ಅದರ ಪರಮಾಣು, ಕ್ಷಿಪಣಿ ಮತ್ತು ಮಿಲಿಟರಿ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡಿತು. ಇರಾನ್ ನಂತರ ಇಸ್ರೇಲ್ ಮೇಲೆ ಪ್ರತೀಕಾರದ ದಾಳಿಗಳನ್ನು ಪ್ರಾರಂಭಿಸಿತು.

## ಟರ್ಕಿ ಶತ್ರು ರಾಷ್ಟ್ರ ಸೈಪ್ರಸ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಖಡಕ್ ಸಂದೇಶ ರವಾನಿಸಿದ ಭಾರತ

## ಮೋದಿಯವರೊಂದಿಗೆ ನೂರು ಅಧಿಕಾರಿಗಳ ನಿಯೋಗ ಸೈಪ್ರಸ್ ದೇಶಕ್ಕೆ ಪ್ರಯಾಣ

**ನಿಕೋಸಿಯಾ:** ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ನಂತರ ಪ್ರಧಾನಮಂತ್ರಿ ನರೇಂದ್ರ ಮೋದಿ ಮೊದಲ ವಿದೇಶ ಪ್ರವಾಸದ ಭಾಗವಾಗಿ ಪುಟ್ಟ ರಾಷ್ಟ್ರ ಸೈಪ್ರಸ್‌ಗೆ ಭೇಟಿ ನೀಡಿದ್ದಾರೆ. ಪುಟ್ಟ ರಾಷ್ಟ್ರವಾದರೂ, ವಿಶ್ವಕ್ಕೆ ಬಲವಾದ ಸಂದೇಶವನ್ನು ಭಾರತ ರವಾನಿಸಿದೆ. ಸೈಪ್ರಸ್ ದೇಶದ ಪ್ರವಾಸದ ನಂತರ ಮೋದಿ, ಕೆನಡಾ, ಕ್ರೊಯೇಷಿಯಾ ದೇಶಕ್ಕೆ ಭೇಟಿ ನೀಡಲಿದ್ದಾರೆ. ಕೆನಡಾದಲ್ಲಿ ಜಿ7 ಶೃಂಗಸಭೆಯಲ್ಲಿ ಪ್ರಧಾನಿ ಪಾಲ್ಗೊಳ್ಳಲಿದ್ದಾರೆ. ತಮ್ಮ ಪ್ರವಾಸದಲ್ಲಿ, ಸೈಪ್ರಸ್ ದೇಶವನ್ನು ಆಯ್ಕೆ ಮಾಡಿಕೊಂಡಿದ್ದಕ್ಕೆ ಬಲವಾದ ರಾಜಕೀಯ ಮತ್ತು ರಾಜತಾಂತ್ರಿಕ ಕಾರಣವಿದೆ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಅಮಾಯಕ ಪ್ರವಾಸಿಗರ ಮೇಲೆ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ನಂತರ ಭಾರತ ನಡೆಸಿದ ಕಾರ್ಯಾಚರಣೆಯಲ್ಲಿ ಟರ್ಕಿ ದೇಶ, ಪಾಕಿಸ್ತಾನದ ಪರವಾಗಿ ನಿಂತಿತ್ತು. ಆ ದೇಶದ ಮತ್ತು ಚೀನಾದ ಡ್ರೋನ್ ಅನ್ನು ಪಾಕಿಸ್ತಾನ ಬಳಸಿಕೊಂಡಿತ್ತು. ಅದರಲ್ಲಿ ಬಹುತೇಕ ಡ್ರೋನ್ ಗಳು ಗುರಿಮುಟ್ಟುವಲ್ಲಿ ವಿಫಲವಾಗಿತ್ತು. ಆ ಮೂಲಕ, ಈ ಎರಡು ದೇಶಗಳ ಶಸ್ತ್ರಾಸ್ತ್ರಗಳು ನಗೆಪಾಟಲಿಗೆ ಗುರಿಯಾಗಿತ್ತು.

ಸೈಪ್ರಸ್ ಅಧ್ಯಕ್ಷ ನಿಕೋಸ್ ಕ್ರಿಸ್ಟೋಡುಲೈಡ್ಸ್ ಅವರ ಆಹ್ವಾನದ ಮೇರೆಗೆ ಮೋದಿ ಅಲ್ಲಿಗೆ ಭೇಟಿ ನೀಡಿದ್ದರು. ಮೋದಿಯವರೊಂದಿಗೆ 100 ಅಧಿಕಾರಿಗಳ ನಿಯೋಗವೂ ಅವರ ಜೊತೆಗೆ ಪ್ರಯಾಣ ಬೆಳೆಸಿದೆ. ಮೋದಿಗೆ ಆ ದೇಶದ ಅತ್ಯುನ್ನತ ದಿ ಗ್ರ್ಯಾಂಡ್ ಕ್ರಾಸ್ ಆಫ್ ದಿ ಆರ್ಡರ್ ಆಫ್ ಮಕರಿಯೋಸ್ III ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.



**ಇಂದಿರಾ, ವಾಜಪೇಯಿ ನಂತರ ಮೋದಿ ಭೇಟಿ:** 1982ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿ ಸೈಪ್ರಸ್ ಗೆ ಭೇಟಿ ನೀಡಿದ್ದರು, ಇದಾದ ನಂತರ 2002ರಲ್ಲಿ ಅಟಲ್ ಬಿಹಾರಿ ವಾಜಪೇಯಿ ಭೇಟಿ ನೀಡಿದ್ದರು. ಈಗ, ಮೋದಿ 23ವರ್ಷಗಳ ನಂತರ ಅಲ್ಲಿಗೆ ಭೇಟಿ ನೀಡುತ್ತಿದ್ದಾರೆ. ಭಾರತ ಮತ್ತು ಸೈಪ್ರಸ್ ದೇಶಕ್ಕೆ ಈ ಭೇಟಿ ಬಹಳ ಮುಖ್ಯ. ಟರ್ಕಿ ಮತ್ತು ಪಾಕಿಸ್ತಾನದ ನಡುವೆ ಸಂಬಂಧಗಳು ಬಲಗೊಳ್ಳುತ್ತಿರುವ ಸಮಯದಲ್ಲಿ ಭಾರತದ ಪ್ರಧಾನಿಯೊಬ್ಬರ ಭೇಟಿ ಮಹತ್ವವನ್ನು ಪಡೆದುಕೊಂಡಿದೆ.

**ಭಾರತದ ವಿದೇಶಾಂಗ ಇಲಾಖೆಯ ಹೇಳಿಕೆ:** ಭಾರತದ ವಿದೇಶಾಂಗ ಇಲಾಖೆ ನೀಡಿದ ಹೇಳಿಕೆ ಈ ರೀತಿಯಿತ್ತು. ಅನೇಕ ಅಂತರರಾಷ್ಟ್ರೀಯ ವೇದಿಕೆಗಳಲ್ಲಿ ಸೈಪ್ರಸ್, ಭಾರತವನ್ನು ಬೆಂಬಲಿಸಿಕೊಂಡು ಬಂದಿದೆ. ನಮ್ಮ ದೇಶದ ವಿಶ್ವಾಸಾರ್ಹ ಸ್ನೇಹಿತರಲ್ಲಿ ಟರ್ಕಿ ದೇಶ ಕೂಡಾ ಒಂದು. ವಿಶ್ವಸಂಸ್ಥೆಯಲ್ಲಿ ಭಾರತಕ್ಕೆ ಖಾಯಂ ಭದ್ರತಾ ಸ್ಥಾನ ಸಿಗಬೇಕೆಂದು ಬೆಂಬಲಿಸುತ್ತಿರುವ ದೇಶಗಳಲ್ಲಿ ಸೈಪ್ರಸ್ ಕೂಡಾ ಒಂದು ಎಂದು ಹೇಳಿಕೆಯಲ್ಲಿ ಉಲ್ಲೇಖಿಸಿದೆ.

**ಪಾಕಿಸ್ತಾನಕ್ಕೆ ಬೆಂಬಲ ನೀಡಿದ್ದ ಟರ್ಕಿ:** ಆಪರೇಷನ್ ಸಿಂಧೂರ್ ವೇಳೆ, ಟರ್ಕಿಯು ಪಾಕಿಸ್ತಾನಕ್ಕೆ ಬೆಂಬಲ ನೀಡಿತು ಎನ್ನುವ ಕಾರಣಕ್ಕಾಗಿ ಭಾರತದಲ್ಲಿ ವ್ಯಾಪಕವಾಗಿ ಆ ದೇಶದ ಆಕ್ರೋಶ ವ್ಯಕ್ತವಾಗಿತ್ತು. ಟರ್ಕಿಯ ಸೇಬು, ಅಮೃತಶಿಲೆಗಳ ವಿರುದ್ಧ ಭಾರತೀಯರು ಅಭಿಯಾನವನ್ನು ಆರಂಭಿಸಿದ್ದರು. ಇದರ ಜೊತೆಗೆ, ಅಲ್ಲಿಗೆ ಬುಕ್ ಮಾಡಿದ್ದ ವಿಮಾನ ಟಿಕೆಟ್ ಅನ್ನೂ ಕ್ಯಾನ್ಸಲ್ ಮಾಡಿದ್ದರು. ಭಾರತದ ಹೊಡೆತಕ್ಕೆ ಟರ್ಕಿಯ ಪ್ರವಾಸೋದ್ಯಮ ಮತ್ತು ಆರ್ಥಿಕ ಚಟುವಟಿಕೆಗೆ ಭಾರೀ ಹೊಡೆತವನ್ನು ನೀಡಿದ್ದನ್ನು ಸ್ಮರಿಸಿಕೊಳ್ಳಬಹುದಾಗಿದೆ.

**ಗಡಿಯಾಚೆಗಿನ ಭಯೋತ್ಪಾದನಾ ವಿರುದ್ಧದ ಹೋರಾಟದಲ್ಲಿ ನಮಗೆ ಬೆಂಬಲವಾಗಿ ನಿಂತ ಎಲ್ಲಾ ರಾಷ್ಟ್ರಗಳಿಗೂ ನಾನು ಧನ್ಯವಾದ ಹೇಳಲು ಬಯಸುತ್ತೇನೆ. ಮೂರು ರಾಷ್ಟ್ರಗಳ ಪ್ರವಾಸವು ಈ ವಿಚಾರಕ್ಕೆ ಸಂಬಂಧಿಸಿದಂತೆ ಮಹತ್ವವನ್ನು ಪಡೆದುಕೊಳ್ಳುತ್ತಿದೆ. ಸೈಪ್ರಸ್ ನೆಲದ ಮೇಲೆ ನಿಂತು ನಿಮಗೆ ಧನ್ಯವಾದ ಹೇಳಲು ಬಯಸುತ್ತೇನೆ**

-ನರೇಂದ್ರ ಮೋದಿ, ಪ್ರಧಾನಿ

**ಭಾರತ - ಮಧ್ಯಪ್ರಾಚ್ಯ - ಐರೋಪ್ಯ ಒಕ್ಕೂಟದ ಕಾರಿಡಾರ್**

**ಐಎಂಇಸಿನಲ್ಲಿ ಸೈಪ್ರಸ್ ಒಂದು ಪ್ರಮುಖ ಕೊಂಡಿ. ಇದು ಭಾರತ ಮತ್ತು ಐರೋಪ್ಯ ಒಕ್ಕೂಟಗಳ ನಡುವೆ ವ್ಯಾಪಾರವನ್ನು ವೃದ್ದಿಸುವ ಭಾಗವಾಗಿ ಪ್ರಮುಖವಾದ ಕಾರ್ಯತಂತ್ರ ಎಂದು ವ್ಯಾಖ್ಯಾನಿಸಲಾಗುತ್ತಿದೆ. ಸೈಪ್ರಸ್ ಭಾರತದ ಸ್ನೇಹದ ಭಾಗವಾಗಿ ಅಲ್ಲಿನ ಅತಿದೊಡ್ಡ ಬ್ಯಾಂಕ್‌ಗಳಲ್ಲಿ ಒಂದಾದ ಯೂರೋಬ್ಯಾಂಕ್, ಮುಂಬೈನಲ್ಲಿ ತನ್ನ ಶಾಖೆಯನ್ನು ತೆರೆಯಲು ನಿರ್ಧರಿಸಲಾಗಿದೆ.**

## ಮಿನಿ ನ್ಯೂಸ್

### ಸ್ನೇಹಿತನನ್ನು ಕಟ್ಟಿಹಾಕಿ ಯುವತಿ ಮೇಲೆ ಮುಗಿಬಿದ್ದ 10 ಕಾಮುಕರು

**ಭುವನೇಶ್ವರ್:** ಸ್ನೇಹಿತನನ್ನು ಕಟ್ಟಿಹಾಕಿ ಜೊತೆಯಲ್ಲಿದ್ದ ಯುವತಿ ಮೇಲೆ 10 ಕಾಮಪಿಶಾಚಿಗಳು ಅತ್ಯಾಚಾರ ನಡೆಸಿರುವ ಘಟನೆ ಒಡಿಶಾದ ಗಂಜಾಂ ಜಿಲ್ಲೆಯಲ್ಲಿ ನಡೆದಿದೆ. ಬೀಚ್‌ನಲ್ಲಿ 20 ವರ್ಷದ ಮಹಿಳೆಯ ಮೇಲೆ ಆಕೆಯ ಪುರುಷ ಸ್ನೇಹಿತನ ಮುಂದೆಯೇ ಸಾಮೂಹಿಕ ಅತ್ಯಾಚಾರ ನಡೆದಿದೆ ಎಂದು ಪೊಲೀಶರು ತಿಳಿಸಿದ್ದಾರೆ. ಯುವತಿ, ಅವಳ ಸ್ನೇಹಿತ ಗೋಪಾಲಪುರ ಸಮುದ್ರ ತೀರಕ್ಕೆ ಹೋಗಿದ್ದರು ಮತ್ತು ಏಕಾಂತ ಸ್ಥಳದಲ್ಲಿ ಕುಳಿತಿದ್ದಾಗ ಸುಮಾರು 10 ಪುರುಷರು ಮೂರು ಮೋಟಾರ್ ಸೈಕಲ್‌ಗಳಲ್ಲಿ ಬಂದರು. ಗುಂಪು ಇಬ್ಬರ ಛಾಯಾಚಿತ್ರಗಳನ್ನು ತೆಗೆದುಕೊಳ್ಳಲು ಪ್ರಾರಂಭಿಸಿತು ಮತ್ತು ಅವುಗಳನ್ನು ಆನ್‌ಲೈನ್‌ನಲ್ಲಿ ಸೋರಿಕೆ ಮಾಡುವುದಾಗಿ ಬೆದರಿಕೆ ಹಾಕಿತು. ನಂತರ ಅವರು ಆ ವ್ಯಕ್ತಿಯ ಮೇಲೆ ದಾಳಿ ಮಾಡಿ, ಅವನ ಕೈಗಳನ್ನು ಕಟ್ಟಿ, ಮಹಿಳೆಯನ್ನು ಹತ್ತಿರದ ನಿರ್ಜನ ಮನೆಗೆ ಎಳೆದೊಯ್ದು, ಅಲ್ಲಿ ಮೂವರು ಸರದಿಯಲ್ಲಿ ಆಕೆಯ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ. ಘಟನೆಯ ನಂತರ, ಬದುಕುಳಿದ ಮಹಿಳೆ ಮತ್ತು ಅವಳ ಸ್ನೇಹಿತ ಗೋಪಾಲಪುರ ಪೊಲೀಸ್ ಠಾಣೆಗೆ ತಲುಪಿ ಘಟನೆಯನ್ನು ವರದಿ ಮಾಡಿದ್ದಾರೆ.

ಪೊಲೀಸರು ತಕ್ಷಣ ತನಿಖೆ ಆರಂಭಿಸಿ ಅಪರಾಧ ಸ್ಥಳಕ್ಕೆ ಭೇಟಿ ನೀಡಿದರು. ಈವರೆಗೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎಂಟು ಜನರನ್ನು ಬಂಧಿಸಲಾಗಿದೆ. ಆರೋಪಿಗಳೆಲ್ಲರೂ ವಯಸ್ಕರು ಮತ್ತು ಅವರನ್ನು ವಿಚಾರಣೆ ನಡೆಸಲಾಗುತ್ತಿದೆ. ಇತರರ ಭಾಗಿಯಾಗಿರುವುದನ್ನು ನಾವು ತಳ್ಳಿಹಾಕುತ್ತಿಲ್ಲ ಎಂದು ಬೆರ್ಹಾಂಪುರ್ ಎಸ್ಪಿ ಸರವಣ ವಿವೇಕ್ ಎಂ ಸುದ್ದಿಗಾರರಿಗೆ ತಿಳಿಸಿದರು. ಬದುಕುಳಿದವರ ಮತ್ತು ಎಲ್ಲಾ ಶಂಕಿತರ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. ಬದುಕುಳಿದವರ ಸ್ಥಿತಿ ಸ್ಥಿರವಾಗಿದೆ ಎಂದು ಅವರು ಹೇಳಿದರು.ಭಾಗಿಯಾಗಿರುವ ಇತರರಿಗಾಗಿ ಹುಡುಕಾಟ ನಡೆಯುತ್ತಿದೆ, ಈ ವಿಷಯದ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ತುರ್ತು ಪರಿಸ್ಥಿತಿ: ಜೈಲು ಸೇರಿದ್ದವರ ಗೌರವಧನ ಹೆಚ್ಚಳಕ್ಕೆ ಸಮ್ಮತಿ

**ಮುಂಬೈ:** ತುರ್ತು ಪರಿಸ್ಥಿಯ ಸಂದರ್ಭದಲ್ಲಿ ಜೈಲು ಸೇರಿದ್ದ ವ್ಯಕ್ತಿಗಳಿಗೆ ನೀಡಲಾಗುವ ಗೌರವಧನವನ್ನು ದುಪ್ಪಟ್ಟುಗೊಳಿಸುವ ನಿರ್ಧಾರಕ್ಕೆ ಮಹಾರಾಷ್ಟ್ರ ಸಚಿವ ಸಂಪುಟ ಮಂಗಳವಾರ ಅನುಮತಿ ನೀಡಿದೆ. ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ, ಗೌರವ ಯೋಜನಾದಲ್ಲಿನ ಬದಲಾವಣೆಗಳಿಗೆ ಅನುಮತಿ ದೊರೆತಿದೆ. ಜೈಲು ಸೇರಿದ್ದ ವ್ಯಕ್ತಿಯ ಸಂಗಾತಿಯನ್ನೂ ಫಲಾನುಭವಿ ಎಂದು ಪರಿಗಣಿಸಲು ನಿರ್ಧರಿಸಲಾಗಿದೆ.

ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ (1975-1977) ಒಂದು ತಿಂಗಳು ಜೈಲಿನಲ್ಲಿದ್ದವರಿಗೆ ಗೌರವ್ ಯೋಜನಾದಡಿಯಲ್ಲಿ ಮಾಸಿಕ 5 ಸಾವಿರ ಗೌರವಧನ ನೀಡಲಾಗುತ್ತಿದೆ. ಅದಕ್ಕಿಂತ ಹೆಚ್ಚು ಅವಧಿ ಜೈಲಿನಲ್ಲಿದ್ದವರಿಗೆ ಮಾಸಿಕ 10 ಸಾವಿರ ನೀಡಲಾಗುತ್ತಿದೆ. ಇನ್ನು ಮುಂದೆ ಇದು ದ್ವಿಗುಣಗೊಳ್ಳಲಿದೆ.

### ಮಳೆ; ಧರೆಗುರುಳಿದ ಮರ, ಗೋಡೆ

**ಠಾಣೆ:** ಮಹಾರಾಷ್ಟ್ರದ ಠಾಣೆ ನಗರದಲ್ಲಿ ಬಿರುಗಾಳಿ ಸಹಿತ ಭಾರಿ ಮಳೆ ಸುರಿದಿದ್ದು, ಮರ ಉರುಳಿ ಬಿದ್ದಿರುವ ಮತ್ತು ಗೋಡೆ ಕುಸಿದಿರುವ ಬಗ್ಗೆ ಹಲವು ದೂರುಗಳು ಬಂದಿವೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ. ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ. ವಶಿಯಲ್ಲಿ ಸೋಮವಾರ ಸಂಜೆ ವಾಣಿಜ್ಯ ಕಟ್ಟಡವೊಂದರ ಗೋಡೆ ಕುಸಿದು ಏಳು ವಾಹನಗಳಿಗೆ ಹಾನಿಯಾಗಿದೆ ಎಂದು ಠಾಣೆ ನಗರ ಪಾಲಿಕೆಯ ವಿಪತ್ತು ನಿರ್ವಹಣಾ ವಿಭಾಗ ತಿಳಿಸಿದೆ. ಮಂಗಳವಾರ ಮುಂಜಾನೆ 8:30ರವರೆಗಿನ 24 ಗಂಟೆಗಳ ಅವಧಿಯಲ್ಲಿ ನಗರದಲ್ಲಿ 11.4 ಸೆಂ.ಮೀ ಮಳೆಯಾಗಿದೆ. ಈ ಮುಂಗಾರಿನಲ್ಲಿ ನಗರದಲ್ಲಿ ಈವರೆಗೆ 53.4 ಸೆಂ.ಮೀ ಮಳೆಯಾಗಿದೆ. ಕಳೆದ ವರ್ಷ ಈ ಅವಧಿಯಲ್ಲಿ 14.6 ಸೆಂ.ಮೀ ಮಳೆ ಸುರಿದಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ಭಾರತದ ವಿರುದ್ಧ ಅಪಹರಣ ಆರೋಪ ಮಾಡಿದ ಮೆಹುಲ್ ಚೋಕ್ಸಿ

**ಲಂಡನ್ :** ಪಂಜಾಬ್ ನ್ಯಾಷನಲ್ ಬ್ಯಾಂಕ್‌ಗೆ ವಂಚಿಸಿದ ಆರೋಪ ಎದುರಿಸುತ್ತಿರುವ ಉದ್ಯಮಿ ಮೆಹುಲ್ ಚೋಕ್ಸಿ ಅವರು ಭಾರತ ಸರ್ಕಾರ, ಐವರ ವಿರುದ್ಧ ಮೊಕದ್ದಮೆ ಹೂಡಿದ್ದಾರೆ. ಭಾರತ ಸರ್ಕಾರ, ಇತರ ಐವರ ವಿರುದ್ಧ, ಅಪಹರಣ, ಚಿತ್ರಹಿಂಸೆಯ ಆರೋಪ ಹೊರಿಸಿ, ತಮ್ಮನ್ನು ಭಾರತಕ್ಕೆ ಒಪ್ಪಿಸುವುದನ್ನು ಪ್ರಶ್ನಿಸಿ ಅವರು ಲಂಡನ್ ಹೈಕೋರ್ಟ್‌ನಲ್ಲಿ ದಾವೆ ಹೂಡಿದ್ದಾರೆ. ನ್ಯಾಯಮೂರ್ತಿ ಫ್ರೀಡ್‌ಮನ್ ನೇತೃತ್ವದಲ್ಲಿ ನಡೆದ ವಿಚಾರಣೆ ವೇಳೆ, ಭಾರತ ಸರ್ಕಾರ 2021ರ ಮೇನಲ್ಲಿ ನನ್ನನ್ನು ಅಪಹರಿಸಲು ಯತ್ನಿಸಿತ್ತು. ಈ ಯತ್ನದ ಭಾಗವಾಗಿ ಚಿತ್ರಹಿಂಸೆ ನೀಡಲಾಯಿತು ಎಂದು ನ್ಯಾಯಾಲಯಕ್ಕೆ ತಿಳಿಸಿದ್ದಾರೆ. ಭಾರತೀಯ ಅಧಿಕಾರಿಗಳು ಈ ಆರೋಪಗಳನ್ನು ನಿರಾಕರಿಸಿದ್ದಾರೆ.

### ಭಾರತ ಪಾಕ್‌ನಿಂದ ಪರಮಾಣು ಕಾರ್ಯಕ್ರಮಗಳ ನಿರಂತರ ಆಧುನೀಕರಣ

**ನವದೆಹಲಿ:** ಭಾರತ, ಪಾಕಿಸ್ತಾನ ಸೇರಿದಂತೆ ಪರಮಾಣು ಅಸ್ತ್ರಗಳನ್ನು ಹೊಂದಿರುವ 9 ರಾಷ್ಟ್ರಗಳು 2024ರಲ್ಲಿ ಅಲ್ಪ ಪ್ರಮಾಣದಲ್ಲಿ ಪರಮಾಣು ಕಾರ್ಯಕ್ರಮಗಳ ಆಧುನೀಕರಣದಲ್ಲಿ ತೊಡಗಿದ್ದವು. ಈಗಿರುವ ಅಣ್ವಸ್ತ್ರಗಳ ಪರಿಷ್ಕರಣೆ ಮತ್ತು ಹೊಸ ಆವೃತ್ತಿಗಳನ್ನು ಸೇರ್ಪಡೆ ಮಾಡಿಕೊಂಡಿವೆ ಎಂದು ಜಾಗತಿಕ ಚಿಂತಕರ ಚಾವಡಿಯು ಬಿಡುಗಡೆಗೊಳಿಸಿದ ವರದಿಯಲ್ಲಿ ತಿಳಿಸಿದೆ. ಭಾರತವು ಅಲ್ಪ ಪ್ರಮಾಣದಲ್ಲಿ ಅಣ್ವಸ್ತ್ರಗಳನ್ನು ವಿಸ್ತರಿಸಿದ್ದು, ಹೊಸ ಮಾದರಿಯ ವ್ಯವಸ್ಥೆಯನ್ನು ಅಳವಡಿಸಿಕೊಂಡಿದೆ' ಎಂದು ಸ್ಟಾಕ್‌ಹೋಮ್ ಅಂತರರಾಷ್ಟ್ರೀಯ ಶಾಂತಿ ಸಂಶೋಧನಾ ಸಂಸ್ಥೆ (ಸಿಪ್ರಿ)ಯ ಪ್ರಕಟಣೆಯಲ್ಲಿ ತಿಳಿಸಿದೆ.

'ಅಣ್ವಸ್ತ್ರಕ್ಕೆ ಬಳಸುವ ಮೂಲವಸ್ತುಗಳನ್ನು ಸಂಗ್ರಹಿಸುವ ಕಾರ್ಯದಲ್ಲಿ ಪಾಕಿಸ್ತಾನ ತೊಡಗಿದ್ದು, ಮುಂದಿನ ದಶಕದಲ್ಲಿ ದೊಡ್ಡ ಪ್ರಮಾಣದಲ್ಲಿ ಅಣ್ವಸ್ತ್ರ ವಿಸ್ತರಿಸುವ ಗುರಿ ಹೊಂದಿದೆ ಎಂದು ತಿಳಿಸಿದೆ. ಶಸ್ತ್ರಾಸ್ತ್ರಗಳ ಸಂಗ್ರಹ ಹಾಗೂ ನಿಶ್ಯಸ್ತ್ರೀಕರಣ ಹಾಗೂ ಅಂತರರಾಷ್ಟ್ರೀಯ ಭದ್ರತೆ ಕುರಿತಾದ 2025ರ ವರದಿಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದೆ. ಇತ್ತೀಚಿಗೆ ಭಾರತ ಹಾಗೂ ಪಾಕಿಸ್ತಾನದ ನಡುವೆ ಸೇನಾ ಸಂಘರ್ಷವನ್ನು ವರದಿಯಲ್ಲಿ ಉಲ್ಲೇಖಿಸಿದೆ. ಅಮೆರಿಕ, ರಷ್ಯಾ, ಬ್ರಿಟನ್, ಫ್ರಾನ್ಸ್, ಚೀನಾ, ಭಾರತ, ಪಾಕಿಸ್ತಾನ, ಉತ್ತರ ಕೊರಿಯಾ ಹಾಗೂ ಇಸ್ರೇಲ್ ದೇಶಗಳು 2024ರಲ್ಲಿ ಅಣ್ವಸ್ತ್ರಗಳ ಆಧುನೀಕರಣದಲ್ಲಿ ಸಕ್ರಿಯವಾಗಿ ತೊಡಗಿಕೊಂಡಿದ್ದವು' ಎಂದು ತಿಳಿಸಿದೆ. 2025ರ ಜನವರಿ ತಿಂಗಳಲ್ಲಿ ಜಾಗತಿಕವಾಗಿ 12,241 ಅಣ್ವಸ್ತ್ರ ಸಿಡಿತಲೆಗಳ ಪೈಕಿ, ಬಳಕೆಗಾಗಿಯೇ ಸೇನಾ ಸಂಗ್ರಹದಲ್ಲಿ 9,614ರಷ್ಟು ಸಿಡಿತಲೆಗಳಿದ್ದವು ಎಂದು ಹೇಳಿದೆ.




# ರಚಿತಾ ರಾಮ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ

ನಟಿ ರಚಿತಾ ರಾಮ್ ವಿರುದ್ಧ ಕಲಾವಿದರ ಸಂಘ ಮತ್ತು ಫಿಲ್ಮ್ ಚೇಂಬರ್ ಕಠಿಣ ಕ್ರಮ ತಗೆದುಕೊಳ್ಳಬೇಕು ಅಂತ ಸಂಜು ವೆಡ್ಸ್ ಗೀತಾ 2 ಸಿನಿಮಾದ ನಿರ್ದೇಶಕ ನಾಗಶೇಖರ್ ಒತ್ತಾಯಿಸಿದ್ದಾರೆ. ಸಿನಿಮಾ ಟೀಮ್ ಜೊತೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಆಗಮಿಸಿದ್ದ ನಾಗಶೇಖರ್, ತಮ್ಮದೇ ಸಿನಿಮಾದ ನಾಯಕಿ ರಚಿತಾ ರಾಮ್ ವಿರುದ್ಧ ಫಿಲ್ಮ್ ಚೇಂಬರ್‌ಗೆ ದೂರು ಸಲ್ಲಿಸಿದರು. ರಚಿತಾರಿಂದ ಆದ ತೊಂದರೆಯನ್ನು ಹಂಚಿಕೊಂಡರು.

ನಾಗಶೇಖರ್ ನಿರ್ದೇಶನದ ಸಂಜು ವೆಡ್ಸ್ ಗೀತಾ 2 ಸಿನಿಮಾದಲ್ಲಿ ರಚಿತಾ ರಾಮ್ ನಾಯಕಿಯಾಗಿ ನಟಿಸಿದ್ದಾರೆ. ಸಿನಿಮಾ ರಿಲೀಸ್ ಆಗುವ ಮುನ್ನ ಮತ್ತು ನಂತರ ಸಂಜು ವೆಡ್ಸ್ ಗೀತಾ 2 ಸಿನಿಮಾ ಪ್ರಚಾರಕ್ಕೆ ರಚಿತಾ ಭಾಗಿಯಾಗಿಲ್ಲ. ಹಾಗಾಗಿ ನಟಿಯ ನಡೆಯ ವಿರುದ್ಧ ಚಿತ್ರತಂಡ ತಿರುಗಿ ಬಿದ್ದಿದ್ದು ನಾವು ಇಂತಹ ಕಲಾವಿದರಿಗೆ ಕಠಿಣ ಕ್ರಮ ತೆಗೆದುಕೊಳ್ಬೇಕು ಅಂತ ಆಗ್ರಹಿಸುತ್ತೇವೆ ಎಂದಿದ್ದಾರೆ. ನಮ್ಮ ಸಿನಿಮಾ ಪ್ರಚಾರಕ್ಕೆ ರಚಿತಾ ರಾಮ್ ಒಂಚೂರು ಸಪೋರ್ಟ್‌ಕೊಟ್ಟಿಲ್ಲ. ರಾಕ್‌ಲೈನ್ ವೆಂಕಟೇಶ್ ಅವರು ಮನವೊಲಿಸಲು ಪ್ರಯತ್ನಿಸಿದ್ರು. ರಚಿತಾ ಒಪ್ಪಿಲ್ಲ. ರಮ್ಯಾ, ತಮನ್ನಾ ಎಲ್ಲರಿಗೂ ಸಿನಿಮಾ ಮಾಡಿದ್ದೀನಿ. ಆದ್ರೆ ಇಂತಹ ಸಮಸ್ಯೆ ಯಾವ ನಟಿಯೂ ಕೊಟ್ಟಿಲ್ಲ. ಸಿನಿಮಾಗೆ ಇಷ್ಟು ದಿನ ಪ್ರದರ್ಶನ ಕಂಡರೂ ಒಂದು ದಿನವೂ ಸಪೋರ್ಟ್ ಕೊಟ್ಟಿಲ್ಲ. ಶಿವಣ್ಣ, ಉಪೇಂದ್ರ, ಸುದೀಪ್ ಅಂಥವ್ರೇ ಈ ಸಿನಿಮಾಗೆ ಸಪೋರ್ಟ್ ಕೊಟ್ಟಿದ್ದಾರೆ. ನಾವು ಪೇಮೆಂಟ್ ಕಮ್ಮಿ ಕೊಟ್ಟಿಲ್ಲ. ನಟಿ ರಚಿತಾ ರಾಮ್ ವಿರುದ್ಧ ಹಾಗೂ ಕನ್ನಡ ಸಿನಿಮಾಗೆ ಥಿಯೇಟರ್ ಸಮಸ್ಯೆ ಕುರಿತು ತುಂಬಾ ನಷ್ಟ ಅನುಭವಿಸಿದ್ದೇವೆ ಅಂತ ಫಿಲ್ಮ್ ಚೇಂಬರ್ಗೆ ನಿರ್ದೇಶಕ ನಾಗಶೇಖರ್, ನಟ ಶ್ರೀನಗರ ಕಿಟ್ಟಿ ದೂರು ನೀಡಿದ್ದಾರೆ. ಶ್ರೀನಗರ ಕಿಟ್ಟಿ ಮತ್ತು ರಚಿತಾ ರಾಮ್ ಕಾಂಬಿನೇಷನ್ ನಲ್ಲಿ ಸಂಜು ವೆಡ್ಸ್ ಗೀತಾ 2 ಸಿನಿಮಾ ಮೂಡಿ ಬಂದಿದ್ದು, ಅತ್ಯುತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಛಲವಾದಿ ಕುಮಾರ್ ಅವರು ಈ ಸಿನಿಮಾವನ್ನು ನಿರ್ಮಾಣ ಮಾಡಿದ್ದಾರೆ.



# ನಟಿ ಸಮಂತಾಗೆ ಮಧ್ಯ ರಸ್ತೆಯಲ್ಲಿ ಕಿರುಕುಳ

ನಟಿ ಸಮಂತಾ ರುತ್ ಪ್ರಭು ಮುಂಬೈನಲ್ಲಿದ್ದಾರೆ. ಅಲ್ಲಿಯೇ ಅವರು ಜಿಮ್‌ಗೆ ತೆರಳಿದ್ದಾರೆ. ಅವರ ಫೋಟೋ, ವಿಡಿಯೋ ಚಿತ್ರಿಸುವ ಸಲುವಾಗಿ ಪಾಪರಾಜಿಗಳು ಮುಗಿಬಿದ್ದಿದ್ದಾರೆ. ಇದರಿಂದ ಸಮಂತಾ ಅವರಿಗೆ ಕೋಪ ಬಂದಿದೆ. ಬೇಡ ಎಂದರೂ ಕೂಡ ತಮ್ಮ ಫೋಟೋ ತೆಗೆಯಲು ಬಂದ ಪಾಪರಾಜಿಗಳ ಮೇಲೆ ಸಮಂತಾ ಗರಂ ಆಗಿದ್ದಾರೆ. ಈ ಸಂದರ್ಭದ ವಿಡಿಯೋ ವೈರಲ್ ಆಗಿದೆ. ಪಾಪರಾಜಿಗಳ ಈ ವರ್ತನೆಯನ್ನು ಕಿರುಕುಳ ಎಂದು ನೆಟ್ಟಿಗರು ಹೇಳಿದ್ದಾರೆ. ಸೆಲೆಬ್ರಿಟಿಗಳ ಖಾಸಗಿತನಕ್ಕೆ ಗೌರವ ಕೊಡಿ ಎಂದು ಜನರು ಕಮೆಂಟ್ ಮಾಡುತ್ತಿದ್ದಾರೆ.

ಸಾಮಾನ್ಯವಾಗಿ ಪಾಪರಾಜಿಗಳ ಎದುರು ಸೆಲೆಬ್ರಿಟಿಗಳು ಖುಷಿಯಿಂದಲೇ ಪೋಸ್ ನೀಡುತ್ತಾರೆ. ಆದರೆ ಕೆಲವು ಸಂದರ್ಭಗಳಲ್ಲಿ ಮಾತ್ರ ಕೋಪಗೊಳ್ಳುತ್ತಾರೆ. ನಟಿ ಸಮಂತಾ ಅವರು ಈಗ ಒಳ್ಳೆಯ ಮೂಡ್‌ನಲ್ಲಿ ಇಲ್ಲ ಎನಿಸುತ್ತದೆ. ಆ ಕಾರಣದಿಂದಲೇ ಅವರು ಪಾಪರಾಜಿಗಳಿಗೆ ಪೋಸ್ ನೀಡಲು ಒಪ್ಪಲಿಲ್ಲ. ಸಮಂತಾ ಪರವಾಗಿ ನೆಟ್ಟಿಗರು ಕಮೆಂಟ್ ಮಾಡಿದ್ದಾರೆ. ಸಮಂತಾ ಅವರು ಜಿಮ್‌ನಲ್ಲಿ ವರ್ಕೌಟ್ ಮುಗಿಸಿಕೊಂಡು ಹೊರಗೆ ಬಂದರು. ಆದರೆ ಅವರ ಕಾರು ಇನ್ನೂ ಬಂದಿರಲಿಲ್ಲ. ಸಮಂತಾ ಅವರು ಫೋನಿನಲ್ಲಿ ಮಾತನಾಡುತ್ತಾ ರಸ್ತೆಗೆ ಬಂದೇ ಬಿಟ್ಟರು. ಅಲ್ಲಿ ಅವರಿಗೆ ಕಾರು ಕಾಣಿಸಲಿಲ್ಲ. ಅಲ್ಲದೇ ಅವರು ಯಾವುದೋ ಟೆನ್ಷನ್‌ನಲ್ಲಿ ಇರುವುದು ಸ್ಪಷ್ಟವಾಗಿ ಕಾಣುತ್ತಿದೆ. ಹಾಗಿದ್ದರೂ ಕೂಡ ಅವರನ್ನು ಪಾಪರಾಜಿಗಳು ಮುತ್ತಿಕೊಂಡರು. ಇದರಿಂದ ಅವರಿಗೆ ಕಿರಿಕಿರಿ ಆಯಿತು. ದಯವಿಟ್ಟು ಇದನ್ನೆಲ್ಲ ನಿಲ್ಲಿಸಿ.. ಎಂದು ಸಮಂತಾ ಅವರು ಕೂಗಾಡಿದ್ದಾರೆ. ಆದರೂ ಸಹ ಅವರ ಮಾತಿಗೆ ಪಾಪರಾಜಿಗಳು ಬೆಲೆ ಕೊಟ್ಟಿಲ್ಲ. ನಡು ರಸ್ತೆಯಲ್ಲಿ ನಟಿಯ ಫೋಟೋ, ವಿಡಿಯೋಗಾಗಿ ಈ ರೀತಿ ನಡೆದುಕೊಂಡ ಪಾಪರಾಜಿಗಳಿಗೆ ನೆಟ್ಟಿಗರು ಛೀಮಾರಿ ಹಾಕುತ್ತಿದ್ದಾರೆ. ಇನ್ನು ಸಮಂತಾ ಅವರು ಯಾವ ಕಾರಣದಿಂದ ಇಷ್ಟು ಟೆನ್ಷನ್‌ನಲ್ಲಿ ಇದ್ದರು ಎಂಬುದು ಸದ್ಯಕ್ಕೆ ಗೊತ್ತಾಗಿಲ್ಲ.




# ಜಾಲಿ ಎಲ್‌ಎಲ್‌ಬಿ-3


## ಸೀಕ್ರೆಟ್ ಬಿಚ್ಚಿಟ್ಟ ಅಕ್ಷಯ್

ಅಕ್ಷಯ್‌ಕುಮಾರ್ ಮುಖ್ಯಪಾತ್ರದಲ್ಲಿ ನಟಿಸಿರುವ ಜಾಲಿ ಎಲ್‌ಎಲ್‌ಬಿ-3 ಸಿನಿಮಾ ಇದೇ ಸೆಪ್ಟಂಬರ್‌ನಲ್ಲಿ ತೆರೆ ಕಾಣಲು ತಯಾರಿಯನ್ನ ನಡೆಸಿದೆ. ಸದ್ಯ ಅಕ್ಷಯ್‌ಕುಮಾರ್ ಕಣ್ಣಪ್ಪ ಸಿನಿಮಾದ ಪ್ರಮೋಷನ್‌ನಲ್ಲಿ ಬ್ಯುಸಿಯಾಗಿದ್ದಾರೆ. ಹೌಸ್‌ಫುಲ್-5 ಸಿನಿಮಾದ ಸಕ್ಸಸ್‌ನ ಹ್ಯಾಂಗೋವರ್‌ನಲ್ಲಿ ತೇಲಾಡುತ್ತಿರುವ ಅಕ್ಷಯ್ ಕುಮಾರ್ ಇತ್ತೀಚಿನ ಸಂದರ್ಶನವೊಂದರಲ್ಲಿ ತಮ್ಮ ಮುಂದಿನ ಸಿನಿಮಾ ಜಾಲಿ ಎಲ್‌ಎಲ್‌ಬಿ-3 ಬಗ್ಗೆ ಮಾತ್ನಾಡಿದ್ಧಾರೆ.

ಅಕ್ಷಯ್‌ಕುಮಾರ್ ಅಭಿನಯದ ಸ್ಕೈ ಫೋರ್ಸ್, ಕೇಸರಿ-2, ಹೌಸ್‌ಫುಲ್-5 ಸಿನಿಮಾಗಳು ಈ ವರ್ಷ ತೆರೆಕಂಡು ಪ್ರೇಕ್ಷಕರಿಗೆ ಬರಪೂರ ಮನರಂಜನೆ ನೀಡಿವೆ. ಕಣ್ಣಪ್ಪ ಸಿನಿಮಾದಲ್ಲಿ ಅಕ್ಷಯ್ ಕುಮಾರ್ ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಈ ಚಿತ್ರದ ಸಂದರ್ಶನದ ವೇಳೆ ಜಾಲಿ ಎಲ್‌ಎಲ್‌ಬಿ ಪಾರ್ಟ್-3 ಬಗೆಗಿನ ಸೀಕ್ರೆಟ್ ಬಿಚ್ಚಿಟ್ಟಿದ್ದಾರೆ. ಜಾಲಿ ಎಲ್‌ಎಲ್‌ಬಿ ಪಾರ್ಟ್-1, ಪಾರ್ಟ್-2 ಸಿನಿಮಾಗಳಂತೆ ಪಾರ್ಟ್-3 ಕೂಡಾ ನೈಜ ಘಟನೆಯಾಧಾರಿತ ಸಿನಿಮಾ ಎಂದು ಹೇಳಿದ್ದಾರೆ. ಜೊತೆಗೆ ಜಾಲಿ ಎಲ್‌ಎಲ್‌ಬಿ-1, ಪಾರ್ಟ್-2 ಸಿನಿಮಾದಲ್ಲಿ ಅರ್ಷದ್ ವಾರ್ಸಿ ಜೊತೆಗೆ ಕೆಲಸ ಮಾಡಿರುವ ಬಗ್ಗೆ ಮಾತಾಡಿದ್ದಾರೆ. ಇದೀಗ ಪಾರ್ಟ್-3 ಸಿನಿಮಾದಲ್ಲೂ ಅರ್ಷದ್ ಜೊತೆ ಕೆಲಸ ಮಾಡಿರುವ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಅಂದಹಾಗೆ ಈ ಪಾರ್ಟ್-3 ಸಿನಿಮಾದಲ್ಲಿ ಅಕ್ಷಯ್‌ಕುಮಾರ್ ಜೊತೆ ಅರ್ಷದ್ ವಾರ್ಸಿ, ಅಮೃತಾ ರಾವ್, ಹುಮಾ ಖುರೇಶಿ, ಸೌರಭ್ ಶುಕ್ಲಾ, ಅನ್ನು ಕಪೂರ್ ಸೇರಿದಂತೆ ಅತೀ ದೊಡ ತಾರಾಗಣ ಈ ಚಿತ್ರದಲ್ಲಿರಲಿದೆ. ಹೌಸ್‌ಫುಲ್-5 200 ಕೋಟಿ ರೂ. ಕ್ಲಬ್ ಸೇರಿ ಯಶಸ್ವಿ ಪ್ರದರ್ಶನ ಕಾಣುತ್ತಿದೆ. ಇದರ ಬೆನ್ನಲ್ಲೇ ಕಣ್ಣಪ್ಪ ಸಿನಿಮಾ ತೆರೆಗೆ ಸಿದ್ದವಾಗುತ್ತಿದೆ. ಇನ್ನೆರಡು ತಿಂಗಳು ಕಳೆದರೆ ಜಾಲಿ ಎಲ್‌ಎಲ್‌ಬಿ-3 ಸಿನಿಮಾ ಕೂಡಾ ತೆರೆಗೆ ಬರಲಿದೆ. ಅಕ್ಷಯ್ ಕುಮಾರ್ ನಟನೆಯ ಚಿತ್ರಗಳು ಬ್ಯಾಕ್ ಟು ಬ್ಯಾಕ್ ಥಿಯೇಟರ್‌ಗೆ ಎಂಟ್ರಿಕೊಡುತ್ತಿವೆ.



# ಕಣ್ಣಪ್ಪ ನೋಡಿ ವಿಷ್ಣು ಮಂಚು ಮೆಚ್ಚಿದ ರಜನಿಕಾಂತ್



ಕಳೆದ 30 ವರ್ಷಗಳ ಹಿಂದಿನ ಸ್ಮರಣೀಯ ಕ್ಷಣಗಳು ಮತ್ತು ಚಿತ್ರರಂಗದ ಸಂಭ್ರಮದ ನಡುವೆ, ಭಾರತೀಯ ಚಿತ್ರರಂಗದ ಇಬ್ಬರು ದಿಗ್ಗಜರಾದ ಸೂಪರ್‌ಸ್ಟಾರ್ ರಜನಿಕಾಂತ್, ನಟ ಮೋಹನ್ ಬಾಬು ಚೆನ್ನೈನಲ್ಲಿ ಮತ್ತೆ ಒಂದಾದರು. ಇದಕ್ಕೆ ಕಾರಣಕ್ಕೆ 'ಪೆದರಾಯುಡು' ಸಿನಿಮಾವು ಜೂನ್ 15, 1995ರಂದು ತೆರೆಕಂಡಿತ್ತು. ಇದೀಗ 30 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಇಬ್ಬರೂ ಸ್ಟಾರ್ ನಟರು, ವಿಷ್ಣು ಮಂಚು ನಟನೆಯ 'ಕಣ್ಣಪ್ಪ' ಸಿನಿಮಾ ವೀಕ್ಷಿಸಿ ಹಳೇ ನೆನಪಿಗೆ ಹೊರಳಿದರು.

ರವಿ ರಾಜ ಪಿನಿಸೆಟ್ಟಿ ನಿರ್ದೇಶನದಲ್ಲಿ ಮೂಡಿಬಂದ ಪೆದರಾಯುಡು' ಸಿನಿಮಾ, ಅಂದಿನ ಕಾಲದಲ್ಲಿ ಬ್ಲಾಕ್‌ಬಸ್ಟರ್ ಹಿಟ್ ಆಗಿತ್ತು. ಗಟ್ಟಿ ಕಥಾ ಶೈಲಿ ನೆನಪಿನಲ್ಲಿ ಉಳಿಯುವ ಅಭಿನಯಗಳು ಮತ್ತು ಅದ್ವಿತೀಯ ಮಾಸ್ ಆಕರ್ಷಣೆಯಿಂದ ತೆಲುಗು ಚಿತ್ರರಂಗದಲ್ಲಿ ಈ ಚಿತ್ರ ಶಾಶ್ವತವಾಗಿ ಉಳಿದಿದೆ.




ಈ ಚಿತ್ರ 30 ವರ್ಷ ಪೂರೈಸಿದ ಬೆನ್ನಲ್ಲೇ ರಜನಿಕಾಂತ್ ಮತ್ತು ಮೋಹನ್ ಬಾಬು ಒಂದೆಡೆ ಸೇರಿ ಕಣ್ಣಪ್ಪ ಚಿತ್ರ ವೀಕ್ಷಿಸಿದರು. ಅಂದಹಾಗೆ ಜೂನ್ 27ರಂದು ಜಾಗತಿಕ ಮಟ್ಟದಲ್ಲಿ ಪ್ಯಾನ್ ಇಂಡಿಯಾ ಲೆವೆಲ್‌ನಲ್ಲಿ ಕಣ್ಣಪ್ಪ ಸಿನಿಮಾ ಬಿಡುಗಡೆಗೊಳ್ಳಲಿದೆ.

ಈ ಚಿತ್ರದಲ್ಲಿ ಶಿವನ ಭಕ್ತರಾದ ಕಣ್ಣಪ್ಪನ ಕಥೆಯನ್ನು ವಿಶಿಷ್ಟವಾಗಿ ಆವರಿಸಿಕೊಂಡಿದ್ದಾರೆ.

ಚಿತ್ರ ವೀಕ್ಷಿಸಿದ ಬಳಿಕ ರಜನಿಕಾಂತ್ ಕೊಂಚ ಭಾವುಕರಾಗಿದ್ದಾರೆ. ಇದು ಅಸಾಧಾರಣ ಚಿತ್ರ. ಭಾವನೆ, ದೃಶ್ಯ ವೈಭವ ಮತ್ತು ಆಧ್ಯಾತ್ಮ- all extraordinary ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಪೆದ್ದಿ ಸಿನಿಮಾದ ಭರ್ಜರಿ ಒಟಿಟಿ ಡೀಲ್



ರಾಮ್ ಚರಣ್ ಮತ್ತೊಮ್ಮೆ ಹಳ್ಳಿಗನ ವೇಷ ಧರಿಸಿದ್ದಾರೆ ಪೆದ್ದಿ ಸಿನಿಮಾನಲ್ಲಿ. ಕನ್ನಡದ ಸ್ಟಾರ್ ನಟ ಶಿವರಾಜ್ ಕುಮಾರ್ ಸಹ ಪ್ರಮುಖ ಪಾತ್ರದಲ್ಲಿ ನಟಿಸುತ್ತಿರುವ ಪೆದ್ದಿ ಸಿನಿಮಾನಲ್ಲಿ ರಾಮ್ ಚರಣ್, ಹಳ್ಳಿಯ ಲೋಕಲ್ ಕ್ರಿಕೆಟ್ ಸ್ಟಾರ್ ಪಾತ್ರದಲ್ಲಿ ನಟಿಸಿದ್ದಾರೆ. ಸಿನಿಮಾದ ನಾಯಕಿ ಜಾನ್ವಿ ಕಪೂರ್. ಸಿನಿಮಾದ ಚಿತ್ರೀಕರಣ ಪ್ರಾರಂಭ ಆದಾಗಿನಿಂದಲೂ ನಿರೀಕ್ಷೆ ಹುಟ್ಟಿಸಿದೆ. ಸಿನಿಮಾದ ಚಿತ್ರೀಕರಣ ಬಹುತೇಕ ಮುಗಿಯುತ್ತಾ ಬಂದಿದೆ.

ಸಿನಿಮಾದ ಮಾರಾಟ ಪ್ರಕ್ರಿಯೆ ಆರಂಭವಾಗಿದೆ. ದೊಡ್ಡ ಒಟಿಟಿ ಡೀಲ್ ಅನ್ನೇ ಮಾಡಿಕೊಂಡಿದೆ ಸಿನಿಮಾ. 'ಆರ್‌ಆರ್‌ಆರ್' ಸಿನಿಮಾದ ಬಳಿಕ ರಾಮ್ ಚರಣ್ ಗ್ಲೋಬಲ್ ಸ್ಟಾರ್ ಆಗಿದ್ದಾರೆ. ಅವರಿಗೆ ವಿಶ್ವಮಟ್ಟದಲ್ಲಿ ಅಭಿಮಾನಿಗಳಿದ್ದಾರೆ. ಹಲವು ದೇಶಗಳಲ್ಲಿ ರಾಮ್ ಚರಣ್ ಸಿನಿಮಾ ವೀಕ್ಷಿಸುತ್ತಾರೆ.

ಇದೆಲ್ಲವನ್ನೂ ಗಮನದಲ್ಲಿಟ್ಟುಕೊಂಡು ಅವರ ಪೆದ್ದಿ ಸಿನಿಮಾಕ್ಕೆ ಭಾರಿ ದೊಡ್ಡ ಮೊತ್ತವನ್ನು ನೆಟ್‌ಫ್ಲಿಕ್ಸ್ ಮುಂಗಡವಾಗಿ ನೀಡಿ ಖರೀದಿ ಮಾಡಿದೆ. ಮೂಲಗಳ ಪ್ರಕಾರ ಪೆದ್ದಿ ಸಿನಿಮಾದ ಎಲ್ಲಾ ಭಾಷೆಯ ಹಕ್ಕುಗಳನ್ನು ಬರೋಬ್ಬರಿ 105 ಕೋಟಿ ರೂಪಾಯಿ ಹಣ ನೀಡಿ ಖರೀದಿ ಮಾಡಿದೆಯಂತೆ ನೆಟ್‌ಫ್ಲಿಕ್ಸ್. ಪೆದ್ದಿ ಸಿನಿಮಾದ ಎಲ್ಲಾ ಭಾಷೆಯ ಆವೃತ್ತಿಯನ್ನು ನೆಟ್‌ಫ್ಲಿಕ್ಸ್ ಖರೀದಿ ಮಾಡಿದ್ದು, ನೆಟ್‌ಫ್ಲಿಕ್ಸ್ ರಿಲೀಸ್‌ಗಾಗಿ ವಿಶೇಷ ಪ್ರಚಾರದ ಒಪ್ಪಂದವನ್ನು ಸಹ ನಟರೊಡನೆ ಮಾಡಿಕೊಳ್ಳಲಾಗಿದೆ ಎನ್ನಲಾಗುತ್ತಿದೆ. ತೆಲುಗು ಸಿನಿಮಾ ಒಂದು ಇಷ್ಟು ದೊಡ್ಡ ಮೊತ್ತಕ್ಕೆ ಸೇಲ್ ಆದ ಇತಿಹಾಸ ಈ ವರೆಗೆ ಇಲ್ಲ ಎನ್ನಲಾಗುತ್ತಿದೆ. ಪೆದ್ದಿ ಸಿನಿಮಾ ಲೋಕಲ್ ಕತೆಯನ್ನು ಒಳಗೊಂಡಿದ್ದರೂ ಸಹ ಹೈಎಂಡ್ ತಂತ್ರಜ್ಞಾನ ಬಳಸಿ ಚಿತ್ರೀಕರಣ ಮಾಡಲಾಗುತ್ತಿದೆ. ಅತ್ಯಾಧುನಿಕ ಕ್ಯಾಮೆರಾ ಮತ್ತು ಸೌಂಡ್ ತಂತ್ರಜ್ಞಾನವನ್ನು ಸಿನಿಮಾನಲ್ಲಿ ಬಳಸಲಾಗುತ್ತಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**